ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೧

ಪಟ್ಟಿ – ೦೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ನಾಲ್ಕನೇ ಅಧಿವೇಶನ

ಗುರುವಾರ, ದಿನಾಂಕ : ೧೨ನೇ ಡಿಸೆಂಬರ್, ೨೦೨೪

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

## ಪೊಲೀಸ್ ಇಲಾಖೆಯಲ್ಲಿನ ಹುದ್ದೆಗಳ ಕುರಿತು

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೧ (೪೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೊಲೀಸ್ ಇಲಾಖೆಯಲ್ಲಿ ಎ.ಎಸ್.ಐ., ಪಿ.ಎಸ್.ಐ. ಹುದ್ದೆಗಳ ಶೇ.೭೦/೩೦ ರಷ್ಟು ಅನುಪಾತವಿದ್ದು, ಬೇರೆ ಇಲಾಖೆಯಲ್ಲಿರುವ ಶೇ.೫೦/೫೦ ರಷ್ಟು ಅನುಪಾತವಿದ್ದು, ಈ ಅನುಪಾತವನ್ನು ಪೊಲೀಸ್ ಇಲಾಖೆಯಲ್ಲಿ ಬದಲಾವಣೆ ಮಾಡಲು ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಸರ್ಕಾರವು ಯಾವ ಕಾಲಮಿತಿಯೊಳಗೆ ಈ ತಾರತಮ್ಯವನ್ನು ಸರಿಪಡಿಸಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ಹಾಲಿ ಖಾಲಿ ಇರುವ ಠಾಣವಾರು ಮಜೂರಾದ ಪಿ.ಎಸ್.ಐ., ಹುದ್ದೆಗಳ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಠಾಣವಾರು ಪಿ.ಎಸ್.ಐ., ಹುದ್ದೆಗಳ ಸಂಖ್ಯೆ ಎಷ್ಟು ; (ಠಾಣೆವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಕಾರಾಗೃಹ ಮತ್ತು ಅಗ್ನಿಶಾಮಕ ಇಲಾಖೆಯ ಎ.ಎಸ್.ಐ., ಮತ್ತು ಪಿ.ಎಸ್.ಐ., ಗಳು ವಾರ್ಷಿಕ ೩೦ ದಿನಗಳ ವೇತನ ಪಡೆಯುತ್ತಿದ್ದು ಪೊಲೀಸ್ ಇಲಾಖೆಯಲ್ಲಿಯೂ ಎ.ಎಸ್.ಐ., ಮತ್ತು ಪಿ.ಎಸ್.ಐ ಗೆಜೆಟೆಡ್ ೧೫ ದಿನಗಳ ವೇತನ ಬದಲಾಗಿ ಗೆಜೆಟೆಡ್ ೩೦ ದಿನಗಳ ವೇತನ ನೀಡಲು ಸರ್ಕಾರ ಯೋಚಿಸಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಬದಲಾವಣೆಯನ್ನು ಸರಿಪಡಿಸಲಾಗುವುದು ?

## ದಾಖಲಾದರೂ ಕಾನೂನು ಕ್ರಮ ಕೈಗೊಳ್ಳದೇ ಇರುವ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೨ (೪೫೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ: ೦೮.೧೦.೨೦೨೪ ರಂದು ಬೀದರ್ ಜಿಲ್ಲೆ ಹುಮನಾಬಾದ್ ತಾಲ್ಲೂಕಿನ ಹಳ್ಳಿಖೇಡ ಬಿ. ಪಟ್ಟಣದ ಪುರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಕೊಠಡಿ ಉದ್ಘಾಟನೆ ಸಮಾರಂಭದಲ್ಲಿ ಗಲಭೆ/ಘಟನೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಘಟನೆ ಪೂರ್ಣ ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಈ ಘಟನೆ ಸಂಬಂಧವಾಗಿ ದಿನಾಂಕ: ೧೦.೧೦.೨೦೨೪ ರಂದು ಹಳ್ಳಿಖೇಡ ಬಿ. ಪೊಲೀಸ್ ಠಾಣೆಯಲ್ಲಿ ಎಫ್. ಐ.ಆರ್., ದಾಖಲಾಗಿರುವುದು ನಿಜವಲ್ಲವೇ ; (ಎಫ್. ಐ.ಆರ್. ದಾಖಲಾಗಿರುವವರ ಹೆಸರು ಸಮೇತ ವಿವರ ಒದಗಿಸುವುದು)

(ಇ) ಮೇಲ್ಕಂಡ ಪ್ರಕರಣದಲ್ಲಿ ಮೊದಲು ಹಳ್ಳಿಖೇಡ ಬಿ. ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಿ ಅನಂತರ ಈ ಪ್ರಕರಣವನ್ನು ಬೀದರ್ ಗಾಂಧಿ, ಗಂಜ್ ಪೊಲೀಸ್ ಠಾಣೆಗೆ ವರ್ಗಾಯಿಸಿರುವುದಕ್ಕೆ ಕಾರಣವೇನು ;

(ಈ) ಮೇಲ್ಕಂಡ ಪ್ರಕರಣ ದಾಖಲಾಗಿ ಸುಮಾರು ೦೨ ತಿಂಗಳಾದರೂ ಪ್ರಕರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಇಲ್ಲಿಯವರೆಗೆ ಯಾವುದೇ ಕ್ರಮಗಳನ್ನು ಕೈಗೊಳ್ಳದಿರಲು ಕಾರಣವೇನು ;

(ಉ) ಮೇಲ್ಕಂಡ ಪ್ರಕರಣ ಹಾಗೂ ಭಾಗಿಯಾಗಿರುವವರ ಬಗ್ಗೆ ಕ್ರಮ ಕೈಗೊಳ್ಳುವಲ್ಲಿ ವಿಳಂಭವಾಗಿರುವುದು ಇಲಾಖೆಯ ವೈಫಲ್ಯಕ್ಕೆ ಕಾರಣವಲ್ಲವೇ ; ಹಾಗಿದ್ದಲ್ಲಿ, ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟ ಆರೋಪಗಳ ಮೇಲೆ ತುರ್ತಾಗಿ ಕಠಿಣ ಕ್ರಮಗಳನ್ನು ಕೈಗೊಳ್ಳುವುದೇ ?

## ಶಿಷ್ಟಾಚಾರ ಉಲ್ಲಂಘನೆಯಾಗುತ್ತಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೩ (೪೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಚುನಾಯಿತ ಪ್ರತಿನಿಧಿಗಳ ಶಿಷ್ಟಾಚಾರ ಕುರಿತು ಸುತ್ತೋಲೆಗಳನ್ನು ಹೊರಡಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ ಜಿಟಗುಪ್ಪ ಊರು ಶಮತಾಬಾದ್ ರಸ್ತೆ ಶಂಕುಸ್ಥಾಪನೆ ಜಿಲ್ಲೆಗೆ ಸಂಬಂಧಪಟ್ಟ ಅಧಿಕಾರಿ ಹಾಗೂ ತಾಲ್ಲೂಕು ಅಧಿಕಾರಿಗಳು ಅಹ್ವಾನಿಸದೆ ವಿಧಾನ ಪರಿಷತ್ ಶಾಸಕರುಗಳಿಗೆ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಬಂದಿದ್ದಲ್ಲಿ, ಶಿಷ್ಟಾಚಾರ ಉಲ್ಲಂಘಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮವೇನು ;

(ಈ) ಶಿಷ್ಟಾಚಾರ ಉಲ್ಲಂಘನೆಯಂತಹ ಮುಜಗರ, ಅವಮಾನ ಪ್ರಸಂಗಗಳನ್ನು ತಪ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ?

## ಪೊಲೀಸ್ ಪ್ರಕರಣ ದಾಖಲಾಗಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೪ (೪೪೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಪೊಲೀಸ್ ಠಾಣೆಯಲ್ಲಿ ಪ್ರಕರಣಗಳು ಎಷ್ಟು ದಾಖಲಾಗಿವೆ ; ಮತ್ತು ಯಾವ ಯಾವ ಪ್ರಕರಣದಲ್ಲಿ ಎಷ್ಟು ಕೇಸ್ ದಾಖಲಾಗಿವೆ ; (ವಿವರ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ತಾಲ್ಲೂಕಿನಲ್ಲಿ ಹಲ್ಲೆ ಪ್ರಕರಣಗಳು ಜಾಸ್ತಿ ಜರುಗುತ್ತಿದ್ದು, ಪೊಲೀಸ್ ಇಲಾಖೆ ಕೈಗೊಂಡ ಕ್ರಮವೇನು ; (ಮಾಹಿತಿ ಒದಗಿಸುವುದು)

(ಇ) ದಾಖಲಾಗಿರುವ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಎಷ್ಟು ಜನರ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಕಾನೂನು ಕ್ರಮ ಕೈಗೊಳ್ಳದಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೫ (೪೪೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ ಬಿ ಪಟ್ಟಣದ ಪುರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಕೊಠಡಿ ಉದ್ಘಾಟನೆ ಸಮಾರಂಭವನ್ನು ಅಡ್ಡಿಪಡಿಸಿದ ೧೪ ಜನರ ಮೇಲೆ ಹಳ್ಳಿಖೇಡ ಬಿ ಪಟ್ಟಣದಲ್ಲಿರುವ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಿ, ಬೀದರ್ ಗಾಂಧಿಗಂಜ್ ಪೊಲೀಸ್ ಸರ್ಕಲ್ ಕಛೇರಿಗೆ ಸ್ಥಳಾಂತರ ಮಾಡಲು ಕಾರಣವೇನು ; (ವಿವರ ನೀಡುವುದು)

(ಆ) ಸದರಿ ಕೇಸನ್ನು ದಾಖಲಿಸಿ ಎರಡು ತಿಂಗಳಾದರೂ ಇಲ್ಲಿಯವರೆಗೆ ಯಾವುದೇ ಕಾನೂನು ರೀತಿ ಕ್ರಮ ಕೈಗೊಳ್ಳದಿರಲು ಕಾರಣವೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೫೬ (೫೧೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು. ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸಲು ಪ್ರಸ್ತುತ ಸಾಲಿನಲ್ಲಿ ನೀಡಿರುವ ಅನುದಾನ ಎಷ್ಟು ; ಹಾಗೂ ಈ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸ್ತುತ ಸಾಲಿನಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದಲ್ಲಿ ರಾಜ್ಯದ ಪ್ರವಾಸಿಗರಿಗೆ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ತೊಂದರೆಯಾಗಿರುವುದರಿಂದ ಪ್ರವಾಸೋದ್ಯಮವನ್ನು ಉತ್ತಮ ದರ್ಜೆಗೆ ಅಭಿವೃದ್ಧಿಪಡಿಸಲು ಇನ್ನೂ ಹೆಚ್ಚಿನ ಅನುದಾನವನ್ನು ನೀಡಲು ತೆಗೆದುಕೊಂಡಿರುವ ಕ್ರಮಗಳೇನು ?

## ಸರ್ಕಾರ ಆರ್ಥಿಕ ಇಲಾಖೆಯಿಂದ ಇಲಾಖೆಗಳಿಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೫೭ (೫೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩ ರಿಂದ ಇಲ್ಲಿಯವರೆಗೆ ಆರ್ಥಿಕ ಇಲಾಖೆಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಯಾವ ಯಾವ ಇಲಾಖೆಗಳಿಗೆ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸ್ತುತ ಸಾಲಿನಲ್ಲಿ ನೀಡಿರುವ ಹಣದಲ್ಲಿ ಎಲ್ಲಾ ಇಲಾಖೆಗಳು ಈ ಅನುದಾನವನ್ನು ಬಳಕೆ ಮಾಡಿ ಎಷ್ಟು ಯೋಜನೆಗಳನ್ನು ಪೂರ್ಣಗೊಳಿಸಿವೆ ಮತ್ತು ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ; ಪ್ರಾರಂಭವಾಗದಿರುವ ಕಾಮಗಾರಿಗಳು ಎಷ್ಟು ; (ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ೨೦೨೩–೨೪ನೇ ಸಾಲಿನಲ್ಲಿ ನೀಡಿರುವ ಅನುದಾನದಲ್ಲಿ ಎಲ್ಲಾ ಇಲಾಖೆಗಳ ಅಭಿವೃದ್ಧಿ ಯೋಜನೆಗಳನ್ನು ಪೂರ್ಣ ಪ್ರಮಾಣದಲ್ಲಿ ಮಾಡಲು ಹಣಕಾಸಿನ ಕೊರತೆ ಇರುವುದರಿಂದ ಸರ್ಕಾರ ಇನ್ನೂ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ?

## ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಕ್ರೀಡಾ ಸಾಮಾಗ್ರಿಗಳನ್ನು ನೀಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೩೫೮ (೫೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ರಾಜ್ಯದ ಶಾಲಾ– ಕಾಲೇಜುಗಳ ವಿದ್ಯಾರ್ಥಿಗಳಿಗೆ ಯಾವ ಯಾವ ಯೋಜನೆಗಳಡಿಯಲ್ಲಿ ಏನು ಕ್ರೀಡಾ ಸಾಮಗ್ರಿಗಳನ್ನು ನೀಡಿದೆ ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಕ್ರೀಡಾ ಇಲಾಖೆಯಿಂದ ರಾಜ್ಯದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಕ್ರೀಡೆಯನ್ನು ಹೆಚ್ಚಿನ ರೀತಿಯಲ್ಲಿ ಪ್ರೋತ್ಸಾಹಿಸಲು ಎಲ್ಲಾ ಬಗೆಯ ಕ್ರೀಡಾ ಸಾಮಗ್ರಿಗಳನ್ನು ನೀಡಲು ಸರ್ಕಾರ ಪ್ರತ್ಯೇಕವಾದ ಅನುದಾನವನ್ನು ನೀಡಲು ಕೈಗೊಂಡಿರುವ ಕ್ರಮಗಳೇನು ?

## ಕೆ.ಪಿ.ಎಸ್.ಸಿ ಯಿಂದ ೧೯೯೮ರ ಗೆಜೆಟೆಡ್ ಪ್ರೊಬೆಷನರಿ ನೇಮಕಾತಿ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೫೯ (೫೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಪಿ.ಎಸ್.ಸಿ. ಯಿಂದ ಗೆಜೆಟೆಡ್ ಪ್ರೊಬೆಷನರ್ ಗ್ರೂಪ್ ಎ ಮತ್ತು ಬಿ ೧೯೯೮ನೇ ಸಾಲಿನ ಪರಿಷ್ಕೃತ ಅಂತಿಮ ಆಯ್ಕೆ ಪಟ್ಟಿಯನ್ನು ಯಾವಾಗ ಪ್ರಕಟಿಸಲಾಯಿತು ; (ಪ್ರತಿ ನೀಡುವುದು)

(ಆ) ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ಗ್ರಾಮೀಣ ಕೃಪಾಂಕ ನೀಡಲು ಅವಕಾಶವಿತ್ತೇ ; ಹಾಗಿದ್ದಲ್ಲಿ, ಶೇಕಡ ಎಷ್ಟು ಪ್ರಮಾಣ ನೀಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ನೇಮಕಾತಿಯಲ್ಲಿ ಗ್ರಾಮೀಣ ಕೃಪಾಂಕದಡಿ ನೇಮಕಗೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ಹೆಸರು, ಹುದ್ದೆಯ ಪದನಾಮ, ರಿಜಿಸ್ಟರ್ ನಂಬರ್‌ಗಳನ್ನೊಳಗೊಂಡಂತೆ ವಿವರವಾದ ಮಾಹಿತಿಯೊಂದಿಗೆ ಪಟ್ಟಿ ನೀಡುವುದು)

(ಉ) ಸದರಿ ನೇಮಕಾತಿ ಪ್ರಕ್ರಿಯೆಯು ವಿಳಂಬವಾಗಲು ಕಾರಣಗಳೇನು ? (ವಿವರವಾದ ಮಾಹಿತಿ ನೀಡುವುದು)

## ಕಾನೂನು ಕ್ರಮ ಕೈಗೊಳ್ಳದಿರುವ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೩೬೦ (೪೩೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ ಬಿ ಪಟ್ಟಣದ ಪುರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಕೊಠಡಿ ಉದ್ಘಾಟನೆ ಸಮಾರಂಭವನ್ನು ಅಡ್ಡಿಪಡಿಸಿದ ೧೪ ಜನರ ಮೇಲೆ ಹಳ್ಳಿಖೇಡ ಬಿ ಪಟ್ಟಣದಲ್ಲಿರುವ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಿ, ಬೀದರ್ ಗಾಂಧಿಗಂಜ್ ಪೊಲೀಸ್ ಸರ್ಕಲ್ ಕಛೇರಿಗೆ ಸ್ಥಳಾಂತರ ಮಾಡಲು ಕಾರಣವೇನು ; (ವಿವರ ನೀಡುವುದು)

(ಆ) ಈ ಕೇಸನ್ನು ದಾಖಲಿಸಿ ಎರಡು ತಿಂಗಳಾದರೂ ಇಲ್ಲಿಯವರೆಗೆ ಯಾವುದೇ ಕಾನೂನು ರೀತಿ ಕ್ರಮ ಕೈಗೊಳ್ಳದಿರಲು ಕಾರಣವೇನು ? (ಮಾಹಿತಿ ನೀಡುವುದು)

## ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೩೬೧ (೪೧೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದ ಪೋಲಿಸ್ ಇಲಾಖೆ ಅಡಿಯಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; ಯಾವುವು ;

(ಆ) ಇವುಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಒಂದು ಹುದ್ದೆಯಿಂದ ಇನ್ನೊಂದು ಹುದ್ದೆಗೆ ಬಡ್ತಿ ನೀಡುವಾಗ ೩೭೧ಜೆ ಕಲಂ ಅಡಿಯಲ್ಲಿ ಬಡ್ತಿ ನೀಡಲಾಗುತ್ತಿದೆಯೇ ;

(ಈ) ಮುಖ್ಯ ಪೇದೆಯಿಂದ ASI ಹುದ್ದೆಗೆ ಬಡ್ತಿ ನೀಡದಿರಲು ಕಾರಣವೇನು ?

## ಅಗ್ನಿಶಾಮಕ ಠಾಣೆ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೬೨ (೪೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಟ್ಟಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಆಕಸ್ಮಿಕ ಬೆಂಕಿ ಅವಘಡಗಳು ಉಂಟಾದಾಗ ಬೆಂಕಿ ನಂದಿಸಲು ದೂರದ ಲಿಂಗಸೂರು ಅಗ್ನಿಶಾಮಕ ಠಾಣೆಯನ್ನು ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಟ್ಟಿ ಚಿನ್ನದ ಗಣಿ ಪ್ರದೇಶದಲ್ಲಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ಅನುಕೂಲವಾಗುವಂತೆ ಅಗ್ನಿಶಾಮಕ ಠಾಣೆ ಹಾಗೂ ಕಟ್ಟಡ ಯಾವಾಗ ಮಂಜೂರು ಮಾಡಲಾಗುವುದು ?

## ತಗ್ಗು ಪ್ರದೇಶಕ್ಕೆ ನೀರು ನುಗ್ಗದ ರೀತಿ ಬಡಾವಣೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೩೬೩ (೫೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪ರ ಅಕ್ಟೋಬರ್‌ನಲ್ಲಿ ಸುರಿದ ಮಳೆಗೆ ಬೆಂಗಳೂರಿನ ಹಲವು ಪ್ರದೇಶಗಳು ಜಲಾವೃತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅತಿ ಹೆಚ್ಚು ಜಲಾವೃತವಾದ ಪ್ರದೇಶಗಳು ಯಾವುವು ;

(ಆ) ಬಿಡಿಎ ವತಿಯಿಂದ ನಿರ್ಮಾಣವಾದ ಬಡಾವಣೆಗಳು ಸಹ ಜಲಾವೃತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಬಂದಿದ್ದಲ್ಲಿ, ಬಿಡಿಎ ವತಿಯಿಂದ ನಿರ್ಮಾಣವಾದ ಯಾವ ಬಡಾವಣೆಗಳು ಜಲಾವೃತವಾಗಿದ್ದವು ; ಜಲಾವೃತವಾಗಲು ಪ್ರಮುಖ ಕಾರಣಗಳು ಏನು ;

(ಇ) ಬಿಡಿಎ ವತಿಯಿಂದ ಬಡಾವಣೆಗಳು ನಿರ್ಮಾಣವಾಗುವಾಗ ನೀರಿನ ನೈಸರ್ಗಿಕ ಹರಿವನ್ನು ನೋಡದೆ/ತಿಳಿಯದೆ ಬಡವಾಣೆ ನಕ್ಷೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹೊಸದಾಗಿ ನಿರ್ಮಾಣವಾಗುತ್ತಿರುವ ಬಡಾವಣೆಗಳಲ್ಲಿ ಈ ರೀತಿ ಮಾಡಿದ ನಕ್ಷೆ/ಯೋಜನೆ ಬದಲಾವಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಶಿವರಾಮ ಕಾರಂತ ಬಡಾವಣೆ, ಸೋಮನಶೆಟ್ಟಿಹಳ್ಳಿ ಸೆಕ್ಟರ್–೭ ರಲ್ಲಿ ಎತ್ತರ ಪ್ರದೇಶವಾದ ಸರ್ವೆ ನಂ.೧/೭ ರಿಂದ೧/೫ರ ಮೂಲಕ ರಸ್ತೆ ಮತ್ತು ಚರಂಡಿಯನ್ನು ಮಾಡಿ ಗ್ರಾಮಠಾಣಾ ಪ್ರದೇಶದ ಸಮೀಪ ತಗ್ಗು ಪ್ರದೇಶದ ಸಮೀಪ ಅಂತ್ಯಗೊಳಿಸಿ, ಗ್ರಾಮಠಾಣಾ ಪ್ರದೇಶಕ್ಕೆ ನೀರು ನುಗ್ಗುವಂತೆ ನಕ್ಷೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ರಸ್ತೆಯನ್ನು ೧/೫ ಮೂಲಕ ಮುಂದುವರೆಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಉ) ಗ್ರಾಮಠಾಣಾ ಪಕ್ಕದಲ್ಲಿ ಸರ್ವೆ ನಂ ೧/೫ರ ಮೂಲಕ ರಸ್ತೆ ಮತ್ತು ಚರಂಡಿಯನ್ನು ಮುಂದುವರಿಸುವಂತೆ ಬಿ.ಡಿ.ಎಗೆ ಸಾರ್ವಜನಿಕರು ಮನವಿಯನ್ನು ನೀಡಿರುವರೇ ; ನೀಡಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಊ) ಶಿವರಾಮ ಕಾರಂತ ಬಡಾವಣೆಯಲ್ಲಿ ಕೆಲವು ದಲ್ಲಾಳಿಗಳು ರಸ್ತೆ ಮತ್ತು ಚರಂಡಿಯನ್ನು ಅಧಿಕಾರಿಗಳೊಂದಿಗೆ ಸೇರಿ ಬದಲಾವಣೆ

ಮಾಡಿಕೊಡುವುದಾಗಿ ಭರವಸೆ ನೀಡಿ ಸಾರ್ವಜನಿಕರಿಂದ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ದಲ್ಲಾಳಿಗಳಿಗೆ ಅಧಿಕಾರಿಗಳೊಂದಿಗೆ ಇರುವ ಸಂಪರ್ಕದ ಬಗ್ಗೆ ತನಿಖೆ ನಡೆಸಿ, ಸರ್ಕಾರ ಕೈಗೊಂಡ ಕ್ರಮವೇನು ?

## ಹಳೆಯ ಪಿಂಚಣಿ ಯೋಜನೆಯ ಜಾರಿಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೬೪ (೫೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಹಳೆಯ ಪಿಂಚಣಿ ಯೋಜನೆಗೆ ಒಳಪಟ್ಟ ನೌಕರರ ಸಂಖ್ಯೆ ಎಷ್ಟು ; ಹೊಸ ಪಿಂಚಣಿ ಯೋಜನೆಗೆ (ಎನ್‌ಪಿಎಸ್) ಒಳಪಟ್ಟ ನೌಕರರ ಸಂಖ್ಯೆ ಎಷ್ಟು ;

(ಇ) ಹೊಸ ಪಿಂಚಣಿ ಯೋಜನೆಗೆ ಒಳಪಟ್ಟ ಎಷ್ಟು ನೌಕರರು ಇಲ್ಲಿಯವರೆಗೆ ನಿವೃತ್ತರಾಗಿದ್ದಾರೆ ; ಅವರು ಪಡೆಯುತ್ತಿರುವ ಕನಿಷ್ಠ ಮತ್ತು ಗರಿಷ್ಠ ನಿವೃತ್ತಿ ವೇತನವೆಷ್ಟು ;

(ಈ) ಹಳೆಯ ಪಿಂಚಣಿ ಮರು ಜಾರಿಗೆ ಸರ್ಕಾರ ಸಮಿತಿಯನ್ನು ರಚಿಸಿದೆಯೇ ; ರಚಿಸಿದ್ದಲ್ಲಿ, ಇಲ್ಲಿಯವರೆಗೆ ಸದರಿ ಸಮಿತಿ ನಡೆಸಿದ ಸಭೆಗಳ ಸಂಖ್ಯೆ ಎಷ್ಟು ; ಎಷ್ಟು ರಾಜ್ಯಗಳಿಗೆ ತೆರಳಿ ಅಧ್ಯಯನ

ಮಾಡಿದ್ದಾರೆ ; ಸದರಿ ಸಮಿತಿಗೆ ವರದಿ ನೀಡಲು ಯಾವ ಕಾಲಮಿತಿಯನ್ನು ನೀಡಲಾಗಿದೆ ;

(ಉ) ಶೀಘ್ರವಾಗಿ ಹಳೆಯ ಪಿಂಚಣಿ ಯೋಜನೆ ಜಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮೇಲ್ವಿಚಾರಣೆ ಸಮಿತಿ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೩೬೫ (೫೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಮೇಲ್ವಿಚಾರಣೆಗೆ ರಾಜ್ಯದಲ್ಲಿ ಸಮಿತಿಯನ್ನು ನೇಮಕ ಮಾಡಲಾಗಿದೆಯೇ ; ಮಾಡಲಾಗಿದ್ದರೆ, ಎಷ್ಟು ಹಂತದ ಸಮಿತಿಯನ್ನು ಮಾಡಲಾಗಿದೆ ; ಸದರಿ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರನ್ನು ಯಾವ ಅರ್ಹತೆಯ ಆಧಾರದ ಮೇಲೆ ನೇಮಕ ಮಾಡಲಾಗಿದೆ ;

(ಆ) ಗ್ಯಾರಂಟಿ ಸಮಿತಿಯ ಅಧ್ಯಕ್ಷರು, ಸದಸ್ಯರಿಗೆ ನೀಡುವ ಗೌರವಧನ, ಭತ್ಯೆ ಮತ್ತು ಇತರ ಸೌಲಭ್ಯಗಳಾವುವು ;

(ಇ) ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿಯ ಕಾರ್ಯಗಳೇನು: ಸದರಿ ಸಮಿತಿಯು ರಚನೆಯಾದಾಗಿನಿಂದ ಇಲ್ಲಿಯವರೆಗೆ ಎಷ್ಟು ಸಭೆಗಳನ್ನು ನಡೆಸಿದೆ ; (ಜಿಲ್ಲೆ ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಈ) ಗ್ಯಾರಂಟಿ ಅನುಷ್ಠಾನ ಮೇಲ್ವಿಚಾರಣೆ ಸಮಿತಿಗೆ ನವೆಂಬರ್–೨೦೨೪ ರವರೆಗೆ ಮಾಡಿದ ವೆಚ್ಚ ಎಷ್ಟು ? (ಮಾಸಿಕವಾರು, ಜಿಲ್ಲಾವಾರು ವಿವರ ನೀಡುವುದು)

## ಬೆಂಗಳೂರು ಬಿಸಿನೆಸ್ ಕಾರಿಡಾರ್‌ಗೆ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೬೬ (೫೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಲಾಗುತ್ತಿರುವ ಬೆಂಗಳೂರು ಬಿಜಿನೆಸ್ ಕಾರಿಡಾರ್ (ಬಿಬಿಸಿ) ಗಾಗಿ ಎಷ್ಟು ಆದೇಶಗಳನ್ನು ಹೊರಡಿಸಲಾಗಿದೆ ; ಸದರಿ ಆದೇಶದ ಪ್ರತಿಗಳನ್ನು ನೀಡುವುದು ;

(ಆ) ಸದರಿ ಬಿಬಿಸಿಗಾಗಿ ಎಷ್ಟು ಗ್ರಾಮಗಳ ಎಷ್ಟು ಭೂಮಿಯನ್ನು ವಶಪಡಿಸಿಕೊಳ್ಳಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಬಿಬಿಸಿಗಾಗಿ ರೈತರಿಗೆ ನೀಡುತ್ತಿರುವ ಪರಿಹಾರವೆಷ್ಟು ; ಯಾವ ಕಾಯ್ದೆಯನ್ವಯ ಪರಿಹಾರ ನೀಡಲಾಗುತ್ತಿದೆ ; ಇದಕ್ಕೆ ರೈತರ ಆಕ್ಷೇಪವೇನು ;

(ಈ) ಶಿವರಾಮ ಕಾರಂತ ಬಡಾವಣೆಯಲ್ಲಿ ನಿರ್ಮಾಣವಾಗಿ ಭೂ ಸ್ವಾಧೀನದಿಂದ ಕೈಬಿಟ್ಟಿರುವ ಮನೆ ನಿವೇಶನಗಳಿಗೆ ಯಾವ ಮಾರ್ಗಸೂಚಿಯ ಪ್ರಕಾರ ಅಭಿವೃದ್ಧಿ ಶುಲ್ಕ ವಿಧಿಸಲಾಗುತ್ತಿದೆ ;

(ಉ) ರೈತರಿಗೆ ಪರಿಹಾರ ನೀಡಲು ಒಂದು ಕಾನೂನು, ರೈತರಿಗೆ ಶುಲ್ಕ ವಿಧಿಸುವಾಗ ಒಂದು ಕಾನೂನು ಅನ್ವಯಿಸುವುದು ಸೂಕ್ತವೇ ; ಈ ತಾರತಮ್ಮ ನೀತಿಯನ್ನು ಬಿಟ್ಟು ಹೊಸ ಮಾರ್ಗಸೂಚಿಯನ್ವಯ ರೈತರಿಗೆ ಭೂ ಪರಿಹಾರ ವಿತರಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ರಾಜ್ಯದ ನದಿಗಳ ಶುದ್ಧೀಕರಣ ಮತ್ತು ಒಳಚರಂಡಿ ಸಂಸ್ಕರಣ ಘಟಕಗಳ ಕಾರ್ಯನಿರ್ವಹಣೆ ಬಗ್ಗೆ

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೩೬೭ (೪೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ನದಿಗಳು ಯಾವುವು ; ಈ ಪೈಕಿ ಕಲುಷಿತಗೊಂಡಿರುವ/ಮಲೀನಗೊಂಡಿರುವ ನದಿಗಳು ಯಾವುವು ; ಮಲೀನಗೊಂಡಿರುವ ನದಿಗಳ ನೀರಿನಲ್ಲಿ ಕಂಡು ಬಂದಿರುವ ಹಾನಿಕಾರಕ ಅಂಶಗಳು ಯಾವುವು ;

(ಆ) ನದಿಗಳು ಮಲೀನಗೊಳ್ಳಲು ಪ್ರಮುಖ ಕಾರಣಗಳೇನು ; ನದಿಗಳು ಮಲೀನಗೊಂಡಿರುವ ಕುರಿತು ರಾಷ್ಟ್ರೀಯ ಹಸಿರು ನ್ಯಾಯಮಂಡಳಿಗೆ ರಾಜ್ಯ ಸರ್ಕಾರ ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ಉಲ್ಲೇಖಿಸಿರುವ ಪ್ರಮುಖ ಅಂಶಗಳೇನು ;

(ಇ) ಈ ನದಿಗಳಿಂದ ಯಾವ ಯಾವ ಜಿಲ್ಲೆಯ ಜನರಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ ;

(ಈ) ಮಲೀನಗೊಂಡಿರುವ ನದಿಗಳನ್ನು ಶುಚಿಗೊಳಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಾಕಿಕೊಂಡಿರುವ ಯೋಜನೆಗಳು ಯಾವುವು ; ಈ ಉದ್ದೇಶಕ್ಕೆ ಮೀಸಲಿಟ್ಟಿರುವ ಹಣ ಎಷ್ಟು ;

(ಉ) ನಗರ ತ್ಯಾಜ್ಯಗಳನ್ನು ನದಿಗಳಿಗೆ ಶುದ್ದೀಕರಿಸದೆ ಬೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತ್ಯಾಜ್ಯಗಳನ್ನು ಶುದ್ದೀಕರಿಸಿ ನದಿಗಳಿಗೆ ಬಿಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಊ) ಯಾವ ಯಾವ ನಗರಗಳಲ್ಲಿ ಒಳಚರಂಡಿ ಸಂಸ್ಕರಣ ಘಟಕ (ಪ್ಲಾಂಟ್) ಗಳನ್ನು ಅಳವಡಿಸಲಾಗಿದೆ ; ಅದರ ನಿರ್ವಹಣೆ ಯಾರು ಮಾಡುತ್ತಿದ್ದಾರೆ: ಒಳಚರಂಡಿ ಸಂಸ್ಕರಣ ಘಟಕ (ಪ್ಲಾಂಟ್) ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವುದರಲ್ಲಿ ಸರ್ಕಾರದ ಪಾತ್ರವೇನು ?

## ರಾಜ್ಯದಲ್ಲಿರುವ ಕೆರೆಗಳ ಒತ್ತುವರಿಗೆ ಸಂಬಂಧಪಟ್ಟ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೩೬೮ (೪೮೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ; ಕೆರೆಗಳ ಒತ್ತುವರಿ ಕುರಿತು ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆಯೇ ; ಸಮೀಕ್ಷೆ ಕೈಗೊಳ್ಳಲು ಬಾಕಿ ಇರುವ ಕೆರೆಗಳೆಷ್ಟು ; ಸಮೀಕ್ಷೆ ಕಾರ್ಯ ಯಾವಾಗ ಪೂರ್ಣಗೊಳ್ಳಲಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಒತ್ತುವರಿಯಾಗಿರುವ ಕೆರೆಗಳೆಷ್ಟು: ಒತ್ತುವರಿ ಆಗಿರುವ ಪ್ರಮಾಣ ಎಷ್ಟು ; ಕಳೆದ ೩ ವರ್ಷದಿಂದ ಎಷ್ಟು ಕೆರೆಗಳ ಒತ್ತುವರಿ ತೆರವು ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಕೆರೆಗಳ ವಿವರ ನೀಡುವುದು)

(ಇ) ಒತ್ತುವರಿ ತೆರವುಗೊಂಡ ಕೆರೆಗಳು ಸೇರಿದಂತೆ ರಾಜ್ಯಾದ್ಯಂತ ಕೆರೆಗಳಿಗೆ ಬೇಲಿ ಹಾಕಲಾಗಿದೆಯೇ ; ಬೇಲಿ ಇಲ್ಲದ ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಬೇಲಿ ಇಲ್ಲದ ಕೆರೆಗಳಿಗೆ ಬೇಲಿ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ೨ ವರ್ಷದಿಂದ ಎಷ್ಟು ಕೆರೆಗಳ ಹೂಳು ತೆಗೆಯಲಾಗಿದೆ ; ಇದಕ್ಕಾಗಿ ಮೀಸಲಿಟ್ಟಿರುವ ಹಾಗೂ ವೆಚ್ಚ ಮಾಡಿರುವ ಹಣ ಎಷ್ಟು ? (ಕೆರೆಗಳ ಹೂಳೆತ್ತಲು ಸಿದ್ಧಪಡಿಸಿರುವ ಯೋಜನೆಯ ವಿವರ ನೀಡುವುದು)

## ರಾಜ್ಯದಲ್ಲಿ ಹಲವಾರು ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ತುಂಬುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೩೬೯ (೪೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಸರ್ಕಾರದ ಸಚಿವಾಲಯ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳು ಹಾಗೂ ನಿಗಮ ಮಂಡಳಿಗಳಲ್ಲಿ ಮಂಜೂರಾಗಿರುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; ಈ ಪೈಕಿ ಹಾಲಿ ಖಾಲಿ ಇರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; (ಇಲಾಖೆವಾರು ಹುದ್ದೆವಾರು ವಿವರ ನೀಡುವುದು)

(ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ; ದೊಡ್ಡ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಇರುವುದರಿಂದ ದೈನಂದಿನ ಆಡಳಿತ ನಿರ್ವಹಣೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕರ್ನಾಟಕ ಸರ್ಕಾರದ ಸಚಿವಾಲಯ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಎಷ್ಟು ಜನ ಗುತ್ತಿಗೆ ಆಧಾರದ ಮೇಲೆ ನಿವೃತ್ತಿ ನೌಕರರ ನೇಮಕ ಮಾಡಲಾಗಿದೆ ; ಇವರಿಗೆ ಪ್ರತಿ ತಿಂಗಳು ನೀಡುತ್ತಿರುವ ವೇತನ ಎಷ್ಟು ; (ಇಲಾಖಾವಾರು ನಿವೃತ್ತ ನೌಕರರ ಹೆಸರಿನೊಂದಿಗೆ ಅವರಿಗೆ ನೀಡುತ್ತಿರುವ ವೇತನದ ವಿವರ ನೀಡುವುದು)

(ಈ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ; ಹುದ್ದೆಗಳ ಭರ್ತಿಗೆ ಹೊರಡಿಸಿರುವ ಅಧಿಸೂಚನೆಗಳೆಷ್ಟು ? (ಸಮಗ್ರ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹೆಚ್ಚುತ್ತಿರುವ ಕೊಲೆ, ಅತ್ಯಾಚಾರ ಪ್ರಕರಣಗಳನ್ನು ತಡೆಯುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೩೭೦ (೪೮೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪ನೇ ಸಾಲಿನ ನವೆಂಬರ್ ಅಂತ್ಯದವರೆಗೆ ರಾಜ್ಯಾದ್ಯಂತ ಕೊಲೆ, ಅತ್ಯಾಚಾರ, ಮಹಿಳೆ-ಮಕ್ಕಳ ಮೇಲಿನ ದೌರ್ಜನ್ಯ, ಗಲಭೆ, ಗ್ಯಾಂಗ್‌ವಾರ್ ಸೇರಿದಂತೆ ಅಪರಾಧ ಪ್ರಕರಣಗಳು ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ಎರಡು ವರ್ಷದಿಂದ ನಡೆದಿರುವ ಅಪರಾಧ ಪ್ರಕರಣಗಳ ವಿವರವನ್ನು ಜಿಲ್ಲಾವಾರು ನೀಡುವುದು ;

(ಆ) ಅಪರಾಧ ಪ್ರಕರಣಗಳು ಹೆಚ್ಚಳವಾಗಲು ಕಾರಣಗಳೇನು ; ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಸರ್ಕಾರ ವಿಫಲಗೊಂಡಿರುವುದು ನಿಜವೇ ;

(ಇ) ಎಷ್ಟು ಪ್ರಕರಣಗಳಲ್ಲಿ ಎಫ್.ಐ.ಆರ್. ದಾಖಲಾಗಿದೆ ; ಪತ್ತೆ ಹಚ್ಚಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಅಪರಾಧ ಕೃತ್ಯಗಳನ್ನು ತಡೆಯಲು ವಿಫಲವಾಗಿರುವ ಎಷ್ಟು ಜನ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ?

## ಬಿ.ಬಿ.ಎಂ.ಪಿ ಚುನಾವಣೆಯು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೧ (೪೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦ ರಲ್ಲಿ ಕೌನ್ಸಿಲ್ ಅವಧಿ ಮುಗಿದ ನಂತರ ಬಿಬಿಎಂಪಿಗೆ ಚುನಾವಣೆ ನಡೆಸದಿರಲು ಕಾರಣಗಳೇನು ; ವಾರ್ಡ್‌ಗಳ ವಿಂಗಡಣೆ ಕಾರ್ಯ ಪೂರ್ಣಗೊಂಡಿದೆಯೇ ; ಹಾಗಿದ್ದರೆ, ಚುನಾವಣೆ ವಿಳಂಬವಾಗಲು ಕಾರಣವೇನು ;

(ಆ) ಮೀಸಲಾತಿ ಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೇ ಇಲ್ಲದಿದ್ದರೆ, ಅದನ್ನು ಯಾವಾಗ ಸಿದ್ಧಪಡಿಸಲಾಗುತ್ತದೆ ;

(ಇ) ಪಾಲಿಕೆ ಚುನಾವಣೆ ವಿಳಂಬವಾಗುವುದನ್ನು ತಪ್ಪಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಡಿ–ಲಿಮಿಟೇಶನ್ ಮತ್ತು ಮೀಸಲಾತಿ ಪಟ್ಟಿಯನ್ನು ಸಿದ್ಧಪಡಿಸುವ ಜವಾಬ್ದಾರಿಯನ್ನು ಸರ್ಕಾರವು ಪರಿಗಣಿಸುತ್ತದೆಯೇ ; ಹಾಗಿದ್ದಲ್ಲಿ, ಅದರ ವಿವರಗಳು. ಇಲ್ಲದಿದ್ದರೆ, ಅದಕ್ಕೆ ಕಾರಣಗಳೇನು ;

(ಈ) ಬಿಬಿಎಂಪಿ ಚುನಾವಣೆಯನ್ನು ಯಾವಾಗ ನಡೆಸಲಾಗುವುದು ?

## ಹುದ್ದೆ, ಉನ್ನತೀಕರಣ, ಸೇವಾ ನಿಯಮ ತಿದ್ದುಪಡಿ ಹಾಗೂ ವರ್ಗಾವಣೆ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೨ (೪೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ವೃಂದದ ಗ್ರೂಪ್–ಸಿ ಹುದ್ದೆಯನ್ನು ಉನ್ನತೀಕರಿಸಿ ಗ್ರೂಪ್–ಬಿ (ಕಿರಿಯ ಶ್ರೇಣಿ) ವೃಂದವನ್ನು ಮಾಡಬೇಕಾದರೆ, ಈ ಜಿಲ್ಲಾ ವೃಂದದ ಹುದ್ದೆಯನ್ನು ರಾಜ್ಯ ವೃಂದದ ಹುದ್ದೆಯನ್ನಾಗಿ ಮಾರ್ಪಾಟು ಮಾಡುವುದು ಕಡ್ಡಾಯವೇ ; (ಪೂರಕ ಸರ್ಕಾರದ ಸುತ್ತೋಲೆ/ನಿಯಮಗಳ ಪ್ರತಿ ನೀಡುವುದು)

(ಆ) ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978ರಡಿಯ ಅಧಿಕಾರವನ್ನು ಚಲಾಯಿಸಿ ಸರ್ಕಾರವು ರಚಿಸುವ ನಿಯಮಗಳನ್ನು/ ತಿದ್ದುಪಡಿ ನಿಯಮಗಳನ್ನು ಅಧಿಸೂಚನೆ ಮುಖಾಂತರ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸದೆ, ಅಂತಿಮಗೊಳಿಸಿ ಜಾರಿಗೊಳಿಸಬಹುದೆ ; ಹೌದಾದಲ್ಲಿ, ಈ ಕುರಿತು ಸರ್ಕಾರದಲ್ಲಿರುವ ನಿಯಮಗಳ/ ಆದೇಶಗಳ ಪ್ರತಿ ನೀಡುವುದು ;

(ಇ) ಕರಡು ನಿಯುವುಗಳಿಗೆ ಬಂದಂತಹ ಆಕ್ಷೇಪಣೆಗಳನ್ನು ತಿರಸ್ಕರಿಸಿದಲ್ಲಿ, ಇವುಗಳ ಕಾರಣಗಳನ್ನು ಆಕ್ಷೇಪಣೆದಾರರಿಗೆ ನೀಡದೇ, ಸದರಿ ನಿಯಮಗಳನ್ನು ಅಂತಿಮಗೊಳಿಸಬಹುದೆ ; ಹೌದಾದಲ್ಲಿ, ಈ ಕುರಿತು ಸರ್ಕಾರದಲ್ಲಿರುವ ನಿಯಮಗಳ/ನ್ಯಾಯಾಲಯದ ಆದೇಶಗಳ ಪ್ರತಿ ನೀಡುವುದು ;

(ಈ) ಜೇಷ್ಠತಾ ಪಟ್ಟಿ ಸಿದ್ಧಪಡಿಸದೇ, ಸಕ್ಷಮ ಪ್ರಾಧಿಕಾರವು ಈ ಹುದ್ದೆಯ ನೌಕರರನ್ನು ವರ್ಗಾವಣೆ ಮಾಡಬಹುದೇ ? (ನಿಯಮಗಳ/ ಆದೇಶಗಳ ಪ್ರತಿ ನೀಡುವುದು)

## ಅಬಕಾರಿ ಇಲಾಖೆಯಲ್ಲಿ ಸಿ.ಎಲ್–೭ ಹೆಸರಿನಲ್ಲಿ ಭ್ರಷ್ಟಾಚಾರ ನಡೆಯುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೩ (೫೨೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆಯವತಿಯಿಂದ ಸಿ.ಎಲ್-೭ ಪರವಾನಗಿಯನ್ನು ಪಡೆಯಲು ಇರುವ ನಿಯಮಗಳೇನು ; ಕಳೆದ ೧೦ ವರ್ಷದಲ್ಲಿ ಎಷ್ಟು ಬಾರಿ ನಿಯಮಗಳನ್ನು ತಿದ್ದುಪಡಿ ಮಾಡಲಾಗಿದೆ; ರಾಜ್ಯಾದ್ಯಂತ ಪ್ರವಾಸೋದ್ಯಮದ ಹೆಸರಿನಲ್ಲಿ ನಿಯಮಗಳನ್ನು ಗಾಳಿಗೆ ತೂರಿ ಮದ್ಯ ಮಾರಾಟಕ್ಕೆ ಅನುಮತಿ ನೀಡಲಾಗುತ್ತಿದೆಯೇ ; ಹಾಗೂ ಈ ಹೆಸರಿನಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದನ್ನು ಸರ್ಕಾರ ಗಮನಹರಿಸಿದೆಯೇ ;

(ಆ) ಕಳೆದ ೧೦ ವರ್ಷಗಳಿಂದ ಇಲ್ಲಿಯವರೆಗೂ ಕೋಲಾರ, ಬೆಂಗಳೂರನ್ನು ಒಳಗೊಂಡಂತೆ ರಾಜ್ಯಾದ್ಯಂತ ಎಷ್ಟು ಸಿ.ಎಲ್-೭ ಪರವಾನಗಿಯನ್ನು ನೀಡಲಾಗಿದೆ ಸಿ.ಎಲ್-೭ ಪರವಾನಗಿಯನ್ನು ನೀಡುವ ಸಂದರ್ಭದಲ್ಲಿ ನಿಯಮದಂತೆ ಕಟ್ಟಡವನ್ನು ವಾಣಿಜ್ಯ ಉದ್ದೇಶಕ್ಕಾಗಿ ಅನುಮತಿ ಪಡೆಯಬೇಕು, ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ಸ್ವಚ್ಛತೆ ಹಾಗೂ ಕಟ್ಟಡದಲ್ಲಿ ಅಗ್ನಿಶಾಮಕ ಸೌಲಭ್ಯವನ್ನು ಹೊಂದಿರಬೇಕೆಂಬುದು ಕಡ್ಡಾಯವೇ ;

(ಇ) ಹಾಗಿದ್ದಲ್ಲಿ, ನಿಯಮದ ರೀತ್ಯಾ ನಡೆಯುತ್ತಿರುವ ಹಾಗೂ ನಿಯಮ ಉಲ್ಲಂಘಿಸಿರುವ ಮತ್ತು ಪರಿವಾನಗಿಯನ್ನು ಪಡೆಯದೆ ವಾಮ ಮಾರ್ಗದಿಂದ ವ್ಯಾಪಾರ ನಡೆಸುತ್ತಿರುವವರ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದಲ್ಲಿ ಮಹಿಳೆಯರ ಅತ್ಯಾಚಾರ ಪ್ರಕರಣದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೪ (೫೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೫ ವರ್ಷದ ಅವಧಿಯಿಂದ ಇಲ್ಲಿಯವರೆಗೂ ದಾಖಲಾಗಿರುವ ಮಹಿಳೆಯರ ಅತ್ಯಾಚಾರ ಪ್ರಕರಣಗಳ ಸಂಖ್ಯೆಯೆಷ್ಟು ; ದಾಖಲಾಗಿರುವ ಪ್ರಕರಣಗಳಲ್ಲಿ ಇದುವರೆಗೂ ಎಷ್ಟು ಅಪರಾಧಿಗಳಿಗೆ ಶಿಕ್ಷೆಯಾಗಿದೆ, ಎಷ್ಟು ಪ್ರಕರಣಗಳು ಬಾಕಿ ಇದೆ ; ಬಾಕಿ ಇದ್ದಲ್ಲಿ, ಕಾರಣಗಳೇನು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅತ್ಯಾಚಾರ ಪ್ರಕರಣದಲ್ಲಿ ದೇಶದಲ್ಲೇ ರಾಜ್ಯವು ಯಾವ ಸ್ಥಾನದಲ್ಲಿದೆ ಹಾಗೂ ಅತ್ಯಾಚಾರಕ್ಕೆ ಒಳಗಾದ ಸಂತ್ರಸ್ತೆಯರಿಗೆ ಸರ್ಕಾರದಿಂದ ಯಾವ ರೀತಿಯ ನೆರವನ್ನು ನೀಡಲಾಗುತ್ತಿದೆ ; ದೌರ್ಜನ್ಯಗಳನ್ನು ತಡೆಯಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಸರಿಯಾದ ಸಾಕ್ಷ್ಯಗಳನ್ನು ಸಂಗ್ರಹಿಸುವಲ್ಲಿ ಪೊಲೀಸ್ ಇಲಾಖೆಯು ವಿಫಲವಾಗಿರುವುದರಿಂದ ಅಪರಾಧಿಗಳು ಶಿಕ್ಷೆಯಿಂದ ತಪ್ಪಿಸುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಓಕಳಿಪುರಂ ನಿರ್ಮಾಣವಾಗಿರುವ ಅಷ್ಟಪಥ ರಸ್ತೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೫ (೫೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ಅಷ್ಟಪಥ ರಸ್ತೆಯ ಕಾಮಗಾರಿಯು ಎಂದು ಪ್ರಾರಂಭವಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ ; ಹಾಗೂ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು, ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ ಎಷ್ಟು ; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ ;

(ಆ) ಸರ್ಕಾರ ನೀಡಿರುವ ಸಮಯಕ್ಕೆ ಸರಿಯಾಗಿ ಕಾಮಗಾರಿ ಪೂರೈಸದಿದ್ದರೇ, ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ ;

(ಇ) ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿಗೆ ಟೆಂಡರ್‌ಗೆ ಅನುಮತಿ ನೀಡಲಾಗಿದೆ, ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು)

(ಈ) ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಒಂದು ಕಡೆ ರಸ್ತೆ ದೊಡ್ಡದಾಗಿದ್ದು, ತದನಂತರ ರಸ್ತೆ ಕಿರಿದಾಗಿರವುದರಿಂದ, ಟ್ರಾಫಿಕ್ ಜಾಮ್ ಆಗುತ್ತಿರುವುದು ಹಾಗೂ ಮಳೆಯ ನೀರಿನಿಂದ ಸಂಚಾರ ಮಾಡಲು ಕಷ್ಟವಾಗುತ್ತಿದ್ದು ಅಧಿಕಾರಿಗಳು ಗಮನಹರಿಸಿಲ್ಲವೇ, ಹಾಗಿದ್ದರೇ ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ; ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು ?

## ಮೆಟ್ರೋ ರೈಲ್ವೆ ನಿಲ್ದಾಣದಲ್ಲಿ ಶೌಚಾಲಯದ ಕೊರತೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೬ (೫೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಪ್ರತಿನಿತ್ಯ ಎಷ್ಟು ಜನರು ಮೆಟ್ರೋ ರೈಲಿನಲ್ಲಿ ಸಂಚಾರ ಮಾಡುತ್ತಾರೆ ಹಾಗೂ ಎಷ್ಟು ನಿಲ್ದಾಣಗಳನ್ನು ಹೊಂದಿದೆ ; ಕಳೆದ ೩ ವರ್ಷದ ಅವಧಿಯಲ್ಲಿ ಗಳಿಸಿರುವ ಲಾಭವೆಷ್ಟು ;

(ಆ) ಪ್ರತಿ ಮೆಟ್ರೋ ಸ್ಟೇಷನ್ ನಿಗಮದಿಂದ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ ಹಾಗೂ ಎಷ್ಟು ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ, ಇದರಲ್ಲಿ ಖಾಯಂ ಮತ್ತು ಗುತ್ತಿಗೆ ನೌಕರರ ಸಂಖ್ಯೆಯೆಷ್ಟು ;

(ಇ) ಕೆಂಪೇಗೌಡ ಮೆಟ್ರೋ ಸ್ಟೇಷನ್ ಒಳಗೊಂಡಂತೆ ಎಲ್ಲಾ ನಿಲ್ದಾಣಗಳಲ್ಲಿರುವ ಶೌಚಾಲಯ ಮತ್ತು ಮಹಿಳೆಯರು ಮಕ್ಕಳಿಗೆ ಹಾಲುಣಿಸಲು (ಆರೈಕೆ) ಎಷ್ಟು ಕೇಂದ್ರಗಳನ್ನು ನಿರ್ಮಿಸಲಾಗಿದೆ ;

(ಈ) ಪ್ರತಿ ನಿಲ್ದಾಣದಲ್ಲಿ ಕೇವಲ ಒಂದೇ ಒಂದು ಶೌಚಾಲಯ ಇರುವುದು ಹಾಗೂ ಮಹಿಳೆಯರು ಮಕ್ಕಳಿಗೆ ಹಾಲುಣಿಸುವ ಆರೈಕೆ ಕೇಂದ್ರಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೇ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ಹಾಗೂ ಇಷ್ಟು ವರ್ಷವಾದರೂ ಇದುವರೆಗೂ ಕ್ರಮ ಕೈಗೊಳ್ಳದಿರಲು ಸರ್ಕಾರಕ್ಕೆ ಇರುವ ತೊಂದರೆಯಾದರೂ ಏನು ?

## ಇತ್ತೀಚೆಗೆ ನಿವೃತ್ತಿ ಹೊಂದಿದ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುತ್ತಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೭ (೫೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಇತ್ತೀಚೆಗೆ ನಿವೃತ್ತಿ ಹೊಂದಿದ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುವುದನ್ನು ರದ್ದು ಪಡಿಸಿದ್ದರು ಕೆಲವು ಇಲಾಖೆಗಳು ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಹಾಗಿದ್ದಲ್ಲಿ, ಅಂತಹ ಇಲಾಖೆ ಮುಖ್ಯಸ್ಥರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ರಾಜ್ಯದ ೩೧ ಜಿಲ್ಲೆಗಳಲ್ಲಿಯೂ ನಿವೃತ್ತ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಇಲಾಖೆಗಳ ಯಾವ ಹುದ್ದೆಗಳಿಗೆ ನಿವೃತ್ತ ನೌಕರರನ್ನು ನೇಮಕ ಮಾಡಿಕೊಂಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ವಿವಿಧ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನೌಕರರನ್ನು ಸೇವೆಯಿಂದ ವಜಾಗೊಳಿಸಲು ವಿಳಂಬವಾಗುತ್ತಿರುವುದು ಏಕೆ ; ಸದರಿ ನೌಕರರನ್ನು ವಜಾಗೊಳಿಸದೇ ಇರಲು ಕಾರಣವೇನು , ಸರ್ಕಾರದ ನಿರ್ದೇಶನ ಉಲ್ಲಂಘಿಸಿ ನಿವೃತ್ತ ನೌಕರರನ್ನು ಮುಂದುವರೆಸಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಜರುಗಿಸಲಾಗುವುದು ? (ವಿವರ ನೀಡುವುದು)

## ೨೦೧೯ ರಿಂದ ಇಲ್ಲಿಯವರೆಗೆ ವಿವಿಧ ಇಲಾಖೆಗಳಿಂದ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳು ಹೊಂದಿರುವ ನೇಮಕಾತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೮ (೫೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯ ರಿಂದ ಇಲ್ಲಿಯವರೆಗೆ ವಿವಿಧ ಇಲಾಖೆಗಳಿಂದ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳು ಹೊರಡಿಸಲಾದ ನೇಮಕಾತಿ ಅಧಿಸೂಚನೆಗಳೆಷ್ಟು ; ಸದರಿ ನೇಮಕಾತಿ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಆ) ಈ ನೇಮಕಾತಿ ಪ್ರಕ್ರಿಯೆ ವಿಳಂಬವಾಗಲು ಕಾರಣವೇನು ; ನೇಮಕಾತಿ ಪ್ರಕ್ರಿಯೆ ವಿಳಂಬದಿಂದ ಅಭ್ಯರ್ಥಿಗಳು ಆತಂಕದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೇಮಕಾತಿ ವಿಳಂಬಕ್ಕೆ ಕಾರಣವಾಗುವ ನ್ಯಾಯಾಲಯಗಳ ಹಸ್ತಕ್ಷೇಪ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತಿದೆ ; (ವಿವರ ನೀಡುವುದು)

(ಇ) ಪದವೀಧರ ಪ್ರಾಥಮಿಕ ಶಾಲೆ ಶಿಕ್ಷಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಬಗ್ಗೆ ಸುಪ್ರೀಂ ಕೋರ್ಟ್‌ನಲ್ಲಿ ದಾವೆ ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಅಂಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ದಾವೆ ಹಾಕಲಾಗಿದೆ ; ಸದರಿ ಪ್ರಕರಣದಿಂದ ಎಷ್ಟು ಜನ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಿಂದ ಹೊರಗಿದ್ದಾರೆ ; (ವಿವರ ನೀಡುವುದು)

(ಈ) ನೇಮಕಾತಿ ಪ್ರಕ್ರಿಯೆಯಲ್ಲಿ ಮದುವೆಯಾದ ಮಹಿಳಾ ಅಭ್ಯರ್ಥಿಗಳಿಗೆ ತಂದೆ ಅಥವಾ ಗಂಡನ ಹೆಸರಿನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವ ಬಗ್ಗೆ ಸರ್ಕಾರದ ನಿಲುವೇನು ; ಈಗ ನಡೆಯುತ್ತಿರುವ ನೇಮಕಾತಿ ಹಾಗೂ ಮುಂದೆ ನಡೆಯುವ ನೇಮಕಾತಿ ಅಧಿಸೂಚನೆಗಳಲ್ಲಿ ಮದುವೆಯಾದ ಮಹಿಳಾ ಅಭ್ಯರ್ಥಿಗಳು ಕಡ್ಡಾಯವಾಗಿ ಗಂಡನ ಹೆಸರಿನಲ್ಲಿಯೇ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವಂತೆ ಸೂಚನೆ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ; ಇಲ್ಲದಿದ್ದಲ್ಲಿ, ಮುಂದಿನ ನೇಮಕಾತಿ ಅಧಿಸೂಚನೆಗಳಲ್ಲಿ ಸದರಿ ನಿರ್ದೇಶನವನ್ನು ಅಳವಡಿಸಿಕೊಳ್ಳಲು ನೇಮಕಾತಿ ಪ್ರಾಧಿಕಾರಗಳಿಗೆ ಸರ್ಕಾರ ಸೂಚಿಸುವುದೇ ? (ವಿವರ ನೀಡುವುದು)

# ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉಚ್ಚ ನ್ಯಾಯಾಲಯ ಪೀಠ ಸ್ಥಾಪಿಸುವ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-

೩೭೫ (೪೫೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಂದ ಉಚ್ಚ ನ್ಯಾಯಾಲಯದ ಪೀಠವನ್ನು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ಥಾಪಿಸಬೇಕೆಂಬ ವಕೀಲರು ಮತ್ತು ಉದ್ದಿಮೆದಾರರು ಕಾರ್ಮಿಕರು ವಿವಿಧ ಸಂಘಟನೆಗಳು ಹೋರಾಟ ನಡೆಸುತ್ತಿದ್ದು, ಇಲ್ಲಿ ನ್ಯಾಯ ಪೀಠ ಸ್ಥಾಪಿಸಲು ಕ್ರಮ ಕೈಗೊಳ್ಳದಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಈಗಾಗಲೇ ಕಲಬುರಗಿ ಮತ್ತು ಧಾರವಾಡದಲ್ಲಿ ಉಚ್ಚನ್ಯಾಯಾಲಯದ ಪೀಠವನ್ನು ರಚಿಸಿ, ನ್ಯಾಯವನ್ನು ಪಡೆಯಲು ಅನುಕೂಲವಾಗುವಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಜನರ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರ ಅಧ್ಯಯನ ನಡೆಸಿರುವುದೇ ; (ವಿವರ ನೀಡುವುದು)

(ಇ) ಮಂಗಳೂರಿನಲ್ಲಿ ಉಚ್ಚನ್ಯಾಯಾಲಯ ರಚಿಸಿದ್ದಲ್ಲಿ ೦೬ ಜಿಲ್ಲೆಗಳಲ್ಲಿರುವ ಕಕ್ಷಿದಾರರ ಸಮಯ ಮತ್ತು ಕಡಿಮೆ ವೆಚ್ಚದಲ್ಲಿ ನ್ಯಾಯ ಪಡೆಯಲು ಸಾಧ್ಯವಾಗುತ್ತಿದ್ದು, ಈ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ;

(ಈ) ಮಂಗಳೂರಿನಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಬೇಕಾದ ಸ್ಥಳಾವಕಾಶ ಮತ್ತು ಕಟ್ಟಡಗಳು ಮೂಲಭೂತ ಸೌಕರ್ಯಗಳಿದ್ದು, ಸ್ಥಳವನ್ನು ಪರಿಶೀಲಿಸಿ ಉಚ್ಚ ನ್ಯಾಯಾಲಯ ಪೀಠ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಉ) ಉಚ್ಚ ನ್ಯಾಯಾಲಯ ಸ್ಥಾಪನೆಗೆ ಮುಂದಿನ ಬಜೆಟ್‌ನಲ್ಲಿ ಹಣವನ್ನು ಮೀಸಲಿಡಲಾಗುವುದೇ ?

## ಅಕ್ರಮ ಮರಳುಗಾರಿಕೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೦ (೪೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಭಾಗದಲ್ಲಿ ಯಥೇಚ್ಛವಾಗಿ ಅಕ್ರಮ ಮರಳುಗಾರಿಕೆ ನಡೆಯುತ್ತಿದ್ದು ಮರಳು ಮಾಫೀಯಾದಿಂದ ಇತ್ತೀಚೆಗೆ ಹಲ್ಲೆಗೆ ಒಳಗಾಗುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಮರಳು ಗಣಿಗಾರಿಕೆ ಮಾಫೀಯಾದೊಂದಿಗೆ ಪೊಲೀಸರು ಶಾಮಿಲಾಗಿದ್ದರೆಂಬ ಆರೋಪವಿದ್ದು, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಅಕ್ರಮವಾಗಿ ಮರಳು ಸಾಗಣೆ ನಡೆಸುತ್ತಿರುವ ಎಷ್ಟು ಪ್ರಕರಣಗಳು ದಾಖಲಾಗಿವೆ ; ವಶಪಡಿಸಿಕೊಂಡಿರುವ ಸ್ವತ್ತುಗಳೆಷ್ಟು ; (ವಿವರ ನೀಡುವುದು)

(ಈ) ಅಕ್ರಮ ಮರಳುಗಾರಿಕೆ ತಡೆಯಲು ವಿಶೇಷ ತನಿಖಾ ದಳ ರಚಿಸಲು ಕ್ರಮ ಕೈಗೊಳ್ಳದಿರಲು ಕಾರಣಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಾಷ್ಟ್ರಮಟ್ಟದ ಕ್ರಿಕೆಟ್ ಕ್ರೀಡಾಂಗಣ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೧ (೪೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಾಷ್ಟ್ರಮಟ್ಟದ ಕ್ರಿಕೆಟ್ ಕ್ರೀಡಾಂಗಣ ಸ್ಥಾಪಿಸಲು ಜಿಲ್ಲಾಡಳಿತ ಮತ್ತು ಕೆಎಸ್‌ಸಿಎ ಸ್ಥಳ ಗುರುತಿಸಿ ಕ್ರೀಡಾಂಗಣ ಸ್ಥಾಪಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕ್ರಿಕೆಟ್ ಕ್ರೀಡಾಂಗಣಕ್ಕೆ ಬೇಕಾದ ಸ್ಥಳ ಮತ್ತು ಎಲ್ಲಾ ಮೂಲಭೂತ ಸೌಕರ್ಯ ಇದ್ದರೂ ಜಿಲ್ಲಾಡಳಿತ ಯಾವುದೇ ಕ್ರಮವಹಿಸದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಅಂತರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ಇಲ್ಲದಿರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿದ್ದರೂ ಅಂತರಾಷ್ಟ್ರೀಯ ಕ್ರೀಡಾಂಗಣ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ನ್ಯಾಯಾಂಗ ಕಟ್ಟಡದ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೨ (೪೫೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ನ್ಯಾಯಾಂಗ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸದೇ ಇರಲು ಕಾರಣಗಳೇನು ; ಯಾವಾಗ ಪ್ರಾರಂಭಗೊಳ್ಳುವುದು ; ಪ್ರಸ್ತಾವನೆಗೆ ಅನುಮತಿ ದೊರಕಿದೆಯೇ ;

(ಆ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ಮತ್ತು ಬೆಳ್ತಂಗಡಿಯಲ್ಲಿನ ನೂತನ ಕೋರ್ಟ್ ಸ್ಥಾಪನೆಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದನ್ನು ಯಾವಾಗ ಪ್ರಾರಂಭಿಸಲಾಗುವುದು ; (ವಿವರ ನೀಡುವುದು)

(ಇ) ಕಾನೂನು ಇಲಾಖೆಯಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಮೂಲಭೂತ ಸೌಕರ್ಯ ಒದಗಿಸಲಾಗಿದೆ ?

## ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡ ಯೋಜನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೩ (೪೫೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಅಭಿವೃದ್ಧಿ ಪಡಿಸಲು ಕೈಗೊಂಡ ಯೋಜನೆಗಳಾವುವು ; (ವಿವರ ನೀಡುವುದು)

(ಆ) ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಸಿ.ಆರ್.ಝಡ್. ನಿಯಮ ಬದಲಾಯಿಸಿ ಸಡಿಲಿಕೆ ಬಗ್ಗೆ ಕೇಂದ್ರ ಸರ್ಕಾರದ ಜೊತೆ ಮಾತುಕತೆ ನಡೆಸಲಾಗಿದೆಯೇ ;

(ಇ) ಸಿ.ಆರ್.ಝಡ್. ನಿಯಮದಿಂದ ಕರಾವಳಿ ಬೀಚ್ ಅಭಿವೃದ್ಧಿ ಆಗದಿರಲು ಪ್ರಮುಖ ಕಾರಣವಾಗಿದ್ದು, ಈ ಬಗ್ಗೆ ಕೈಗೊಂಡ ಕ್ರಮವೇನು ;

(ಈ) ಕರಾವಳಿ ಭಾಗದಲ್ಲಿ ನಡೆಯುತ್ತಿರುವ ಸಾಂಸ್ಕೃತಿಕ ಸಾಮಾಜಿಕ ಕಾರ್ಯಕ್ರಮ ಪ್ರತಿಬಿಂಬಿಸಲು ಮತ್ತು ಕಂಬಳ ಪ್ರವಾಸಕ್ಕೆ ಉತ್ತೇಜನ ನೀಡಲು ಪ್ರವಾಸೋದ್ಯಮ ಇಲಾಖೆ ಕರಾವಳಿ ನಿಗಮವನ್ನು ಸ್ಥಾಪಿಸಲು ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಉ) ಕರಾವಳಿ ಭಾಗದಲ್ಲಿ ಪ್ರೇಕ್ಷಣೀಯ ಸ್ಥಳವನ್ನು ಅಭಿವೃದ್ಧಿ ಪಡಿಸಲು ಮೀಸಲಿಟ್ಟ ಅನುದಾನ ಎಷ್ಟು ಯಾವ ಯಾವ ಸ್ಥಳವನ್ನು ಪ್ರೇಕ್ಷಣೀಯ ಸ್ಥಳವನ್ನಾಗಿ ಅಭಿವೃದ್ಧಿ ಪಡಿಸಲು ಇಲಾಖೆ ಚಿಂತನೆ ನಡೆಸಿದೆ ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೂತನ ಜಾಹೀರಾತು ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೩೮೪ (೪೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೂತನ ಜಾಹೀರಾತು ನೀತಿಯನ್ನು ಮತ್ತೆ ಜಾರಿಗೆ ತರಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಈ ನೂತನ ಜಾಹೀರಾತು ಟೆಂಡರ್ ನೀಡುವುದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಪ್ರತಿ ವರ್ಷ ಎಷ್ಟು ಆದಾಯವನ್ನು ನಿರೀಕ್ಷಿಸಲಾಗಿದೆ ; (ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ಅಳತೆಯ ಜಾಹೀರಾತು ಫಲಕಗಳನ್ನು ಅಳವಡಿಸಲು ಅಧಿಕೃತ ಹಾಗೂ ಅನಧಿಕೃತ ಜಾಹೀರಾತು ಏಜೆನ್ಸಿಗಳ ಸಂಖ್ಯೆ ಎಷ್ಟು ; (ಗುತ್ತಿಗೆ ಪಡೆದುಕೊಂಡಿದ್ದ ಏಜೆನ್ಸಿಗಳ ವಿವರ ಒದಗಿಸುವುದು)

(ಈ) ಅನಧಿಕೃತ ಜಾಹೀರಾತು ತಡೆಯುವ ಸಂಬಂಧ ಈ ಹಿಂದೆ ರಾಜ್ಯ ಉಚ್ಚ ನ್ಯಾಯಾಲಯ ಕಟ್ಟುನಿಟ್ಟಿನ ಆದೇಶ ನೀಡಿದೆಯೇ ; ಹಾಗಿದ್ದಲ್ಲಿ, ಇಲ್ಲಿಯ ತನಕ ಎಷ್ಟು ಅನಧಿಕೃತ ಜಾಹೀರಾತುಗಳನ್ನು ತೆರವುಗೊಳಿಸಲಾಗಿದೆ ;

(ಉ) ಅನಧಿಕೃತ ಮತ್ತು ಅಧಿಕೃತ ಜಾಹೀರಾತು ಫಲಕ ಏಜೆನ್ಸಿಗಳಿಂದ ಇಲ್ಲಿಯ ತನಕ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬರಬೇಕಾಗಿರುವ ಬಾಕಿ ಮೊತ್ತವೆಷ್ಟು ; ಇದನ್ನು ವಸೂಲು ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ; (ವಿವರಣೆ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಕೆರೆಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೫ (೪೪೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; (ಬೆಂಗಳೂರು ನಗರ ಜಿಲ್ಲೆಯ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಈ ಕೆರೆಗಳನ್ನು ನಿರ್ವಹಣೆ ಮಾಡಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಪ್ರತಿ ವರ್ಷ ಬೇಕಾಗಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಈ ಕೆರೆಗಳನ್ನು ನಿರ್ವಹಣೆ ಮಾಡಲು ಖಾಸಗಿ ಕಾರ್ಪೋರೇಟ್ ಕಂಪನಿಗಳಿಗೆ ವಹಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಖಾಸಗಿ ಕಾರ್ಪೋರೇಟ್ ಕಂಪನಿಗಳಿಗೆ ಯಾವ ಯಾವ ಕೆರೆಗಳನ್ನು ವಹಿಸಲಾಗುತ್ತಿದೆ ; ಆ ಕಂಪನಿಗಳ ವಿಳಾಸ, ಮಾಲೀಕರ ಹೆಸರು ಸೇರಿದಂತೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕೆರೆಗಳ ಅಭಿವೃದ್ಧಿ ಮತ್ತು ನಿರ್ವಹಣೆ ಮಾಡಲು ಖಾಸಗಿ ಕಾರ್ಪೋರೇಟ್ ಕಂಪನಿಗಳ ಜೊರತೆ ಯಾವ ರೀತಿ–ನೀತಿ, ನಿಯಮಗಳನ್ನು ರೂಪಿಸಿ ಒಪ್ಪಂದ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಈ ಕೆರೆಗಳನ್ನು ಅಭಿವೃದ್ಧಿ ಮತ್ತು ನಿರ್ವಹಣೆಯ ಸಲುವಾಗಿ ಖಾಸಗಿ ಕಂಪನಿಗಳಿಗೆ ವಹಿಸಬಾರದೆಂದು ಈ ಹಿಂದೆ ರಾಜ್ಯ ಉಚ್ಚ ನ್ಯಾಯಾಲಯ ಆದೇಶ ನೀಡಿದೆಯೇ ; ನೀಡಿದ್ದಲ್ಲಿ, ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ? (ನ್ಯಾಯಾಲಯದ ಆದೇಶದ ಪ್ರತಿ ಒದಗಿಸುವುದು)

## ಗೃಹ ಇಲಾಖೆಯಲ್ಲಿರುವ ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೬ (೪೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗೃಹ ಇಲಾಖೆಯಲ್ಲಿರುವ ಡಿ.ಜಿ.ಪಿ ಮತ್ತು ಐ.ಜಿ.ಪಿ ಯಿಂದ ಪೊಲೀಸ್ ಪೇದೆಯವರೆಗೆ ಎಲ್ಲಾ ವೃಂದದ ಹುದ್ದೆಗಳು ಸೇರಿದಂತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಪೊಲೀಸ್ ಇಲಾಖೆಯಲ್ಲಿ ಅಧಿಕಾರಿ/ಲಿಪಿಕ ನೌಕರರು/ಎಲ್ಲಾ ವೃಂದದ ಹುದ್ದೆಗಳು/ ಪೊಲೀಸ್ ಪೇದೆಗಳ ಹುದ್ದೆಗಳು ಸೇರಿದಂತೆ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸಂಪೂರ್ಣ ಮಾಹಿತಿ ನೀಡುವುದು ; ಪ್ರತಿ ವರ್ಷ ನಿವೃತ್ತಿ ಹೊಂದುವ ಅಧಿಕಾರಿ/ ಸಿಬ್ಬಂದಿ/ಪೊಲೀಸ್ ಪೇದೆಗಳ ಸಂಖ್ಯೆ ಎಷ್ಟು ; (ಎಂಬುದರ ಬಗ್ಗೆ ಮಾಹಿತಿ ಒದಗಿಸುವುದು)

(ಇ) ಪೊಲೀಸ್ ಮ್ಯಾನ್ಯುಯಲ್ ಒಂದು ಪೊಲೀಸ್ ಠಾಣೆಯಲ್ಲಿ ಇರಬೇಕಾಗಿರುವ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ಪೊಲೀಸ್ ಠಾಣೆಗಳಲ್ಲಿ ಅನುಪಾತದಂತೆ ಪೊಲೀಸ್ ಪೇದೆಗಳ ಹುದ್ದೆ ಇಲ್ಲದೆ ಇರುವುದು ಹಾಗೂ ಪ್ರತಿಯೊಂದು ಪೊಲೀಸ್ ಠಾಣೆಯಲ್ಲಿ ೨೦ ರಿಂದ ೩೦ ಪೇದೆಗಳ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಒಂದು ವರ್ಷಕ್ಕೊ ೩ ವರ್ಷಕ್ಕೋ ಒಂದು ಸಾರಿ ಕೇವಲ ೨ ರಿಂದ ೩ ಸಾವಿರ ಪೊಲೀಸ್ ಪೇದೆಗಳ ಹುದ್ದೆಗಳನ್ನು ಭರ್ತಿ ಮಾಡಿ ಕಾನೂನು ಸುವಸ್ಥೆಯನ್ನು ನಿಭಾಯಿಸಲು ಸಾಧ್ಯವೇ ;

(ಊ) ಪೊಲೀಸ್ ಇಲಾಖೆಯಲ್ಲಿ ಅಧಿಕಾರಿಗಳ ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಕ್ರಮ ವಹಿಸುತ್ತಿದ್ದು ಖಾಲಿ ಇರುವ ಪೊಲೀಸ್ ಪೇದೆಗಳ ಹುದ್ದೆಗಳನ್ನು ಭರ್ತಿ ಮಾಡದೆ ಇರಲು ಕಾರಣವೇನು ; (ಸಂಪೂರ್ಣ ವಿವರಣೆ ನೀಡುವುದು)

(ಋ) ಒಂದು ಕಡೆ ಪೊಲೀಸ್ ಠಾಣೆಗಳಲ್ಲಿ ಪೇದೆಗಳಿಲ್ಲದೆ ದಿನ ನಿತ್ಯದ ಕೆಲಸ ಕಾರ್ಯಗಳಿಗೆ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗುತ್ತಿದ್ದು ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿರುವುದು ಕಾರಣಗಳೇನು ;

(ಎ) ಅನುಕೂಲಕ್ಕೆ ಬಾರದ ವಿಭಾಗಗಳನ್ನು ಹಾಗೂ ಹುದ್ದೆಗಳನ್ನು ಸೃಷ್ಟಿ ಮಾಡಿಕೊಂಡು ಅಧಿಕಾರಿಗಳನ್ನು ಮಾತ್ರ ನೇಮಕ ಮಾಡಿಕೊಳ್ಳುತ್ತಿದ್ದು ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಖಾಲಿ ಇರುವ ಪೊಲೀಸ್ ಪೇದೆಗಳಂತಹ ಹುದ್ದೆಗಳನ್ನು ಸಂಪೂರ್ಣವಾಗಿ ಯಾವಾಗ ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ಬೆಂಗಳೂರಿನಲ್ಲಿ ವಾಹನ ಸಂಚಾರದಿಂದ ಟ್ರಾಫಿಕ್ ಜಾಮ್ ಆಗುತ್ತಿರುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೭ (೪೪೪೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ದಿನೇ ದಿನೇ ಹೆಚ್ಚುತ್ತಿರುವ ವಾಹನಗಳ ಸಂಖ್ಯೆಯಿಂದ ಸಂಚಾರ ದಟ್ಟಣೆಯನ್ನು ನಿಯಂತ್ರಿಸಿ, ಸುಗಮ ಸಂಚಾರ ವ್ಯವಸ್ಥೆ ಮಾಡಿಕೊಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ; (ವಿವರ ನೀಡುವುದು)

(ಆ) ಸಂಚಾರ ದಟ್ಟಣೆ ಹೆಚ್ಚಾಗಲು ನಿಧಾನಗತಿಯಲ್ಲಿ ಸಾಗುತ್ತಿರುವ ಅಭಿವೃದ್ಧಿ ಕಾಮಗಾರಿಗಳು ಮತ್ತು ರಸ್ತೆಗಳ ದುರಸ್ಥಿ, ಮೇಲ್ಸೇತುವೆ, ಫ್ಲೈ-ಓವರ್ ಅಗಲೀಕರಣ, ಅಂಡರ್ ಪಾಸ್‌ಗಳ ಅಭಿವೃದ್ಧಿ, ವೈಟ್‌ಟಾಪಿಂಗ್ ಕಾಮಗಾರಿಗಳು ಕಾರಣವಾಗಿದ್ದು, ಇದನ್ನು ತ್ವರಿತ ವೇಗದಲ್ಲಿ ಪೂರ್ಣಗೊಳಿಸುವ ಸಲುವಾಗಿ ಪರ್ಯಾಯ ರಸ್ತೆ ಮಾರ್ಗಗಳನ್ನು ವ್ಯವಸ್ಥೆ ಮಾಡಿ ಅನುವು ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ಹೊರ ಜಿಲ್ಲೆಗಳಿಗೆ ಹೋಗುವ ಮತ್ತು ಬರುವ ಬಳ್ಳಾರಿ ರಸ್ತೆ, ಬೆಂಗಳೂರು – ನೆಲಮಂಗಲ ರಸ್ತೆ, ಮೈಸೂರು ರಸ್ತೆ, ಹೊಸಕೋಟೆ ರಸ್ತೆ, ಹೊಸೂರು ರಸ್ತೆಗಳ ಎರಡು ಬದಿಯಲ್ಲಿ ನಿಲ್ಲಿಸುವ ಲಾರಿಗಳು, ಟ್ರಕ್‌ಗಳು, ಇತರೆ ವಾಹನಗಳು ಸಂಚಾರಕ್ಕೆ ಅಡ್ಡಿಯಾಗಿ ಅಪಘಾತಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮಡಿಕೇರಿಯ ಕೊಡವ ಹೆರಿಟೇಜ್ ಕೇಂದ್ರ ಕಾಮಗಾರಿ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೮ (೪೭೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕೇಂದ್ರ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ;

(ಆ) ಈ ಹೆರಿಟೇಜ್ ಕೇಂದ್ರ ಕಾಮಗಾರಿಗೆ ಒಟ್ಟು ಮೀಸಲಿರಿಸಿರುವ ಅನುದಾನ ಎಷ್ಟು ;

(ಇ) ಸದರಿ ಕಾಮಗಾರಿಯನ್ನು ಪ್ರಾರಂಭ ಮಾಡಿದ್ದು ಯಾವಾಗ ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ; ಕಾಮಗಾರಿಯು ವಿಳಂಬವಾಗಲು ಕಾರಣವೇನು ;

(ಈ) ಈ ಕಾಮಗಾರಿಯನ್ನು ಪೂರ್ಣಗೊಳಿಸಿ ಹೆರಿಟೇಜ್ ಸೆಂಟರ್‌ನ್ನು ಲೋಕಾರ್ಪಣೆ ಮಾಡಲು ಇನ್ನು ಎಷ್ಟು ಸಮಯ ಬೇಕಾಗಬಹುದು ?

# ಆನ್‌ಲೈನ್ ಮತ್ತು ಆಫ್‌ಲೈನ್ ಬೆಟ್ಟಿಂಗ್ ದಂಧೆಯನ್ನು ನಿಷೇದಿಸುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೮೯ (೪೭೭೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಬೆಟ್ಟಿಂಗ್ ಅಪ್ಲಿಕೇಶನ್‌ಗಳು ಎಷ್ಟು ಮತ್ತು ಯಾವುವು ಹಾಗೂ ಇದನ್ನು ನಡೆಸಲು ಅಥವಾ ಪರವಾನಿಗೆ ಪಡೆಯಲು ಅವಕಾಶ ಇದೆಯೇ ;

(ಆ) ಆನ್‌ಲೈನ್ ಮತ್ತು ಆಫ್‌ಲೈನ್ ಬೆಟ್ಟಿಂಗ್ ದಂಧೆಗೆ ಬಲಿಯಾಗಿ ಆತ್ಮಹತ್ಯೆಗೆ ಶರಣಾಗಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಾನೂನು ಬಾಹಿರವಾಗಿ ನಡೆಯುತ್ತಿರುವ ಬೆಟ್ಟಿಂಗ್ ದಂಧೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಆನ್‌ಲೈನ್ ಮತ್ತು ಆಫ್‌ಲೈನ್ ಬೆಟ್ಟಿಂಗ್ ದಂಧೆಯನ್ನು ಸಂಪೂರ್ಣವಾಗಿ ನಿಷೇಧಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ರಾಜ್ಯದ ಹಲವು ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಪಾರ್ಕ್‌ರ್ ಎನ್ನುವ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್ ಮತ್ತು ಇನ್ನಿತರ ಕೆಲ ಗೇಮಿಂಗ್ ಅಪ್ಲಿಕೇಶನ್‌ಗಳಿಂದ ಯುವ ಸಮಾಜ ದಾರಿ ತಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ?

## ಬನಶಂಕರಿ ೬ನೇ ಹಂತದ ಮುಖ್ಯ ರಸ್ತೆ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೯೦ (೪೫೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಾಣಗೊಂಡಿರುವ ಬನಶಂಕರಿ ೬ನೇ ಹಂತದ ೪ನೇ ಬ್ಲಾಕ್‌ನ (ಮುಂದುವರೆದ ಬಡಾವಣೆ) ಬಡಾವಣೆಯ ಮುಖ್ಯ ರಸ್ತೆಯನ್ನು (ನಾಗೇಗೌಡನ ಪಾಳ್ಯ ರಸ್ತೆ) ಅಭಿವೃದ್ಧಿ ಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಬಡಾವಣೆಯಲ್ಲಿ ರಸ್ತೆಗಳು ತುಂಬಾ ಹಾಳಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಡಾವಣೆಯ ಮುಖ್ಯ ರಸ್ತೆಯಿಂದ (ನಾಗೇಗೌಡನ ಪಾಳ್ಯ ರಸ್ತೆ) ಕನಕಪುರ ರಸ್ತೆಗೆ ಸಂಪರ್ಕ ಕಲ್ಪಿಸದಿರಲು ಕಾರಣಗಳೇನು ; ಈ ರಸ್ತೆಯನ್ನು ಕೆಲವರು ಅತಿಕ್ರಮಿಸಿರುವುದರಿಂದ ಸದರಿ ಬಡಾವಣೆಗೆ ಕನಕಪುರ ರಸ್ತೆಯಿಂದ ಬರಲು ರಸ್ತೆ ಸಂಪರ್ಕವಿಲ್ಲದೆ ಬಡಾವಣೆ ನಿವಾಸಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬಿ.ಬಿ.ಎಂ.ಪಿ. ವ್ಯಾಪ್ತಿಯ ಆಸ್ತಿಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್(ವಿಧಾನಸಭೆಯಿಂದ ಚುನಾಯಿತರಾದವರು):-**

೩೯೧ (೪೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿಗಳೆಷ್ಟು; ಈ ಪೈಕಿ ತೆರಿಗೆ ವ್ಯಾಪ್ತಿಯಿಂದ ಹೊರಗಿರುವ ಆಸ್ತಿಗಳ ಸಂಖ್ಯೆ ಎಷ್ಟು ; ತೆರಿಗೆ ವ್ಯಾಪ್ತಿಯಿಂದ ಹೊರಗಿರುವ ಕಾರಣ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಆಗುತ್ತಿರುವ ನಷ್ಟ ಎಷ್ಟು ; ಈ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರಲು ಕೈಗೊಂಡಿರುವ ಕ್ರಮಗಳೇನು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷದಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಸದಿರುವ ಆಸ್ತಿಗಳೆಷ್ಟು ; ಆಸ್ತಿ ತೆರಿಗೆ ವಸೂಲಿಗೆ ಕೈಗೊಂಡಿರುವ ಕ್ರಮಗಳೇನು ; ತೆರಿಗೆ ಪಾವತಿಸದ ಎಷ್ಟು ಆಸ್ತಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೆಸರಿಗೆ ಸೇರಿಸಲಾಗಿದೆ ; (ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪ್ರತಿಷ್ಠಿತ ಮಾಲ್‌ಗಳು ತೆರಿಗೆ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತೆರಿಗೆ ಬಾಕಿ ಉಳಿಸಿಕೊಂಡಿರುವ ಮಾಲ್‌ಗಳು ಯಾವುವು ; ವಸೂಲಾಗಬೇಕಿರುವ ಬಾಕಿ ಮೊತ್ತ ಎಷ್ಟು ; ತೆರಿಗೆ ಬಾಕಿ ವಸೂಲಿಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಈ) ತೆರಿಗೆ ವಸೂಲಿ ಸಂಬಂಧ ನ್ಯಾಯಾಲಯದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಕೆಲವು ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಸರ್ಕಾರಕ್ಕೆ ಹಿನ್ನೆಡೆ ಆಗಲು ಕಾರಣಗಳೇನು ?

## ಸರ್ಕಾರದ ವಿವಿಧ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೯೨ (೪೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಯೋಜನೆಗಳಡಿ ಸಹಾಯ ಧನಕ್ಕಾಗಿ ಫಲಾನುಭವಿಗಳನ್ನು ಆಯ್ಕೆ ಮಾಡಿ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಸಾಲ ಮಂಜೂರಾತಿಗಾಗಿ ಪಟ್ಟಿಯನ್ನು ಸಲ್ಲಿಸಿದ್ದರೂ ಸಾಲ ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈವರೆಗೆ ಯಾವ ಯಾವ ಯೋಜನೆಗಳಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಸಾಲ ಮಂಜೂರಾಗಿರುವುದಿಲ್ಲ ; (ಯೋಜನೆಯೊಂದಿಗೆ ಜಿಲ್ಲಾವಾರು ವಿವರ ನೀಡುವುದು)

(ಆ) ಆಯ್ಕೆಯಾದ ಫಲಾನುಭವಿಗಳಿಗೆ ಸಾಲ ಮಂಜೂರು ಮಾಡದೆ ಇರುವುದರಿಂದ ಆಯಾ ಸಾಲಿನಲ್ಲಿ ಸರ್ಕಾರ ನಿಗದಿಪಡಿಸಿರುವ ಗುರಿಯನ್ನು ಮುಟ್ಟಲು ಸಾಧ್ಯವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಿಗದಿತ ಗುರಿ ಮುಟ್ಟಲು ಅನುವಾಗುವಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಷ್ಟ್ರೀಕೃತ ಬ್ಯಾಂಕುಗಳ ಮುಖ್ಯಸ್ಥರಿಗೆ ಆಯಾಯ ಸಾಲುಗಳಲ್ಲಿ ಸರ್ಕಾರ ಘೋಷಣೆ ಮಾಡುವ ಯೋಜನೆಗಳ ಫಲಾನುಭವಿಗಳಿಗೆ ಸಾಲ ಮಂಜೂರು ಮಾಡುವಂತೆ ನಿರ್ದೇಶನ ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಅಕ್ರಮ ಗೋವುಗಳ ಸಾಗಾಟ ಹಾಗೂ ಕಳ್ಳತನದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೯೩ (೪೭೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನಲ್ಲಿ ಗೋವು ಕಳ್ಳತನ ಹಾಗೂ ಅಕ್ರಮ ಗೋ ಸಾಗಾಟ ಸಂಬಂಧ ದಾಖಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು ಅಂಕಿ-ಅಂಶ ಒದಗಿಸುವುದು)

(ಆ) ದಾಖಲಾದ ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮವೇನು ; (ಪ್ರಕರಣವಾರು ಮಾಹಿತಿ ಒದಗಿಸುವುದು)

(ಇ) ವಿವಿಧ ಜಿಲ್ಲೆಯಲ್ಲಿ ಗೋವುಗಳ ಕಳ್ಳತನ ಹಾಗೂ ಅಕ್ರಮ ಸಾಗಾಟ ಪ್ರಕರಣಗಳು ನಿರಂತರವಾಗಿ ದಾಖಲಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಗೋವುಗಳ ಕಳ್ಳತನ ಹಾಗೂ ಅಕ್ರಮ ಗೋವು ಸಾಗಾಟ ತಡೆಗಟ್ಟಲು ಸರ್ಕಾರದಿಂದ ಕೈಗೊಂಡಿರುವ ಕ್ರಮಗಳೇನು ?

## ಮಾದಕ ವಸ್ತು ಸಾಗಾಣಿಕೆ ಮತ್ತು ಮಾರಾಟದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೯೪ (೪೭೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಮಾದಕ ವಸ್ತು ಸಾಗಾಣಿಕೆ ಹಾಗೂ ಮಾರಾಟ ತೀವ್ರಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಿಂದ ಎಷ್ಟು ಮಾದಕ ವಸ್ತು ಸಾಗಾಣಿಕೆ ಹಾಗೂ ಮಾರಾಟ ಪ್ರಕರಣಗಳು ವರದಿಯಾಗಿವೆ ; ಈ ಪೈಕಿ ಎಷ್ಟು ಪ್ರಕರಣಗಳಲ್ಲಿ F.I.R ದಾಖಲಿಸಲಾಗಿದೆ ; ಬಂಧಿತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಮಗ್ರ ವಿವರ ಒದಗಿಸುವುದು)

(ಇ) ಇದರಿಂದ ಬಾಧಿತರಾದ ಮಾದಕ ವ್ಯಸನಿಗಳ ಮನ ಪರಿವರ್ತನೆಗೆ ಜಿಲ್ಲೆಗಳಲ್ಲಿರುವ ವ್ಯಸನ ಮುಕ್ತ ಕೇಂದ್ರಗಳು ಎಷ್ಟು ಹಾಗೂ ಈ ಕೇಂದ್ರಗಳ ಪೈಕಿ ಎಷ್ಟು ಕಾರ್ಯನಿರ್ವಹಿಸುತ್ತಿದೆ ?

## ಕಲ್ಯಾಣ ಕರ್ನಾಟಕದ ನೌಕರರ ಪದೋನ್ನತಿಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೯೫ (೪೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೩೭೧ಜೆ ಕಲ್ಯಾಣ ಕರ್ನಾಟಕಕ್ಕೆ ಸಂಬಂಧಿಸಿದಂತೆ ಇತರೆ ಭಾಗಗಳಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಪದೋನ್ನತಿಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಲ್ಯಾಣ ಕರ್ನಾಟಕಕ್ಕೆ ಎಷ್ಟು ಪ್ರಮಾಣದಲ್ಲಿ ಪದೋನ್ನತಿಯನ್ನು ನೀಡಲಾಗಿರುತ್ತದೆ ; (ಮಾಹಿತಿ ನೀಡುವುದು)

(ಆ) ಜೇಷ್ಠತಾ ಸಂಖ್ಯೆಯಲ್ಲಿ ಹಿಂದೆ ಇರುವ ನೌಕರರು ಇತರೆ ರಾಜ್ಯದ ನೌಕರರಿಗಿಂತ ಹೆಚ್ಚು ಪದೋನ್ನತಿಯನ್ನು ಹೊಂದಿರುವ ನೌಕರರ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಲ್ಯಾಣ ಕರ್ನಾಟಕವನ್ನು ಬಿಟ್ಟು ಉಳಿದ ಭಾಗಗಳಿಗೆ ವರ್ಗಾವಣೆಯಾಗಿ ಬಂದಿರುವ ನೌಕರರ ಸಂಖ್ಯೆ ಎಷ್ಟು ; ಕಲ್ಯಾಣ ಕರ್ನಾಟಕದಲ್ಲಿ ಪದೋನ್ನತಿ ಪಡೆದ ನಂತರ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕೆಲಸ ಮಾಡದೆ ಇರಲು ಕಾರಣಗಳೇನು ;

(ಈ) ಕಲ್ಯಾಣ ಕರ್ನಾಟಕದಲ್ಲಿ ಪದೋನ್ನತಿ ಪಡೆದು ವರ್ಗಾವಣೆಯಾಗಿ ಬರುವುದರಿಂದ ಮತ್ತೆ ಕಲ್ಯಾಣ ಕರ್ನಾಟಕದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಹೆಚ್ಚಾಗುತ್ತದೆ ; ಮತ್ತೆ ಮತ್ತೆ ಹೆಚ್ಚಿನ ಪ್ರಮಾಣದಲ್ಲಿ ಪದೋನ್ನತಿ ಹೊಂದುತ್ತಿದ್ದು, ಈ ಬಗ್ಗೆ ಸರ್ಕಾರದ ಚಿಂತನೆಯೇನು ;

(ಉ) ಕಲ್ಯಾಣ ಕರ್ನಾಟಕ ಹೊರತುಪಡಿಸಿ ಇತರೆ ಭಾಗದ ಸರ್ಕಾರಿ ನೌಕರರಿಗೆ ಇದರಿಂದ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರಿಸುವುದು)

## ಬೆಂಗಳೂರು ಮೈಸೂರು ನಡುವಿನ ರಾಷ್ಟ್ರೀಯ ಹೆದ್ದಾರಿ–೨೭೫ರಲ್ಲಿ ಪ್ರಯಾಣಿಕರ ಸುರಕ್ಷತೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೩೯೬ (೫೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು-ಮೈಸೂರು ನಡುವಿನ ರಾಷ್ಟ್ರೀಯ ಹೆದ್ದಾರಿ-೨೭೫ ಮತ್ತು ಸರ್ವೀಸ್ ರಸ್ತೆಗಳಲ್ಲಿ ಪ್ರಯಾಣಿಕರನ್ನು ತಡೆದು ಸುಲಿಗೆ, ದರೋಡೆ ಮಾಡುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪ್ರಯಾಣಿಕರ ಸುರಕ್ಷತೆಗೆ ತೆಗೆದುಕೊಂಡಿರುವ ಕ್ರಮಗಳೇನು ; ಇದುವರೆವಿಗೂ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; ಎಷ್ಟು ಪ್ರಕರಣಗಳನ್ನು ಬೇಧಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೆದ್ದಾರಿಯಲ್ಲೇ ಬಾರಿಕೇಡ್‌ಗಳನ್ನು ಇರಿಸಿ, ವಾಹನಗಳನ್ನು ತಡೆದು ತಪಾಸಣೆ ನಡೆಸಲು ಹಾಗೂ ದಂಡ ವಿಧಿಸಲು ಪೊಲೀಸರಿಗೆ ನಿಯಮಗಳಲ್ಲಿ ಅವಕಾಶ ಇದೆಯೇ ; (ಆದೇಶ ಪ್ರತಿ ನೀಡುವುದು)

(ಈ) ಕೆಲವು ಪ್ರಕರಣಗಳಲ್ಲಿ ಸೀಟ್ ಬೆಲ್ಟ್ ಧರಿಸಿದ್ದರೂ ಹಾಗೂ ಚಾಲನೆ ಸಂದರ್ಭದಲ್ಲಿ ಮೊಬೈಲ್ ಬಳಸದಿದ್ದರೂ ದಂಡ ವಿಧಿಸಲಾಗುತ್ತಿದೆ ಎನ್ನುವ ಸಾರ್ವಜನಿಕ ಆರೋಪಗಳ ಕುರಿತು ಸರ್ಕಾರದ ಸ್ಪಷ್ಟನೆ ಏನು ;

(ಉ) ಹೆದ್ದಾರಿಯಲ್ಲಿ ಅಳವಡಿಸಿರುವ ಕ್ಯಾಮೆರಾಗಳ ಒಟ್ಟು ಸಂಖ್ಯೆ ಎಷ್ಟು; ಎಲ್ಲೆಲ್ಲಿ ಅಳವಡಿಸಲಾಗಿದೆ ; ಕ್ಯಾಮೆರಾಗಳ ವಿಶೇಷತೆ ಏನು ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಬೆಂಗಳೂರು-ಮೈಸೂರು ನಡುವಿನ ರಾಷ್ಟ್ರೀಯ ಹೆದ್ದಾರಿ-೨೭೫ ರಲ್ಲಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ್ದಕ್ಕಾಗಿ ಪೊಲೀಸರು ದಾಖಲಿಸಿರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; ಈ ಪೈಕಿ ಸೀಟ್ ಬೆಲ್ಟ್ ಧರಿಸದಿರುವುದು, ಅತಿ ವೇಗ, ಲೇನ್ ಉಲ್ಲಂಘನೆ, ಚಾಲನೆ ಸಂದರ್ಭದಲ್ಲಿ ಮೊಬೈಲ್ ಬಳಕೆ ಸೇರಿದಂತೆ ದಾಖಲಿಸಲ್ಪಟ್ಟ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು ಹಾಗೂ ವಿಧಿಸಲಾದ, ಸಂಗ್ರಹಿಸಲಾದ ಮತ್ತು ಸಂಗ್ರಹಿಸಲು ಬಾಕಿ ಇರುವ ದಂಡದ ಮೊತ್ತ ಎಷ್ಟು ? (ವರ್ಷವಾರು ಮಾಹಿತಿ ನೀಡುವುದು)

## ಬ್ಯಾಂಕ್‌ಗಳಲ್ಲಿ ವಾರಸುದಾರರು ಇಲ್ಲದ ಠೇವಣಿ ಮೊತ್ತದ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೭ (೫೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬ್ಯಾಂಕ್‌ಗಳಲ್ಲಿ ವಾರಸುದಾರರು ಇಲ್ಲದ ಠೇವಣಿ ಮೊತ್ತ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ, ರಾಜ್ಯ ಸರ್ಕಾರದ ಇಲಾಖೆಗಳು, ಖಾಸಗಿ ಮತ್ತು ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಲ್ಲಿ ಕ್ಲೈಮ್ ಮಾಡದೇ ಇರುವ ಠೇವಣಿಗಳ ಒಟ್ಟು ಮೊತ್ತ ಎಷ್ಟು ; (ಖಾತೆಗಳ ಒಟ್ಟು ಸಂಖ್ಯೆಯೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೦೩ ವರ್ಷಗಳಲ್ಲಿ ಕ್ಲೈಮ್ ಮಾಡದಿರುವುದರಿಂದ ಏರಿಕೆಯಾದ ಮೊತ್ತ ಎಷ್ಟು ; (ವರ್ಷವಾರು, ಶೇಕಡವಾರು ಮಾಹಿತಿ ನೀಡುವುದು)

(ಈ) ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವ ನೈಜ ಹಕ್ಕುದಾರರನ್ನು ಗುರುತಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ಕ್ಲೈಮ್ ಮಾಡದ ಠೇವಣಿಗಳನ್ನು ಹುಡುಕಲು ಸಾರ್ವಜನಿಕರಿಗೆ ಯಾವ ರೀತಿಯ ಅನುಕೂಲ ಮಾಡಿಕೊಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ವಾರಸುದಾರರನ್ನು ಗುರುತಿಸಲು ಸಾಧ್ಯವಾಗದಿದ್ದರೆ ಈ ಠೇವಣಿ ಮೊತ್ತವನ್ನು ಏನು ಮಾಡಲಾಗುತ್ತದೆ ?

## ಮದ್ದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಏತ ನೀರಾವರಿ ಯೋಜನೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೮ (೫೫೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ಮದ್ದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಏತ ನೀರಾವರಿ ಯೋಜನೆಗಳು ಯಾವುವು ;

(ಆ) ಈ ಪೈಕಿ ಕಾರ್ಯನಿರತ, ನಿಷ್ಕ್ರೀಯವಾಗಿರುವ ಹಾಗೂ ಪ್ರಗತಿಯಲ್ಲಿರುವ ಏತ ನೀರಾವರಿ ಯೋಜನೆಗಳು ಯಾವುವು ; (ನೀರಿನ ಮೂಲ, ನೀರಿನ ಬಳಕೆ ಪ್ರಮಾಣ, ಅಚ್ಚುಕಟ್ಟು ವ್ಯಾಪ್ತಿ, ಕೆರೆಗಳ ಹೆಸರು ಮತ್ತು ಸಂಖ್ಯೆ, ಯೋಜನೆ ಮಂಜೂರಾದ ವರ್ಷ, ಅಂದಾಜು ಮೊತ್ತ, ಭರಿಸಲಾದ ವೆಚ್ಚ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಈ ಯೋಜನೆಗಳ ವ್ಯಾಪ್ತಿಯಲ್ಲಿರುವ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ಅಥವಾ ತುಂಬಿಸಲು ಬಾಕಿ ಇದೆ ; (ಕೆರೆಗಳ ಹೆಸರಿನೊಂದಿಗೆ ಮತ್ತು ನೀರು ತುಂಬಿಸಿರುವ ಶೇಕಡವಾರು ಪ್ರಮಾಣದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಉ) ಮದ್ದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು; ಒತ್ತುವರಿ ಆಗಿರುವ ಮತ್ತು ಒತ್ತುವರಿ ತೆರವುಗೊಳಿಸಲಾಗಿರುವ ಕೆರೆಗಳ ಸಂಖ್ಯೆ ಎಷ್ಟು; ಎಷ್ಟು ಕೆರೆಗಳ ಹೊಳು ತೆಗೆಯಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## 'ಸರ್ವೋತ್ತಮ ಸೇವಾ ಪ್ರಶಸ್ತಿ'ಗಳನ್ನು ಪ್ರಧಾನ ಮಾಡದಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯ (೫೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩ನೇ ಸಾಲಿನ ಜಿಲ್ಲಾ ಮತ್ತು ರಾಜ್ಯ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗಳನ್ನು ಈವರೆವಿಗೂ ನೀಡದಿರುವುದಕ್ಕೆ ಕಾರಣಗಳೇನು ; ಪ್ರಶಸ್ತಿಯನ್ನು ಯಾವಾಗ ನೀಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಅರ್ಹರ ಪಟ್ಟಿಯನ್ನು ಆಯ್ಕೆ ಸಮಿತಿ ಅಂತಿಮಗೊಳಿಸಿದೆಯೇ ; ಹಾಗೂ ರಾಜ್ಯ ಮಟ್ಟದ ಪ್ರಶಸ್ತಿಗೆ ನಿರ್ದಿಷ್ಟ ಸಂಖ್ಯೆಯ ಅರ್ಹರನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆಯೇ ;

(ಇ) ರಾಜ್ಯ ಮಟ್ಟದಲ್ಲಿ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಅಧಿಕಾರಿ/ ನೌಕರರನ್ನು ಅಂತಿಮಗೊಳಿಸಲಾಗಿದೆಯೇ ; ಇಲ್ಲದಿದ್ದಲ್ಲಿ ಕಾರಣಗಳೇನು ; ಯಾವಾಗ ಅಂತಿಮಗೊಳಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ 'ಸರ್ವೋತ್ತಮ ಸೇವಾ ಪ್ರಶಸ್ತಿ'ಯನ್ನು ಗರಿಷ್ಠ ಎಷ್ಟು ಮಂದಿಗೆ ನೀಡಲು ಅವಕಾಶ ಇದೆ ; (ಪ್ರಶಸ್ತಿ, ನಗದು ಪುರಸ್ಕಾರದ ಮೊತ್ತ ಸೇರಿದಂತೆ ಮಾರ್ಗಸೂಚಿಯ ಸಂಪೂರ್ಣ ಮಾಹಿತಿ ನೀಡುವುದು)

(ಉ) ೨೦೨೪ನೇ ಸಾಲಿನ ಜಿಲ್ಲಾ ಮತ್ತು ರಾಜ್ಯ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗಳಿಗೆ ಎಂದಿನಿಂದ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

# ಕ್ರೀಡಾ ಚಟುವಟಿಕೆಗಳಿಗೆ ಕ್ರೀಡಾ ಇಲಾಖೆಯ ಅನುದಾನ ಹಂಚಿಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೦ (೫೨೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಕ್ರೀಡಾ ಇಲಾಖೆಯಿಂದ ಅನುದಾನವನ್ನು ನೀಡುವ ಕುರಿತು ಅಗತ್ಯ ನಿಯಮಗಳನ್ನು ರಚಿಸಲಾಗಿದೆಯೇ ; ರಚಿಸಿಲ್ಲದಿದ್ದರೆ ಯಾವಾಗ ರಚಿಸಲಾಗುವುದು ;

(ಆ) ಕರ್ನಾಟಕದಲ್ಲಿ ಕಂಬಳ ಸಮಿತಿ ರಚಿಸುವ ಬಗ್ಗೆ ಈ ಮೊದಲು ಕರ್ನಾಟಕ ವಿಧಾನ ಮಂಡಲದ ಸದನದಲ್ಲಿ ಸರ್ಕಾರವು ಭರವಸೆ ನೀಡಿದ್ದು ಈವರೆಗೆ ಆದ ಪ್ರಗತಿಯ ವಿವರಗಳೇನು ;

(ಇ) ಕರ್ನಾಟಕದ ಕರಾವಳಿ ಭಾಗದಲ್ಲಿ ಸುಮಾರು ೧೦೦ಕ್ಕಿಂತ ಹೆಚ್ಚು ಸಾಂಪ್ರದಾಯಿಕ ಕಂಬಳಗಳು ನಡೆಯುತ್ತಿದ್ದು ಅದಕ್ಕೆ ಅನುದಾನ ನೀಡಲಾಗುತ್ತಿದೆಯೇ ; ನೀಡದಿದ್ದಲ್ಲಿ, ಕಾರಣಗಳೇನು ;

(ಈ) ಆಧುನಿಕ ಕಂಬಳಗಳಿಗೆ ಅನುದಾನ ನೀಡಿ ಈ ಕಂಬಳಗಳನ್ನು ಇನ್ನಷ್ಟು ಶಿಸ್ತುಬದ್ಧವಾಗಿ ನಡೆಸಲು ಅಗತ್ಯವಿರುವ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಯಾವ ರೀತಿ ಕ್ರಮವಹಿಸಲಾಗುತ್ತಿದೆ ;

(ಉ) ಪ್ರತಿ ವರ್ಷ ಕಂಬಳ ಕ್ರೀಡೆಗೆ ನೀಡುವ ಅನುದಾನವನ್ನು ಇಲಾಖಾ ಕ್ರಿಯಾ ಯೋಜನೆಯಲ್ಲಿ ಸೇರಿಸಲು ಕೈಗೊಂಡ ಕ್ರಮಗಳೇನು ; ಈ ಕುರಿತಂತೆ ನಿಯಮಗಳನ್ನು ಯಾವಾಗ ರೂಪಿಸಲಾಗುವುದು ?

## ಮಂಗಳೂರು ಪಿಲಿಕುಳ ಪ್ರಾಧಿಕಾರವನ್ನು ರಚಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೧ (೫೨೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನಲ್ಲಿ ಪಿಲಿಕುಳ ಪ್ರಾಧಿಕಾರವನ್ನು ರಚಿಸಲು ಬೇಡಿಕೆಯಿದ್ದು , ಈ ಕುರಿತು ಸರಕಾರ ಏನು ಕ್ರಮವಹಿಸಿದೆ ; ಯಾವಾಗ ಪ್ರಾಧಿಕಾರವನ್ನು ರಚಿಸಲಾಗುವುದು ;

(ಆ) ಪಿಲಿಕುಳ ಮೃಗಾಲಯದಲ್ಲಿರುವ ಪ್ರಾಣಿಗಳನ್ನು ವಿವಿಧ ದೇಶಗಳ ಪ್ರಾಣಿ ಸಂಗ್ರಾಹಾಲಯದಿಂದ ವಿನಿಮಯ ಮಾಡಿಕೊಂಡು ಅಂತರಾಷ್ಟ್ರೀಯ ನಿಸರ್ಗಧಾಮವನ್ನಾಗಿ ಅಭಿವೃದ್ಧಿ ಪಡಿಸಲು ಮನವಿ ಸಲ್ಲಿಸಿದ್ದು, ಈ ಕುರಿತು ಕ್ರಮ ವಹಿಸಿದೆಯೇ ? ಹಾಗಿದ್ದಲ್ಲಿ, ಯಾವಾಗ ಕ್ರಮ ವಹಿಸಲಾಗುವುದು ;

(ಇ) ಈ ಪ್ರಾಧಿಕಾರವನ್ನು ರಚಿಸದಿರುವ ಕಾರಣ ಅಲ್ಲಿಯ ಮೃಗಾಲಯ ಮತ್ತು ವಿಜ್ಞಾನ ಕೇಂದ್ರಗಳ ನಿರ್ವಹಣೆ ಮೇಲ್ವಿಚಾರಣೆಗೆ ಪೂರ್ಣಕಾಲಿಕ ಅಧಿಕಾರಿಗಳು ಇಲ್ಲದಿರುವುದನ್ನು ಗಮನಿಸಿ ಯಾವಾಗ ಪೂರ್ಣಕಾಲಿಕ ಅಧಿಕಾರಿಗಳನ್ನು ನೇಮಿಸಲು ಉದ್ದೇಶಿಸಿದೆ ;

(ಈ) ಪಿಲಿಕುಳ ನಿಸರ್ಗಧಾಮದ ಸಿಬ್ಬಂದಿಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದ ಕಾರಣ ಕಳೆದ 20 ವರ್ಷಗಳಿಂದ ಅಧಿಕಾರಿಗಳ ಸೇವಾ ಭದ್ರತೆಯಿಲ್ಲದೆ ಕಡಿಮೆ ವೇತನದಲ್ಲಿ ಬದುಕುತ್ತಿದ್ದು ಈ ಕುರಿತು ಸರಕಾರ ಯಾವಾಗ ಅಗತ್ಯ ಕ್ರಮ ಕೈಗೊಳ್ಳುವುದೆ ?

## ರಾಜ್ಯದಲ್ಲಿ ನಡೆಯುತ್ತಿರುವ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ ಕಠಣ ಕ್ರಮ ಜರುಗಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೨ (೫೩೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ವರ್ಷದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನಡೆದಿರುವ ಅತ್ಯಾಚಾರ, ಕೊಲೆ, ದರೋಡೆ, ಡಕಾಯತಿ, ಇತ್ಯಾದಿ ಪ್ರಕರಣಗಳ ಸಂಖ್ಯೆಯೆಷ್ಟು ; ಅವುಗಳಲ್ಲಿ ಡ್ರಗ್ ಮಾಫಿಯಾ ಹಾವಳಿಯ ಸಂಬಂಧವಿರುವ ಪ್ರಕರಣಗಳು ಎಷ್ಟು ;

(ಆ) ವಿದ್ಯಾರ್ಥಿಗಳು ಮತ್ತು ಯುವಕರು ಮಾದಕ ವ್ಯಸನಗಳಿಗೆ ಬಲಿಯಾಗುತ್ತಿದ್ದು ಇಸ್ಪೀಟು, ಮಟ್ಕಾ, ಅತ್ಯಾಚಾರ ಪ್ರಕರಣದಲ್ಲಿ ಡ್ರಗ್ ಮಾಫಿಯಾದ ಪಾತ್ರವಿರುವ ಬಗ್ಗೆ ಸಂಶಯವಿರುವುದರಿಂದ ಇಲ್ಲಿಯವರೆಗೆ ಎಷ್ಟು ಮಾದಕ ವ್ಯಸನ ಪ್ರಕರಣಗಳನ್ನು ಬೇಧಿಸಿ ಶಿಕ್ಷೆಗೆ ಗುರಿಪಡಿಸಲಾಗಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೆಚ್ಚುತ್ತಿರುವ ಅಪರಾಧ ಪ್ರಕರಣಗಳ ಹಿನ್ನಲೆಯಲ್ಲಿ ಈ ಜಿಲ್ಲೆಗಳಲ್ಲಿ ಆರ್ಥಿಕ ವ್ಯವಹಾರಗಳಲ್ಲಿ ಹೂಡಿಕೆಗೆ ತೊಂದರೆಯಾಗುತ್ತಿದ್ದು ಅಪರಾಧ ಪ್ರಕರಣಗಳನ್ನು ನಿಯಂತ್ರಿಸುವಲ್ಲಿ ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುತ್ತಿದೆ ;

(ಈ) ರಾಜ್ಯದಲ್ಲಿ ನಡೆಯುತ್ತಿರುವ ವಿವಿಧ ಸಂಕೀರ್ಣ ರೀತಿಯ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ ಇರುವ ಕಾನೂನುಗಳು ಹಳೆಯದಾಗಿದ್ದು ಅದನ್ನು ತಿದ್ದುಪಡಿ ಮಾಡಲು ಯಾವಾಗ ಕ್ರಮ ವಹಿಸಲಾಗುವುದು ?

# ಕರ್ನಾಟಕದಲ್ಲಿ ಹೊಸದಾಗಿ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸಮುದಾಯಗಳ ಸೇರ್ಪಡೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೩ (೫೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದಲ್ಲಿ ಏಕೀಕರಣದ ನಂತರ ಇಲ್ಲಿಯವರೆಗೆ ಯಾವ ಪರಿಶಿಷ್ಟ ಸಮುದಾಯಗಳ ಹೆಸರನ್ನು ಕೇಂದ್ರ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಲಾಗಿದೆ ; ಹೀಗೆ ಕೇಂದ್ರ ಸರಕಾರಕ್ಕೆ ಶಿಫಾರಸು ಮಾಡಲು ರಾಜ್ಯಕ್ಕೆ ಅವಕಾಶವಿದೆಯೇ ;

(ಆ) ಈ ರೀತಿ ಹೊಸದಾಗಿ ಪರಿಶಿಷ್ಟ ಪಂಗಡಗಳ ಹೆಸರನ್ನು ಕೇಂದ್ರ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಈ ಶಿಫಾರಸ್ಸುಗಳನ್ನು ಮಾಡಲು ಯಾವ ರೀತಿಯ ನಿಯಮಾವಳಿಗಳನ್ನು ರೂಪಿಸಲಾಗಿದೆ ;

(ಇ) ಈ ಬಗ್ಗೆ ವಿಷಯದಲ್ಲಿ ಸ್ಪಷ್ಟೀಕರಣ ಮಾಹಿತಿ ಕೋರಿ ಪತ್ರಗಳು ಕೇಂದ್ರ ಸರಕಾರದಿಂದ ಮಾಹಿತಿ ಸ್ವೀಕರಿಸಲ್ಪಟ್ಟಿದೆ; ಎಷ್ಟು ಪತ್ರಗಳಿಗೆ ಸೂಕ್ತ ಸ್ಪಷ್ಟೀಕರಣ/ಮಾಹಿತಿ ನೀಡಿದೆ ; (ಎರಡೂ ದಿನಾಂಕ ಸಹಿತ ವಿವರ ನೀಡುವುದು)

(ಈ) ಪರಿಶಿಷ್ಟ ಪಂಗಡಗಳ ಪಟ್ಟಿಗೆ ಯಾವುದೇ ಸಮುದಾಯದ ಹೆಸರನ್ನು ಸೇರಿಸುವಾಗ ವಿವಿಧ ಪ್ರಾಧಿಕಾರಗಳು ಕೇಳುವ ಮಾಹಿತಿಗಳನ್ನು ಸಮರ್ಪಕವಾಗಿ ಒದಗಿಸುವ ಬಗ್ಗೆ ಸೂಕ್ತ ಸಮಯದಲ್ಲಿ ಪತ್ರ ವ್ಯವಹಾರಗಳನ್ನು ಹಾಗೂ ಈ ಕುರಿತ ಇತರ ಮಾಹಿತಿಗಳನ್ನು ನೀಡದ ಕಾರಣ ಕೆಲವು ಪಂಗಡಗಳು ಪರಿಶಿಷ್ಟ ಪಂಗಡಗಳ ಪಟ್ಟಿಯಿಂದ ಹೊರಗುಳಿದಿರುವ ಬಗ್ಗೆ ಸರಕಾರ ಯಾವ ರೀತಿ ಕ್ರಮ ವಹಿಸುತ್ತಿದೆ ?

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖಾ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೪ (೫೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ಇಲಾಖೆಗಳಲ್ಲಿ ನಿವೃತ್ತ ಅಧಿಕಾರಿ ಸಿಬ್ಬಂದಿಗಳನ್ನು ಬಿಡುಗಡೆಗೊಳಿಸಲು ಸೂಚಿಸಲಾಗಿದ್ದ ಆದೇಶವನ್ನು ಪಾಲಿಸಲಾಗಿದೆಯೇ ; (ವಿವರಿಸುವುದು)

(ಆ) ರಾಜ್ಯದ ಸುಮಾರು ೪೨ ಇಲಾಖೆಗಳಲ್ಲಿ ೨೨ ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳು ಇಲ್ಲದಿರುವುದರಿಂದ ಮತ್ತು ರಚಿಸಲು ಸೂಚಿಸಲಾಗಿದ್ದ ಆದೇಶದಂತೆ ಎಷ್ಟು ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆ ; ಇನ್ನು ಬಾಕಿ ಉಳಿದಿರುವ ಇಲಾಖೆಗಳಿಗೆ ಮತ್ತು ಸಂಸ್ಥೆಗಳಲ್ಲಿ ಯಾವಾಗ ರಚಿಸಲಾಗುವುದು ;

(ಇ) ರಾಜ್ಯದಲ್ಲಿ ಯಾವ ಯಾವ ಇಲಾಖೆ ಹಾಗೂ ಇತರ ಸರಕಾರಿ ಅರೆ ಸರಕಾರಿ ಸಂಸ್ಥೆಗಳಿಗೆ ಎಚ್.ಆರ್.ಎಂ.ಎಸ್. ಮೂಲಕ ವೇತನ/ ಭತ್ಯೆ ನೀಡಲಾಗುತ್ತಿದೆ; ಎಚ್.ಆರ್.ಎಂ.ಎಸ್. ರಹಿತವಾಗಿ ವೇತನವಾಗುವ ಸರಕಾರಿ ಸಂಸ್ಥೆಗಳು ಯಾವುವು; ಯಾವಾಗ ಎಲ್ಲಾ ಸರಕಾರಿ ಇಲಾಖೆ ಮತ್ತು ಸಂಸ್ಥೆಗಳನ್ನು ಎಚ್.ಆರ್.ಎಂ.ಎಸ್ ನ ವ್ಯಾಪ್ತಿಗೆ ತರಲಾಗುವುದು ?

## ಮೈಸೂರು ಜಿಲ್ಲೆಯ ಕೆರೆಕಟ್ಟೆಗಳನ್ನು ತುಂಬಿಸುವ ಬಗ್ಗೆ

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೫ (೪೭೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿ ಬಿದ್ದ ಮಳೆಯ ಪ್ರಮಾಣವೆಷ್ಟು ; ಬಿದ್ದ ಮಳೆಗೆ ಎಷ್ಟು ಕೆರೆಕಟ್ಟೆಗಳು ಭರ್ತಿಯಾಗಿವೆ ;

(ಆ) ಮೈಸೂರು ತಾಲ್ಲೂಕಿನ ಉದಗೂರು, ಜಯಪುರ, ಹಾರೋಹಳ್ಳಿ ಹಾಗೂ ಇನ್ನಿತರೆ ಕೆರೆಗಳು ಭರ್ತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕೆರೆಗಳೂ ಸೇರಿದಂತೆ ಮಳೆ ಕೊರತೆಯಿರುವ ಭಾಗಗಳ ಕೆರೆ ಕಟ್ಟೆಗಳನ್ನು ತುಂಬಿಸುವುದಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೇ ; ಕ್ರಮ ಕೈಗೊಳ್ಳದಿದ್ದಲ್ಲಿ, ಕಾರಣಗಳೇನು ?

## ರಾಜ್ಯದ ಎಲ್ಲಾ ಪೋಲಿಸರಿಗೆ ಪಿ–ಕ್ಯಾಪ್ ನೀಡುವ ಕುರಿತು

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೬ (೪೬೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಪೊಲೀಸರಿಗೂ ಕೇರಳ, ಆಂಧ್ರಪ್ರದೇಶ ಮತ್ತು ತಮಿಳುನಾಡು ಪೊಲೀಸರ ಮಾದರಿಯಲ್ಲಿ ಪಿ–ಕ್ಯಾಪ್ ನೀಡಬೇಕೆನ್ನುವ ಪ್ರಸ್ತಾವನೆ ಹಲವು ವರ್ಷಗಳಿಂದ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈವರೆಗೂ ಪಿ–ಕ್ಯಾಪ್ ನೀಡದಿರಲು ಕಾರಣಗಳೇನು; ಪಿ–ಕ್ಯಾಪ್ ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ ಕಟ್ಟಡಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೭ (೫೪೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲಾ ನ್ಯಾಯಾಲಯ ಮತ್ತು ಸತ್ರ ನ್ಯಾಯಾಲಗಳ ನೂತನ ಕಟ್ಟಡಗಳನ್ನು ನಿರ್ಮಿಸಲಾಗಿದೆ ; (ವಿವರ ಒದಗಿಸುವುದು)

(ಆ) ಚಿತ್ರದುರ್ಗ ಜಿಲ್ಲೆಯಲ್ಲಿ ಇರುವ ಜಿಲ್ಲಾ ನ್ಯಾಯಾಲಯ ಮತ್ತು ಸತ್ರ ನ್ಯಾಯಾಲಯುದ ಕಟ್ಟಡವನ್ನು ನಿರ್ಮಿಸಲು ಸ್ಥಳ ನಿಗಧಿಪಡಿಸಲಾಗಿದೆಯೇ ; (ವಿವರ ಒದಗಿಸುವುದು)

(ಇ) ಹಾಗಿದ್ದಲ್ಲಿ, ಜಿಲ್ಲಾ ನ್ಯಾಯಾಲಯ ನೂತನ ಕಟ್ಟಡ ನಿರ್ಮಾಣ ಮಾಡಲು ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ;

(ಈ) ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಎಷ್ಟು ಜನ ಅಭಿಯೋಜಕರು ಕಾರ್ಯನಿರ್ವಹಿಸುತ್ತಿದ್ದಾರೆ ; ಈ ಅಭಿಯೋಜಕರು ಸರ್ಕಾರಕ್ಕೆ ಶೇಕಡವಾರು ಎಷ್ಟು ಪ್ರಮಾಣದ ಮೊಕದಮೆಗಳು ಸರ್ಕಾರದ ಪರವಾಗಿ ತೀರ್ಪು ಬರಲು ಕಾರ್ಯನಿರ್ಹಿಸಿದ್ದಾರೆ ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಅಣೆಕಟ್ಟುಗಳ ಸುರಕ್ಷತೆಯ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೮ (೫೪೭) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅಣೆಕಟ್ಟುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿರುವ ಎಲ್ಲಾ ಡ್ಯಾಂ ಗಳ ಸುರಕ್ಷತೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಡ್ಯಾಮ್‌ಗಳ ಸುರಕ್ಷತೆಗಾಗಿ ಸರ್ಕಾರ ಸಮಿತಿಗಳನ್ನು ರಚಿಸಿದೆಯೇ ರಚಿಸಿದ್ದಲ್ಲಿ ಸಮಿತಿಗಳ ವಿವರ ನೀಡುವುದು ;

(ಈ) ವಾಣಿವಿಲಾಸ್ ಡ್ಯಾಮ್ ಕ್ರಸ್ಟ್ ಗೇಟ್ ಅಳವಡಿಕೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಈ ಕ್ರಸ್ಟ್ ಗೇಟ್‌ನ್ನು ಯಾವ ಕಾಲಮಿತಿಯೊಳಗೆ ಅಳವಡಿಸಲಾಗುವುದು ? (ವಿವರ ಒದಗಿಸುವುದು)

## ರಾಜ್ಯ ಸರ್ಕಾರಕ್ಕೆ ಜಿ.ಎಸ್.ಟಿ.ಯಿಂದ ಸಂಗ್ರಹವಾಗುತ್ತಿರುವ ಆದಾಯದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೯ (೫೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ರ ಸಾಲಿನಲ್ಲಿ ಮತ್ತು ೨೦೨೪-೨೫ ನವೆಂಬರ್‌ರವರೆಗೆ ರಾಜ್ಯದಲ್ಲಿ ಪ್ರತಿ ಮಾಹೆಯಾನ ಜಿ.ಎಸ್.ಟಿ. ಅಡಿಯಲ್ಲಿ ಸಂಗ್ರಹವಾಗುತ್ತಿರುವ ಮೊತ್ತವೆಷ್ಟು ;

(ಆ) ಕಳೆದ ಒಂದು ವರ್ಷದಲ್ಲಿ ಎಷ್ಟು ಜಿ.ಎಸ್.ಟಿ, ಸಂಖ್ಯೆಗಳನ್ನು ರದ್ದು ಮಾಡಲಾಗಿದೆ ; (ವಿವರ ನೀಡುವುದು)

(ಇ) ಈವರೆಗೆ ರಾಜ್ಯದಲ್ಲಿ ಜಿ.ಎಸ್.ಟಿ. ಸಂಖ್ಯೆಗಳ ಮೇಲೆ ಎಷ್ಟು ಕೇಸುಗಳನ್ನು ದಾಖಲೆ ಮಾಡಲಾಗಿದೆ ? (ವಿವರ ನೀಡುವುದು)

## ಚಿತ್ರದುರ್ಗ ಜಿಲ್ಲೆಯಲ್ಲಿ ಇರುವ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೦ (೫೪೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕೆರೆಗಳಿವೆ ; (ವಿವರ ಒದಗಿಸುವುದು)

(ಆ) ಈ ಪೈಕಿ ಯಾವ ಯಾವ ಕೆರೆಗಳಿಗೆ ಏತ ನೀರಾವರಿ ಯೋಜನೆ ಮೂಲಕ ನೀರು ತುಂಬಿಸಲಾಗಿದೆ ; ಬಾಕಿ ಇರುವ ಕೆರೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಕಿ ಇರುವ ಕೆರೆಗಳಿಗೆ ಏತ ನೀರಾವರಿ ಮೂಲಕ ನೀರು ತುಂಬಿಸಲು ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಎಷ್ಟು ಅನುದಾನ ನೀಡಲಾಗಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ದಾಖಲಾಗಿರುವ ರೌಡಿಶೀಟರ್‌ಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೧ (೫೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ: 01.06.2023ರ ನಂತರ ರಾಜ್ಯದಲ್ಲಿ ರೌಡಿಶೀಟರ್‌ಗಳ ಮೇಲೆ ದಾಖಲಾಗಿರುವ ಕೇಸ್‌ಗಳು ಎಷ್ಟು ; (ಹೆಸರು ಮತ್ತು ವಿಳಾಸ ಜಿಲ್ಲಾವಾರು ವಿವರ ಒದಗಿಸುವುದು)

(ಆ) ದಿನಾಂಕ: 01.06.2023ರ ರಿಂದ ಇಲ್ಲಿಯವರೆಗೂ ಎಷ್ಟು ರೌಡಿಶೀಟರ್‌ಗಳನ್ನು ಬಿಡುಗಡೆ ಮಾಡಲಾಗಿದೆ ? (ಹೆಸರು ಮತ್ತು ವಿಳಾಸ ಜಿಲ್ಲಾವಾರು ವಿವರ ಒದಗಿಸುವುದು)

## ಬಿ.ಬಿ.ಎಂ.ಪಿ ವ್ಯಾಪ್ತಿಯ ರಸ್ತೆಗಳ ಅಗಲೀಕರಣದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೨ (೫೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಆರ್.ಟಿ.ನಗರ ಪೊಲೀಸ್ ಠಾಣೆಯಿಂದ ಡಾ:ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿ ಪಡಿಸಲು ಸುಮಾರು 25 ವರ್ಷಗಳ ಹಿಂದೆ ಯೋಜಿಸಿದ್ದು, ಇಲ್ಲಿಯವರೆಗೆ ಈ ಯೋಜನೆಯನ್ನು ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು ;

(ಆ) ಇದರಿಂದಾಗಿ ವಾಹನ ಸವಾರರು, ಆಂಬ್ಯುಲೆನ್ಸ್ ಮತ್ತು ಇತರೆ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಉಂಟಾಗುವುದಲ್ಲದೇ ವಾಹನ ದಟ್ಟಣೆಯಿಂದ ಪರಿಸರದ ಮೇಲೆಯು ಅಡ್ಡ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಇದರಂತೆಯೇ ಟ್ಯಾನರಿ ರಸ್ತೆಯನ್ನು (ಟ್ಯಾನರಿ ರಸ್ತೆಯ ಕಸಾಯಿ ಖಾನೆಯಿಂದ ನಾಗವಾರದವರೆಗೆ) ಸಹ ಅಗಲೀಕರಣಗೊಳಿಸಿ ಅಭಿವೃದ್ಧಿಪಡಿಸಲು ಯೋಜಿಸಲಾಗಿದ್ದು, ಈಗ ಈ ಭಾಗದಲ್ಲಿ ಮೆಟ್ರೋ ಕಾರ್ಯ ಪ್ರಾರಂಭವಾಗಿರುವುದರಿಂದ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಮತ್ತು ಅಡಚಣೆಗಳು ಉಂಟಾಗುತ್ತಿದ್ದು, ಯಾವುದೇ ಪರ್ಯಾಯ ವ್ಯವಸ್ಥೆಯು ಇಲ್ಲದಿರುವ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ಮತ್ತು ಈ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ಒದಗಿಸುವುದು)

## ವಿಸಾ ಅವಧಿ ಮುಗಿದಿದ್ದರೂ ಅಕ್ರಮವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಬಗ್ಗೆ

ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-

೪೧೩ (೫೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಬೆಂಗಳೂರಿನಲ್ಲಿ ವಿದ್ಯಾಭ್ಯಾಸಕ್ಕಾಗಿ ಅಥವಾ ಇನ್ನಿತರೆ ಉದ್ದೇಶಗಳಿಗಾಗಿ ವಿದೇಶಗಳಿಂದ ಬಂದಿರುವ ವಿದೇಶಿಯರು ಅವರ ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿ ಸ್ಥಳೀಯ ಕಾನೂನನ್ನು ಉಲ್ಲಂಘಿಸಿ ಶಾಂತಿ ಸುವ್ಯವಸ್ಥೆಗೆ ಭಂಗ ತಂದು ಗಲಭೆಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಮೇಲೆ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಏನು ಕ್ರಮ ಕೈಗೊಂಡಿದೆ ಮತ್ತು ಈ ರೀತಿ ಕಾನೂನು ಬಾಹಿರವಾಗಿ ಯಾವ ದೇಶದ ವಿದೇಶಿಯರು ಹೆಚ್ಚಾಗಿ ನೆಲೆಸಿದ್ದಾರೆ ; (ಮಾಹಿತಿ ನೀಡುವುದು)

(ಆ) ಬೆಂಗಳೂರಿನಲ್ಲಿ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಜಾಲ ಬಹುದೊಡ್ಡದಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಹಾವಳಿಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರಿನಲ್ಲಿ ಎಷ್ಟು ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟಗಾರರನ್ನು ಬಂಧಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ? (ವಿವರ ನೀಡುವುದು)

## ಸಣ್ಣ ನೀರಾವರಿ ಯೋಜನೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೪ (೫೩೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಎಷ್ಟು ಸಣ್ಣ ನೀರಾವರಿ ಯೋಜನೆಗಳು ಪರಿಸರ/ಅರಣ್ಯ ಇಲಾಖೆಯ ಅನುಮತಿ/ಮಂಜೂರಾತಿಗಾಗಿ ಬಾಕಿ ಉಳಿದುಕೊಂಡಿವೆ ; (ಹಾಗಿದ್ದಲ್ಲಿ, ಯೋಜನೆಗಳ ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

(ಆ) ಈ ಯೋಜನೆಗಳಿಗೆ ಪರಿಸರ/ಅರಣ್ಯ ಇಲಾಖೆಯ ಅನುಮತಿ/ ಮಂಜೂರಾತಿಯ ವಿಳಂಬಕ್ಕೆ ಕಾರಣಗಳೇನು ಮತ್ತು ಪ್ರಸ್ತುತ ವರ್ಷದಲ್ಲಿ ಸರ್ಕಾರದಿಂದ ಮಂಜೂರಾದ ಸಣ್ಣ ನೀರಾವರಿ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಬಾಕಿ ಉಳಿದಿರುವ ಯೋಜನೆಗಳನ್ನು ಮುಂದುವರಿಸಲು ಸರ್ಕಾರ ಕೈಗೊಂಡಿರುವ/ಪ್ರಸ್ತಾಪಿತ ಕ್ರಮಗಳು ಏನು ?

## ರಾಜಕೀಯ ಕೊಡುಗೆಗಳ ಮೇಲೆ ನಿರ್ಬಂಧದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೫ (೫೩೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚುನಾವಣೆ ಸಂದರ್ಭದಲ್ಲಿ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಡುಗೊರೆಗಳು ಹಾಗೂ ಕಾಣಿಕೆಗಳನ್ನು ಹಂಚುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಚುನಾವಣೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅನುತ್ಪಾದಕ ಉಡುಗೊರೆಗಳು ಮತ್ತು ಕೊಡುಗೆಗಳನ್ನು ನಿರ್ಬಂಧಿಸಲು ಈಗಾಗಲೇ ಹಲವಾರು ಸುತ್ತೋಲೆ ಹಾಗೂ ಸರ್ಕಾರಿ ಆದೇಶಗಳು ಇದ್ದರೂ ಈ ಆದೇಶಗಳನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರ ವಿಫಲವಾಗಿವೆಯೇ ; ಈ ಉಡುಗೊರೆಗಳು ಮತ್ತು ಕೊಡುಗೆಗಳನ್ನು ನಿರ್ಬಂಧಿಸಲು ಸರ್ಕಾರ ನೀತಿಗಳಲ್ಲಿ ಮತ್ತು ಕಾರ್ಯವಿಧಾನಗಳಲ್ಲಿ ತಿದ್ದುಪಡಿಗಳನ್ನು ತರಲು ಯೋಜಿಸಿದೆಯೇ ;

(ಇ) ಇತ್ತೀಚಿನ ದಿನಗಳಲ್ಲಿ ಚುನಾವಣೆ ವೆಚ್ಚಗಳು ದುಬಾರಿಯಾಗುತ್ತಿರುವುದರಿಂದ ಅರ್ಹ ವ್ಯಕ್ತಿಗಳು ಚುನಾವಣೆಯಲ್ಲಿ ಸ್ಪರ್ಧಿಸಲು ಸಾಧ್ಯವಾಗದೇ ಇರುವುದರಿಂದ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲು ಚಿಂತಿಸಿದೆ ;

(ಈ) ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಗಳಲ್ಲಿ ಶೇ.33ರಷ್ಟು ಮಹಿಳಾ ಮೀಸಲಾತಿಯನ್ನು ಯಾವ ವರ್ಷದಿಂದ ಜಾರಿಗೊಳಿಸಲು ಸರ್ಕಾರ ಚಿಂತಿಸಿದೆ ?

## ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೪೧೬ (೪೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳು ಗೊಂದಲಕ್ಕೆ ಈಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮ ಮತ್ತು ಪ್ರಸಕ್ತ ವರ್ಷದಲ್ಲಿ ಎಷ್ಟು ಅವಾಂತರಗಳನ್ನು ಆಯೋಗವು ಮಾಡಿದೆ ; (ವಿವರ ನೀಡುವುದು)

(ಆ) ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಯ ಯಡವಟ್ಟಿನಿಂದ ರಾಜ್ಯದ ಉದ್ಯೋಗಾಕಾಂಕ್ಷಿಗಳು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರಿಸುವುದು)

(ಇ) ಕಳೆದ ೦೧ ವರ್ಷದಲ್ಲಿ ಸದರಿ ಅಯೋಗವು ನಡೆಸುವ ಪರೀಕ್ಷೆಯಲ್ಲಿನ ನ್ಯೂನ್ಯತೆಗಳಿಗೆ ಹೊಣೆ ಯಾರು ; ಹೊಣೆಯಾದವರ ವಿರುದ್ಧ ಯಾವ ಕ್ರಮಗಳನ್ನು ಜರುಗಿಸಲಾಗಿದೆ ; ಜರುಗಿಸಿದ್ದಲ್ಲಿ ಯಾವ ಯಾವ ಅಧಿಕಾರಿಗಳ ವಿರುದ್ಧ ಯಾವ ಯಾವ ಕ್ರಮಗಳನ್ನು ಜರುಗಿಸಲಾಗಿದೆ ; ಜರುಗಿಸದಿದ್ದಲ್ಲಿ ಯಾವ ಕಾರಣಕ್ಕಾಗಿ ಜರುಗಿಸಿರುವುದಿಲ್ಲ ; (ಈ ಕುರಿತು ಸಂಪೂರ್ಣ ಮಾಹಿತಿ ಮತ್ತು ಸೂಕ್ತ ಕಾರಣದೊಂದಿಗೆ ವಿವರಿಸುವುದು)

(ಈ) ಈ ಆಯೋಗದ ಪರೀಕ್ಷೆ ನಡೆಸುವ ಯಡವಟ್ಟಿನಿಂದಾಗಿ ಉದ್ಯೋಗಾಕಾಂಕ್ಷಿಗಳು ಆಯೋಗದ ಮೇಲೆ ವಿಶ್ವಾಸ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳೇನು ?

## ಪ್ರವಾಸೋದ್ಯಮ ಇಲಾಖೆಯಲ್ಲಿನ ನಿಗಮಗಳ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೪೧೭ (೪೬೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿರುವ ನಿಗಮ/ಮಂಡಳಿ ಮತ್ತು ಅಂಗ ಸಂಸ್ಥೆಗಳು ಯಾವುವು ; ಈ ನಿಗಮ/ಮಂಡಳಿ ಮತ್ತು ಅಂಗ ಸಂಸ್ಥೆಗಳ ಹಾಲಿ ಹಣಕಾಸಿನ ಸ್ಥಿತಿ-ಗತಿ ಹೇಗಿದೆ ; (ಕಳೆದ ೦೩ ವರ್ಷಗಳ ವಿವರ ನೀಡುವುದು)

(ಆ) ಹಣಕಾಸು ಇಲಾಖೆಯ ಮಾರ್ಗಸೂಚಿ ಉಲ್ಲಂಘಿಸಿ ಮಾರ್ಗ ಪಲ್ಲಟ ಮಾಡಿ ಬೇರೆಡೆ ಠೇವಣಿ ಇಟ್ಟಿರುವ ಹಣವನ್ನು ಮುಖ್ಯವಾಹಿನಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಒಟ್ಟು ಎಷ್ಟು ಹಣವನ್ನು ಮಾರ್ಗ ಪಲ್ಲಟ ಮಾಡಿ ಬೇರೆ ಕಡೆ ಠೇವಣಿ ಇಡಲಾಗಿದೆ ; (ನಿಗಮ/ಮಂಡಳಿ ಮತ್ತು ಅಂಗಸಂಸ್ಥೆಗಳ ಪ್ರತ್ಯೇಕ ವಿವರ ನೀಡುವುದು)

(ಇ) ಈವರೆಗೆ ಎಷ್ಟು ಮೊತ್ತವನ್ನು ಮುಖ್ಯವಾಹಿನಿಗೆ ತರಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಮಾರ್ಗಸೂಚಿಗೆ ವಿರುದ್ಧವಾಗಿ ಬೇರೆಡೆ ಠೇವಣಿ ಇಡಲು ಕಾರಣಕರ್ತರಾದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಏತ ನೀರಾವರಿಗಳ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೪೧೮ (೪೬೧) ಮಾನ್ಯ ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಏತ ನೀರಾವರಿ ಯೋಜನೆಗಳು ಯಾವುವು ; ಈ ಏತ ನೀರಾವರಿ ಯೋಜನೆಗಳ ಕಾಮಗಾರಿ ಅರಂಭಗೊಂಡಿದ್ದು ಯಾವಾಗ ; ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಸದರಿ ಏತ ನೀರಾವರಿ ಯೋಜನೆಗಳಿಂದ ಆಗಿರುವ ಮತ್ತು ಆಗುತ್ತಿರುವ ಪ್ರಯೋಜನಗಳೇನು ; ಇವುಗಳ ಕಾರ್ಯ ನಿರ್ವಹಣೆ ಕುರಿತು ಅಧ್ಯಯನ ನಡೆದಿದೆಯೇ ; (ಯೋಜನೆವಾರು ವಿವರ ನೀಡುವುದು)

(ಇ) ಇನ್ನೂ ಪ್ರಗತಿಯಲ್ಲಿರುವ ಮತ್ತು ಅನುಷ್ಠಾನದಲ್ಲಿ ವಿಳಂಬವಾಗಿರುವ ಏತ ನೀರಾವರಿ ಯೋಜನೆಗಳು ಯಾವುವು ;

(ಈ) ಏತ ನೀರಾವರಿ ಯೋಜನೆಗಳ ಪ್ರಯೋಜನ, ವೈಫಲ್ಯ ಕುರಿತು ಆಡಿಟ್ ನಡೆಸಲಾಗಿದೆಯೇ ; (ಆಡಿಟ್ ವರದಿ ನೀಡುವುದು) ಏತ ನೀರಾವರಿ ಯೋಜನೆಯಿಂದ ಸರ್ಕಾರಕ್ಕೆ ನಷ್ಟವುಂಟಾಗುತ್ತಿದೆಯೇ ? (ಯೋಜನವಾರು ವಿವರ ನೀಡುವುದು)

## ಬೆಳಗಾವಿ ಸುವರ್ಣ ವಿಧಾನ ಸೌಧಕ್ಕೆ ಸರ್ಕಾರಿ ಕಛೇರಿಗಳನ್ನು ಸ್ಥಳಾಂತರಿಸುವ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೪೯೯ (೫೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರದ ಒಟ್ಟು ಕಛೇರಿಗಳ ಸಂಖ್ಯೆ ಎಷ್ಟು ; ಇಲಾಖಾವಾರು ಮಾಹಿತಿ ನೀಡುವುದು ; ಬಾಕಿ ಉಳಿದ ಇಲಾಖೆಗಳು ಎಷ್ಟು ; ಹಾಗೂ ವಿವಿಧ ಇಲಾಖೆಗಳ ಕಛೇರಿಗಳನ್ನು ಸ್ಥಳಾಂತರಿಸಲು ಇರುವ ಅಡಚಣೆಗಳೇನು ; ಸ್ಥಳಾಂತರಿಸದಿರಲು ಕಾರಣಗಳೇನು ;

(ಆ) ಆ ಭಾಗದ ರೈತರ, ಸಾರ್ವಜನಿಕರ ಮತ್ತು ನೌಕರರುಗಳ ಸಾಕಷ್ಟು ಕೆಲಸ ಕಾರ್ಯಗಳಿಗೆ ಬೆಂಗಳೂರಿಗೆ ಬಂದು ಹೋಗಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ತೊಂದರೆ ನಿವಾರಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; (ಕಾರಣಗಳೊಂದಿಗೆ ವಿವರಿಸುವುದು)

(ಇ) ಸಮಗ್ರ ಉತ್ತರ ಕರ್ನಾಟಕ ಭಾಗದ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರದ ಕಛೇರಿಗಳನ್ನು ಬೆಳಗಾವಿಯ ಸುವರ್ಣ ವಿಧಾನ ಸೌಧಕ್ಕೆ ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಯಾವ ಕಾಲಮಿತಿಯೊಳಗೆ ಸ್ಥಳಾಂತರಿಸಲಾಗುವುದು ? (ಮಾಹಿತಿ ನೀಡುವುದು)

## ವಿವಿಧ ಜಿಲ್ಲಾ ನೇಮಕಾತಿ ಪ್ರಾಧಿಕಾರಗಳು ಒಂದೇ ದಿನಾಂಕದಂದು ನೇಮಕಾತಿ ಆದೇಶ ಹೊರಡಿಸುವ ಮತ್ತು ಜೇಷ್ಠತೆಯನ್ನು ನಿರ್ಧರಿಸುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೦ (೪೩೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ಜಿಲ್ಲಾ ಕೇಡರ್ ಹುದ್ದೆಗಳಿಗೆ ರಾಜ್ಯ ಮಟ್ಟದಲ್ಲಿ ಒಂದೇ ಕೇಂದ್ರಿಕೃತ ಆಯ್ಕೆ ಪ್ರಾಧಿಕಾರ ಮುಖಾಂತರ ಒಂದೇ ಅಧಿಸೂಚನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿ, ಒಂದೇ ದಿನಾಂಕದಂದು ಪರೀಕ್ಷೆ ನಡೆಸಿ ಹಾಗೂ ಒಂದೇ ದಿನಾಂಕದಂದು ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದ್ದಲ್ಲಿ, ಈ ತಾತ್ಕಾಲಿಕ ಆಯ್ಕೆ ಪಟ್ಟಿಯ ಆಧಾರದ ಮೇಲೆ ವಿವಿಧ ಜಿಲ್ಲಾ ನೇಮಕಾತಿ ಪ್ರಾಧಿಕಾರಗಳು ಒಂದೇ ದಿನಾಂಕದಂದು ನೇಮಕಾತಿ ಆದೇಶ ಹೊರಡಿಸಬೇಕೆಂಬುದರ ಬಗ್ಗೆ ಸರ್ಕಾರದಲ್ಲಿ ಯಾವುದಾದರೂ ನಿಯಮ / ಆದೇಶವಿದೆಯೇ ; (ಇದ್ದಲ್ಲಿ, ಇದರ ಪ್ರತಿ ನೀಡುವುದು)

(ಆ) ಒಂದೇ ದಿನಾಂಕದಂದು ಜಿಲ್ಲಾವಾರು ಕೇಡರುಗಳಿಗೆ ನೇರ ನೇಮಕಾತಿ ಮುಖಾಂತರ ನೇಮಕಗೊಂಡ ನೌಕರರನ್ನು

ಒಗ್ಗೂಡಿಸಿ, ಒಂದು ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ ಸದರಿ ನೌಕರರ ನಡುವಿನ ಸಾಪೇಕ್ಷ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, ೧೯೫೭ರ ಯಾವ ನಿಯಮದ ಪ್ರಕಾರ ಸಿದ್ಧಪಡಿಸಬೇಕು ;

(ಇ) ಜೇಷ್ಠತೆಗೂ ಹಾಗೂ ಹುದ್ದೆ ಸ್ಥಿರೀಕರಣಕ್ಕೂ ಏನಾದರೂ ಸಂಬಂಧವಿದೆಯೇ ; (Is seniority linked with confirmation)

(ಈ) ಮಾನ್ಯ ರಾಜ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ: ೪೬೮೫-೪೬೮೮/೧೯೯೫ Lingaiah K and others Vs. State and Others ಆದೇಶದ ಪ್ಯಾರಾ ೩೩ರ ಪ್ರಕಾರ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, ೧೯೫೭ರ ನಿಯಮ ೫ ಎಷ್ಟು ಅವಧಿಯವರೆಗೆ ಜಾರಿಯಲ್ಲಿರುತ್ತದೆ ;

(ಉ) ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣೆ) ನಿಯಮಗಳು ೧೯೭೭ರ ನಿಯಮ ೬ರನ್ವಯ ಹುದ್ದೆ ಸ್ಥಿರೀಕರಣದ (Confirmation) ಅಂಶವನ್ನು ಜೇಷ್ಠತೆ ನಿರ್ಧರಿಸುವಾಗ ಪರಿಗಣಿಸಲು ಸದರಿ ಪ್ರಕರಣದಲ್ಲಿ ತಿಳಿಸಲಾಗಿದೆಯೇ ;

(ಊ) ಹಾಗಾದರೆ, ಒಂದೇ ದಿನಾಂಕದಂದು ನೇರ ನೇಮಕಾತಿ ಮುಖಾಂತರ ನೇಮಕವಾದ ನೌಕರರು ಬೇರೆ-ಬೇರೆ (೨ ವರ್ಷ ಹಾಗೂ ೨ವರ್ಷಗಳ ನಂತರ ಪರಿವೀಕ್ಷಣೆ ಅವಧಿ ಘೋಷಣೆ ಹೊಂದಿದಾಗ) ದಿನಾಂಕಗಳಲ್ಲಿ ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣೆ) ನಿಯಮಗಳು ೧೯೭೭ರ ನಿಯಮ ೬ರನ್ವಯ ಹುದ್ದೆ ಸ್ಥಿರೀಕರಣ ಹೊಂದಿದಾಗ ಸದರಿ ಕೆ.ಎ.ಟಿ. ಆದೇಶದ ಪ್ರಕಾರ ನೌಕರರ ನಡುವಿನ ಜೇಷ್ಠತೆಯನ್ನು ಯಾವ ರೀತಿ ನಿರ್ಧರಿಸಬೇಕು ?

## ವ್ಯಾಪಾರಿ ಚಟುವಟಿಕೆಗಳ ಉತ್ತೇಜನಕ್ಕೆ ೨೦೦ ಎಕರೆ ಪ್ರದೇಶವನ್ನು Unit–3 ರಲ್ಲಿ ಕಾಯ್ದಿರಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೧ (೫೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಡೀ ಏಷ್ಯಾ ಖಂಡದಲ್ಲಿ ನೀರಾವರಿ ಯೋಜನೆಯ ಅಡಿಯಲ್ಲಿ ಮುಳುಗಡೆಯಾಗಿರುವ ಬೃಹತ್ ವಾಣಿಜ್ಯ ನಗರ ಬಾಗಲಕೋಟೆ ಎಂಬುವುದು ನಿಜವೇ ;

(ಆ) ಉತ್ತರ ಕರ್ನಾಟಕದ ಪ್ರಮುಖ ವಾಣಿಜ್ಯ ಕೇಂದ್ರ ಎಂದು ಗುರುತಿಸಿಕೊಂಡು ಯು.ಕೆ.ಪಿ., ಅಡಿಯಲ್ಲಿ ಮುಳುಗಡೆಯಾಗಿರುವ ಪ್ರದೇಶದ ಜನರ ವಸತಿಗಾಗಿ ಜನವಸತಿಗೆ ನಿವೇಶನಗಳು ಹಾಗೂ ಸಣ್ಣ ಮತ್ತು ದೊಡ್ಡ, ಅತಿ ದೊಡ್ಡ ಅಂಗಡಿಗಳ ಮಾಲೀಕರಿಗೆ ನವನಗರದ ೧, ೨ ಮತ್ತು ೩ನೇ ಯುನಿಟ್ (Unit) ಗಳಲ್ಲಿ ಪರ್ಯಾಯವಾಗಿ ಮೂರು ನಾಲ್ಕು ಸೆಕ್ಟರ್‌ಗಳನ್ನು ಅಭಿವೃದ್ಧಿ ಪಡಿಸಿ ನಿವೇಶನಗಳನ್ನು ವಿತರಣೆ ಮಾಡಲಾಗಿದ್ದು, ಅಲ್ಲಿ ಅವಶ್ಯಕ ಜನಸಾಂದ್ರತೆ ಇರದ ಕಾರಣ ವ್ಯಾಪಾರ ಚಟುವಟಿಕೆಗಳಿಲ್ಲದೇ ವ್ಯಾಪಾರಸ್ಥರು ಬಹಳ ತೊಂದರೆ ಅನುಭವಿಸುತ್ತಿರುವುದು ; ನಿಜವೇ ;

(ಇ) ಮುಳುಗಡೆಯಿಂದ ತೊಂದರೆಗೊಳಗಾದ ಸಣ್ಣ ಮತ್ತು ದೊಡ್ಡ ವ್ಯಾಪಾರಸ್ಥರಿಗೆ ಒಂದೇ ಕಡೆ ಅಂಗಡಿಗಳನ್ನು ನಿರ್ಮಿಸಿ ಕೊಡಲು ಜಿಲ್ಲೆಯ ವ್ಯಾಪಾರಸ್ಥರು ಹಲವಾರು ವರ್ಷಗಳಿಂದ ಬೇಡಿಕೆ ಇಟ್ಟಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ನವನಗರದ ಯೂನಿಟ್ (UNIT) ೧,೨,೩, ವಿದ್ಯಾಗಿರಿ, ಹಳೆನಗರಕ್ಕೆ ಮಧ್ಯವರ್ತಿಯಾಗುವ ಪ್ರದೇಶದಲ್ಲಿ ಸುಮಾರು ೨೦೦

ಎಕರೆ ವಿಸ್ತೀರ್ಣದ ಪ್ರದೇಶದಲ್ಲಿ ಅಂಗಡಿಗಳನ್ನು ನಿರ್ಮಿಸಿ ಅಲ್ಲಿ ಸ್ಟೇಷನರಿ, ಕಿರಾಣಿ, ರೆಡಿಮೆಡ್, ಜ್ಯೂವೆಲರಿ,ಕಪಡಾ(ಬಟ್ಟೆ) ಎಲೆಕ್ಟ್ರೀಕ್, ಪಾತ್ರೆ, ಬಾರ್‌ದಾನ್, ಹೂವು-ಹಣ್ಣು ಇತ್ಯಾದಿ ಸಣ್ಣ ಪುಟ್ಟ ಎಲ್ಲ ಬಗೆಯ ವ್ಯಾಪಾರಸ್ಥರಿಗಾಗಿ ಸಣ್ಣ, ದೊಡ್ಡ ವ್ಯಾಪಾರ ಮಳಿಗೆಗಳ ಸಮುಚ್ಚಯಗಳನ್ನು ನಿರ್ಮಾಣ ಮಾಡಿಕೊಟ್ಟು ಸ್ಪರ್ಧಾತ್ಮಕ ಮತ್ತು ಗುಣಮಟ್ಟದ ವ್ಯಾಪಾರಿ ಚಟುವಟಿಕೆಗಳು ಬೆಳೆಯಲು ಸಾಧ್ಯವಾಗುವಂತೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## "ಗಾಂಜಾ" ಪೂರೈಕೆ ವಿರುದ್ಧ ಕಠಿಣ ಕ್ರಮಕೈಗೊಳ್ಳುವ ಬಗ್ಗೆ

**ಶ್ರೀ ಪ್ರತಾಪಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೨ (೪೦೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ 'ಗಾಂಜಾ' ಸೇವಿಸುತ್ತಿರುವವರು ಜಾಸ್ತಿಯಾಗಿದ್ದು, ಶುಂಠಿ ಬೆಳೆ ಮಧ್ಯೆ 'ಗಾಂಜಾ' ಬೆಳೆದು ನೈಸರ್ಗಿಕ 'ಗಾಂಜಾ' ಪೂರೈಕೆ ಮಾಡುವುದು ಬಹುತೇಕ ಜಿಲ್ಲೆಗಳಲ್ಲಿ ನಿರಂತರವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, 'ಗಾಂಜಾ' ಸೇವಿಸುವವರು ಅದರಲ್ಲೂ ವಿಶೇಷವಾಗಿ ಯುವ ಜನತೆ ಹಲವು ರೋಗಗಳಿಗೆ ತುತ್ತಾಗುವುದರ ಜೊತೆಗೆ ಅಪರಾಧ ಕೃತ್ಯಗಳಲ್ಲೂ ಭಾಗಿಯಾಗುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ವರ್ಷದಿಂದ ವರ್ಷಕ್ಕೆ ನೈಸರ್ಗಿಕ 'ಗಾಂಜಾ' ಪೂರೈಕೆಯ ಜಾಲ ವಿಸ್ತಾರವಾಗಿದ್ದು, ಹೋಂ ಸ್ಟೇ ಮತ್ತು ರೆಸಾರ್ಟ್‌ಗಳಲ್ಲಿ ನಡೆಯುವ

ಪಾರ್ಟಿಗಳಿಗೆ ವ್ಯಾಪಕವಾಗಿ ಪೂರೈಕೆಯಾಗುತ್ತಿರುವುದರಿಂದ ಮೂಲದಲ್ಲೇ ಇದನ್ನು ನಿಗ್ರಹಿಸುವ ಸಲುವಾಗಿ ಅಕ್ರಮವಾಗಿ 'ಗಾಂಜಾ' ಬೆಳೆಯುವವರ ಪತ್ತೆ ಮಾಡುವುದರ ಜೊತೆಗೆ ಅವರ ವಿರುದ್ಧ ಅತ್ಯಂತ ಕಠಿಣ ಕಾನೂನು ಕ್ರಮಗಳನ್ನು ಜರುಗಿಸಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ ?

## ಅಬಕಾರಿ ಕಛೇರಿಗಳಲ್ಲಿ ಖಾಸಗಿ ವ್ಯಕ್ತಿಗಳ ಮೂಲಕ ಅಕ್ರಮಗಳನ್ನು ಎಸಗುತ್ತಿರುವ ಬಗ್ಗೆ

**ಶ್ರೀ ಪ್ರತಾಪಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೩ (೪೦೫) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಹಲವು ಅಬಕಾರಿ ಕಚೇರಿಗಳಲ್ಲಿ ಖಾಸಗಿ ವ್ಯಕ್ತಿಗಳನ್ನು ನೇಮಿಸಿಕೊಂಡು, ಅನಧಿಕೃತವಾಗಿ ಕೆಲಸ ಮಾಡಿಸುವುದರ ಜೊತೆಗೆ ಅಬಕಾರಿ ಅಧಿಕಾರಿಗಳೇ ಆ ಖಾಸಗಿ ವ್ಯಕ್ತಿಗಳಿಗೆ ವೇತನ ನೀಡುವ ಮೂಲಕ ಅಕ್ರಮವೆಸಗಲು ಬಳಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಛೇರಿಯಲ್ಲಿ ಕೆಲಸ ಮಾಡುವ ವೇಳೆ ಸಾರ್ವಜನಿಕರಿಂದ ವಸೂಲಿ ಮಾಡಿದ ಹಣವನ್ನು ಹೊರಗುತ್ತಿಗೆ ನೌಕರರ ಬಳಿ ಇಟ್ಟಿರುವುದು ಮತ್ತು ಈ ಖಾಸಗಿ ವ್ಯಕ್ತಿಗಳ ವೈಯುಕ್ತಿಕ ಖಾತೆಗಳಿಗೆ ಸಾರ್ವಜನಿಕರಿಂದ ಹಣ ವರ್ಗಾವಣೆ ಮಾಡಿಸುವ ಮೂಲಕ ಅಕ್ರಮ ಎಸಗಿರುವವರ ವಿರುದ್ಧ ಸರ್ಕಾರ ಏನು ಕ್ರಮಕೈಗೊಂಡಿದೆ ?

## ಡ್ರಗ್ಸ್ ದಂಧೆ ಕುರಿತು

**ಶ್ರೀ ಪ್ರತಾಪಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೪ (೪೦೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಹಾಗೂ ಕಠಿಣ ಕ್ರಮಗಳೇನು ;

(ಇ) ೨೦೨೪ನೇ ಸಾಲಿನಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವವರ ವಿರುದ್ಧ ಇದುವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ಹಾಗೂ ಪ್ರಸ್ತುತ ವಿಚಾರಣೆಗಳು ಯಾವ ಹಂತದಲ್ಲಿವೆ ;

(ಈ) ಕಾಲೇಜು ವಿದ್ಯಾರ್ಥಿಗಳೇ ಬಹುಮುಖ್ಯವಾಗಿ ಡ್ರಗ್ಸ್ ಜಾಲಕ್ಕೆ ಬಲಿಯಾಗುತ್ತಿರುವ ಹಲವಾರು ಪ್ರಕರಣಗಳಲ್ಲಿ ಕಂಡು ಬಂದಿದ್ದು, ಆ ಕುರಿತು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಹಾಗೂ ಸುರಕ್ಷಿತ ಕ್ರಮಗಳೇನು ?

## ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೫ (೪೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಸರ್ಕಾರದ ಸಚಿವಾಲಯ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳು ಹಾಗೂ ನಿಗಮ ಮಂಡಳಿಗಳಲ್ಲಿ ಮಂಜೂರಾಗಿರುವ ಮತ್ತು ಖಾಲಿ ಇರುವ ಒಟ್ಟು ಹುದ್ದೆಗಳೆಷ್ಟು ; (ಇಲಾಖೆವಾರು ಹುದ್ದೆವಾರು ವಿವರ ನೀಡುವುದು)

(ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು; ದೊಡ್ಡ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಇರುವುದರಿಂದ ದೈನಂದಿನ ಆಡಳಿತ ನಿರ್ವಹಣೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಳೆದ ೨ ವರ್ಷಗಳಿಂದ ಎಷ್ಟು ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಹುದ್ದೆಗಳ ಭರ್ತಿಗೆ ಹೊರಡಿಸಿರುವ ಅಧಿಸೂಚನೆಗಳೆಷ್ಟು ; (ಇಲಾಖಾವಾರು ವಿವರ ನೀಡುವುದು)

(ಈ) ಖಾಲಿ ಹುದ್ದೆಗಳನ್ನು ಕಾಲಮಿತಿಯೊಳಗೆ ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ; ಯು.ಪಿ.ಎಸ್.ಸಿ ಮಾದರಿಯಲ್ಲಿ ಅಥವಾ ನೇಮಕಾತಿ ಪ್ರಕ್ರಿಯೆಯನ್ನು ಸುಲಲಿತವಾಗಿ ನಡೆಸಲು ಅನುವಾಗುವಂತೆ ಹೊಸ ನೇಮಕಾತಿ ವ್ಯವಸ್ಥೆ ಅಳವಡಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ನಿವೃತ್ತಿ ನಂತರವೂ ಗುತ್ತಿಗೆ/ಹೊರಗುತ್ತಿಗೆ/ಸಲಹೆಗಾರರ ನೇಮಕ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೬ (೪೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಿವೃತ್ತಿಯ ನಂತರವೂ ಸರ್ಕಾರಿ ಸೇವೆಯಲ್ಲಿ ಗುತ್ತಿಗೆ / ಹೊರಗುತ್ತಿಗೆ / ಸಲಹೆಗಾರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ;

(ಆ) ಯಾವ ಯಾವ ಇಲಾಖೆಗಳಲ್ಲಿ ಎಷ್ಟು ವರ್ಷಗಳಿಂದ ಯಾವ ಯಾವ ವೃಂದಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಇವರಿಗೆ ಮಾಸಿಕ ನೀಡುತ್ತಿರುವ ವೇತನ ಹಾಗೂ ಇನ್ನಿತರ ಸೌಲಭ್ಯಗಳೇನು ; (ಇಲಾಖಾವಾರು ವಿವರ ನೀಡುವುದು)

(ಇ) ನಿವೃತ್ತ ನೌಕರರನ್ನು ಸೇವೆಯಿಂದ ಬಿಡುಗಡೆ ಮಾಡಲು ಸರ್ಕಾರ ಕ್ರಮಕೈಗೊಂಡಿದೆಯೇ ; ಹಾಗಿದ್ದಲ್ಲಿ, ಕಳೆದ ಒಂದು ವರ್ಷದಿಂದ ಎಷ್ಟು ಸಿಬ್ಬಂದಿಗಳನ್ನು ಬಿಡುಗಡೆ ಮಾಡಲಾಗಿದೆ ?

## ರಣಘಟ್ಟ ಯೋಜನೆಯಡಿ ಕೆರೆಗಳನ್ನು ತುಂಬಿಸುವ ಯೋಜನೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೭ (೪೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಲೂರು ತಾಲ್ಲೂಕು, ಹಳೇಬೀಡು ಹಾಗೂ ಚಿಕ್ಕಮಗಳೂರು ತಾಲ್ಲೂಕಿನ ಬೆಳವಾಡಿ ಕೆರೆ ತುಂಬಿಸುವ ರಣಘಟ್ಟ ಯೋಜನೆ ಮಂಜೂರಾಗಿದ್ದು ಯಾವಾಗ ; ಈ ಯೋಜನೆಯ ಅಂದಾಜು ಮೊತ್ತವೆಷ್ಟು ;

(ಆ) ಯೋಜನೆಯಡಿ ಎಷ್ಟು ಕೆರೆಗಳನ್ನು ತುಂಬಿಸಲು ಉದ್ದೇಶಿಸಲಾಗಿದೆ ; ಈ ಯೋಜನೆ ಪ್ರಾರಂಭವಾಗಿದ್ದು ಯಾವಾಗ ;

(ಇ) ಯೋಜನೆ ಗುತ್ತಿಗೆ ಪಡೆದಿರುವ ಸಂಸ್ಥೆ ಯಾವುದು ; ಗುತ್ತಿಗೆ ಕರಾರಿನನ್ವಯ ಕಾಮಗಾರಿ ಯಾವಾಗ ಪೂರ್ಣಗೊಳ್ಳಬೇಕು ; ಪ್ರಸ್ತುತ, ಕಾಮಗಾರಿ ಯಾವ ಹಂತದಲ್ಲಿದೆ ;

(ಈ) ಬಾಕಿ ಇರುವ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಿ ಕೆರೆಗಳಿಗೆ ನೀರು ತುಂಬಿಸಲಾಗುವುದು ?

## ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳ ಪ್ರಗತಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೮ (೪೧೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷದಿಂದ ಸಣ್ಣ ನೀರಾವರಿ ಇಲಾಖೆಯಿಂದ ಚಿಕ್ಕಮಗಳೂರು ಜಿಲ್ಲೆಗೆ ಮಂಜೂರು ಮಾಡಿರುವ ಅನುದಾನವೆಷ್ಟು ;

(ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಕಾಮಗಾರಿಯ ಅಂದಾಜು ಮೊತ್ತ ಸಹಿತ ವಿವರ ನೀಡುವುದು)

(ಇ) ಈ ಕಾಮಗಾರಿಗಳಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿದೆ ; ಪ್ರಗತಿಯಲ್ಲಿರುವ ಮತ್ತು ಆರಂಭಗೊಳ್ಳದ ಕಾಮಗಾರಿಗಳು ಯಾವುವು ;

(ಈ) ಪ್ರಗತಿಯಲ್ಲಿರುವ ಮತ್ತು ಆರಂಭಗೊಳ್ಳದ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಅಸ್ಪೃಶ್ಯ ಅಲೆಮಾರಿ "ಮಾದಿಗ ದಾಸರಿ" ಸಮುದಾಯದ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೯ (೪೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೀವ್ರ ಸಂಕಷ್ಟದಲ್ಲಿರುವ ಅಸ್ಪೃಶ್ಯ ಅಲೆಮಾರಿ "ಮಾದಿಗ ದಾಸರಿ" (ಮಾದಿಗ ದಾಸು) ಸುಮುದಾಯದ ಹೆಸರು ಎಸ್.ಸಿ ಜಾತಿ ಪಟ್ಟಿಯಲ್ಲಿ ನೋಂದಾಯಿಸುವ ಸಲುವಾಗಿ ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಮಾಡುವ ಪ್ರಕ್ರಿಯೆ ವಿಳಂಬವಾಗಿರುವುದೇಕೆ; (ವಿವರ ನೀಡುವುದು)

(ಆ) ಸರ್ಕಾರದಲ್ಲಿ ಈಗಾಗಲೇ ಈ ಸಮುದಾಯದ ಕುರಿತು ಕುಲ ಶಾಸ್ತ್ರಿಯ ಅಧ್ಯಯನದ ವರದಿ ಲಭ್ಯವಿದ್ದರೂ ಕೂಡ ಇನ್ನು

ಪರಿಶೀಲಿಸಲು ತೆಗೆದುಕೊಳ್ಳುವ ಕಾಲಾವಧಿ (ಸಮಯ) ಎಷ್ಟು ಮತ್ತು ಯಾವಾಗ ಕೇಂದ್ರ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸು ಪ್ರಸ್ತಾವನೆ ಸಲ್ಲಿಸಲಾಗುವುದು ; (ವಿವರ ನೀಡುವುದು)

(ಇ) ಸ್ವಾತಂತ್ರ್ಯ ನಂತರವು ಕೂಡ ಸಾಮಾಜಿಕ ನ್ಯಾಯದಿಂದ ವಂಚಿತವಾಗಿರುವ, ಈಗಲೂ ಜಾತಿ ಪ್ರಮಾಣ ಪತ್ರ ಪಡೆಯಲು ತೊಂದರೆ ಅನುಭವಿಸುತ್ತಿರುವ ಅತೀ ಹಿಂದುಳಿದ ಭೂ ರಹಿತ ಅಲೆಮಾರಿ "ಮಾದಿಗ ದಾಸರಿ" ಸಮುದಾಯಕ್ಕೆ ಸರ್ಕಾರ ಯಾವ ರೀತಿ ಸಾಮಾಜಿಕ ನ್ಯಾಯ ಒದಗಿಸಲಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಪ್ರಸ್ತುತ ಈ ಸಮುದಾಯದ ಮಕ್ಕಳ ವಿದ್ಯಾಭ್ಯಾಸ, ಉದ್ಯೋಗ, ಸರ್ಕಾರಿ ಸೌಲಭ್ಯ, ಬಡವರ ಕಲ್ಯಾಣಕ್ಕೆ ಯಾವ ರೀತಿ ನ್ಯಾಯವನ್ನು ಸರ್ಕಾರ ಒದಗಿಸಲಿದೆ ? (ವಿವರ ನೀಡುವುದು)

## ಕೆರೆಗಳ ಒತ್ತುವರಿಯನ್ನು ತೆರವುಗೊಳಿಸುವ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೦ (೪೪೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸಾವಿರಾರು ಕೆರೆಗಳನ್ನು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಎಷ್ಟು ಕೆರೆಗಳಿವೆ ; ಇವುಗಳ ವಿಸ್ತೀರ್ಣವೆಷ್ಟು; ಒತ್ತುವರಿಯಾಗಿರುವ ಕೆರೆಗಳ ಸಂಖ್ಯೆ ಎಷ್ಟು ; ಒತ್ತುವರಿ ಸರ್ವೆ ಕಾರ್ಯ ಮುಗಿಸಿರುವ ಕೆರೆಗಳ ಸಂಖ್ಯೆ ಎಷ್ಟು ; ಎಷ್ಟು ಕೆರೆಗಳಲ್ಲಿ ಒತ್ತುವರಿ ತೆರವುಗೊಳಿಸಲಾಗಿದೆ ? (ಕೆರೆವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

## ಸರ್ಕಾರಿ ಜಾಗವನ್ನು ಖಾಸಗಿ ಸಂಸ್ಥೆಗಳಿಗೆ ಹಸ್ತಾಂತರಿಸಿರುವ ಬಗ್ಗೆ

**ಶ್ರೀ ಎನ್.ರವಿಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೧ (೪೧೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೊಲೀಸ್ ಇಲಾಖೆ ಹೊಂದಿರುವ ಸರ್ಕಾರಿ ಜಾಗವನ್ನು ಖಾಸಗಿ ಸಂಸ್ಥೆಗಳಿಗೆ ಹಸ್ತಾಂತರಿಸಲು ಇರುವ ನಿಯಮಗಳೇನು ;

(ಆ) ಖಾಸಗಿ ಸಂಸ್ಥೆಗೆ ಪೊಲೀಸ್ ಇಲಾಖೆ ಹೊಂದಿರುವ ಸರ್ಕಾರಿ ಜಾಗವನ್ನು ಹಸ್ತಾಂತರಿಸಲು ಕಾನೂನಿನಡಿಯಲ್ಲಿ ಅವಕಾಶವಿದೆಯೇ ;

(ಇ) ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಬಳ್ಳಾರಿ, ಇವರು ಕಛೇರಿಯ ಸರ್ಕಾರಿ ಭೂಮಿಯನ್ನು ಖಾಸಗಿಯವರಿಗೆ ವರ್ಗಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಆದೇಶದ ಮೇರೆಗೆ ಈ ಭೂಮಿಯನ್ನು ಖಾಸಗಿ ಸಂಸ್ಥೆಗೆ ಹಸ್ತಾಂತರಿಸಲಾಗಿದೆ ;

(ಈ) ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಬಳ್ಳಾರಿ ಕಚೇರಿಯ ಸರ್ಕಾರಿ ಭೂಮಿ ಸರ್ವೆ ನಂ.೬೦ ಪಾರ್ವತಿ ನಗರ, ಇದರಲ್ಲಿ ೨.೫೮ ಎಕರೆ ಭೂಮಿಯನ್ನು ಯಾವ ಆದೇಶದ ಮೇರೆಗೆ ಖಾಸಗಿ ಸಂಸ್ಥೆಗೆ ನೀಡಲಾಗಿದೆ: ಸದರಿ ಅಧಿಕಾರಿಗೆ ಸರ್ಕಾರಿ ಭೂಮಿಯನ್ನು ಖಾಸಗಿಯವರಿಗೆ ನೀಡುವ ಅಧಿಕಾರ ಇದೆಯೇ ; ಇಲ್ಲವಾದಲ್ಲಿ, ಅಧಿಕಾರದ ದುರುಪಯೋಗ ಮಾಡಿ ಸರ್ಕಾರಿ ಭೂಮಿಯನ್ನು ಖಾಸಗಿಯವರಿಗೆ ಹಸ್ತಾಂತರಿಸಿದ ಅಧಿಕಾರಿಯ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಪೊಲೀಸ್ ಇಲಾಖೆ ಹೊಂದಿರುವ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು ?(ಜಿಲ್ಲಾವಾರು ವಿವರ ನೀಡುವುದು)

## ಪುರೋಭಿವೃದ್ಧಿ ತೆರಿಗೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೨ (೪೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ರೂ. ೩೫೦೩.೬೩ ಕೋಟಿಗಳ ಪುರೋಭಿವೃದ್ಧಿ ತೆರಿಗೆ ಸಂಗ್ರಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ಅರ್ಕಾವತಿ ಮತ್ತು ನಾಡಪ್ರಭು ಕೆಂಪೇಗೌಡ ಬಡಾವಣೆಗಳಿಂದ ಸಂಗ್ರಹಿಸಲು ಬಾಕಿ ಇರುವ ತೆರಿಗೆ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ತೆರಿಗೆ ವಸೂಲಾತಿಯಲ್ಲಿ ಸಮರ್ಪಕವಾಗಿ ಕರ್ತವ್ಯ ನಿರ್ವಹಿಸದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ?

## ಹಲಾಲ್ ಪ್ರಮಾಣ ಪತ್ರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೩ (೪೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯು ಹಲಾಲ್ ಪ್ರಮಾಣ ಪತ್ರವನ್ನು ಪಡೆದಿರುವ ಎಷ್ಟು ಸಂಸ್ಥೆಗಳು ವಿಚಾರಣೆ ನಡೆಸಿದೆ ; ಈ ರೀತಿಯಾಗಿ ಖಾಸಗಿ ವ್ಯಕ್ತಿಗಳಿಂದ ಸರ್ಕಾರದ ಯಾವುದೇ ಮಾನ್ಯತೆ ಪಡೆಯದೆ ಇರುವ ಸಂಸ್ಥೆಗಳಿಂದ ಹಾಗೂ ಒಂದು ಧರ್ಮ ವಿಶೇಷ ಆಚರಣೆಯನ್ನು ಪಾಲಿಸುವ ಸಲುವಾಗಿ ಪ್ರಮಾಣ ಪತ್ರ ಪಡೆದಿರುವ ಹಲವಾರು

ಆಸ್ಪತ್ರೆಗಳು, ಕಟ್ಟಡ ನಿರ್ಮಾಣ ಸಂಸ್ಥೆಗಳು, ಇದಕ್ಕಾಗಿ ನೀಡುವ ಶುಲ್ಕದ ಮೂಲಕ ಭಯೋತ್ಪಾದನೆ, ಕೋಮು ಗಲಭೆಗಳನ್ನು ಹಾಗೂ ಸಮಾಜದಲ್ಲಿ ಸಮಾಜ ಘಾತುಕ ಶಕ್ತಿಗಳ ಮೂಲಕ ಗಲಭೆಗಳನ್ನು ಸೃಷ್ಟಿಸುವ ವ್ಯಕ್ತಿ, ಸಂಘಟನೆಗಳಿಗೆ ಆರ್ಥಿಕ ಸಹಾಯ ಮಾಡಿದಂತಾಗಲಿಲ್ಲವೆ : ಈ ಕುರಿತು ಸರ್ಕಾರದ ನಿಲುವೇನು ;

(ಆ) ಈ ರೀತಿ ಪ್ರಮಾಣ ಪತ್ರಗಳನ್ನು ನೀಡುವ ಸಂಸ್ಥೆಗಳು ಸರ್ಕಾರದಿಂದ ಅನುಮತಿ ಪಡೆದಿರುವ ಕುರಿತು ಪೊಲೀಸ್ ಇಲಾಖೆ ಪರಿಶೀಲಿಸಿದೆಯೇ ; ಹಲಾಲ್ ಪ್ರಮಾಣ ಪತ್ರ ನೀಡಲು ಸಂಗ್ರಹಿಸುವ ಶುಲ್ಕವು ಭಯೋತ್ಪಾದನಾ ಕೃತ್ಯಗಳಿಗೆ ಬಳಕೆಯಾಗುತ್ತಿರುವ ಕುರಿತು ಇಲಾಖೆಯ ನಿಲುವೇನು ;

(ಇ) ಮಾನ್ಯತೆ ಪಡೆಯದ ಖಾಸಗಿ ಸಂಸ್ಥೆಗಳು ಸಂಗ್ರಹಿಸುವ ಶುಲ್ಕವನ್ನು ಭಯೋತ್ಪದನಾ ಕೃತ್ಯಗಳಿಗೆ ಹಾಗೂ ಕೋಮುಗಲಭೆಗಳನ್ನು ಸೃಷ್ಟಿಸಲು ಬಳಸುತ್ತಿರುವ ಕುರಿತು ಸರ್ಕಾರದ ನಿಲುವೇನು ; ಈ ಸಂಸ್ಥೆಗಳು ಭಯೋತ್ಪಾದನಾ ಸಂಸ್ಥೆಗಳಿಗೆ ಹಾಗೂ ಕೋಮು ಗಲಭೆ ಸೃಷ್ಟಿ ಮಾಡುವವರಿಗೆ ಆರ್ಥಿಕ ಸಹಾಯ ಮಾಡುತ್ತಿರುವ ಕುರಿತು ಹಾಗೂ ಭಯೋತ್ಪಾದಕರನ್ನು ಬಂದಿಸಿದಾಗ ಅವರ ಪರವಾಗಿ ಕಾನೂನು ಹೋರಾಟ ಮಾಡಲು ಈ ಹಣವನ್ನು ಬಳಸಿಕೊಳ್ಳುತ್ತಿರುವ ಕುರಿತು ಸರ್ಕಾರದ ನಿಲುವೇನು ?

## ಅಕ್ರಮ ಕಟ್ಟಡಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೪ (೪೧೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆಯ ಪಿ&ಟಿ ಲೇಔಟ್, ಅನ್ನದಾನ ಪುರ, ಟಿಸಿ ಪಾಳ್ಯ, ೫ನೇ ಕ್ರಾಸ್ ೨ನೇ ಮೈನ್ ಸೈಟ್ ನಂಬರ್ ೭೮ರಲ್ಲಿನ ಅನಧಿಕೃತ ನಿರ್ಮಾಣದ ಕಟ್ಟಡವನ್ನು ರಕ್ಷಿಸುವಂತೆ ಮಾನ್ಯ ನ್ಯಾಯಾಲಯವು ನಿರ್ದೇಶನ ನೀಡಿದೆಯೇ ; (ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದೆ ಎಂಬ ಒಂದೇ ಕಾರಣಕ್ಕಾಗಿ ಅನಧಿಕೃತ ನಿರ್ಮಾಣ ತೆರವುಗೊಳಿಸಲು ಸಾಧ್ಯವಿಲ್ಲ ಎಂಬುದರ ಕುರಿತು ಸರ್ಕಾರದ ಆದೇಶವಿದ್ದಲ್ಲಿ ಆದರ ಪ್ರತಿಯನ್ನು ಒದಗಿಸುವುದು ;

(ಇ) ಬಿ.ಬಿ.ಎಂ.ಪಿ ಅಧಿಕಾರಿಗಳ ಕರ್ತವ್ಯದಲ್ಲಿನ ನಿರ್ಲಕ್ಷದಿಂದಾಗಿ ನಗರದಲ್ಲಿ ಅನಧಿಕೃತ ಕಟ್ಟಡಗಳ ನಿರ್ಮಾಣ ನಿಯಂತ್ರಣ ಮೀರಿರುವುದರ ಕುರಿತು ಸರ್ಕಾರದ ನಿಲುವೇನು ; ಇದರಿಂದಾಗಿ ನಗರದಲ್ಲಿ ನೆರೆಯಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿದ್ದು ಅಂತರಾಷ್ಟ್ರೀಯ ಮಟ್ಟದಲ್ಲಿ ನಗರಕ್ಕೆ ಕೆಟ್ಟ ಹೆಸರು ಬರಲು ಕಾರಣರಾದ ಹಾಗೂ ಈ ಅನಧಿಕೃತ ನಿರ್ಮಾಣಗಳಿಗೆ ಪ್ರೋತ್ಸಾಹ ನೀಡುತ್ತಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಈಗಾಗಲೇ ಹಲವಾರು ಅನಧಿಕೃತ ಕಟ್ಟಡಗಳು ಕುಸಿದು ಬಿದ್ದ ಕಾರಣಕ್ಕೆ ಜನಸಾಮಾನ್ಯರ ಪ್ರಾಣ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಿ ಅನಧಿಕೃತ ಕಟ್ಟಡಗಳಿಗೆ ಅವಕಾಶ ನೀಡಿದ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಮರದ ಮಿಲ್ಲುಗಳಿಗೆ ನಿರಾಪೇಕ್ಷಣಾ ಪತ್ರ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೫ (೪೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಲಿನ್ಯ ನಿಯಂತ್ರಣ ಮಂಡಳಿಯು ಯಾವ ಯಾವ ಕೈಗಾರಿಕೆಗಳನ್ನು ಪ್ರಾರಂಭಿಸಲು ನಿರಾಪೇಕ್ಷಣಾ ಪತ್ರ ನೀಡುತ್ತದೆ ; (ವಿವರ ನೀಡುವುದು)

(ಆ) ವಸತಿ ಪ್ರದೇಶಗಳಲ್ಲಿ ಯಾವ ಯಾವ ಕೈಗಾರಿಕೆಗಳನ್ನು ಪ್ರಾರಂಭಿಸಬಹುದು ; ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಮಾಲಿನ್ಯ ನಿಯಂತ್ರಣ ಮಂಡಳಿ ನಿರಾಪೇಕ್ಷಣಾ ಪತ್ರವನ್ನು ನೀಡುತ್ತದೆಯೇ ; (ವಿವರ ನೀಡುವುದು)

(ಇ) ವಸತಿ ಪ್ರದೇಶವಾದ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮದಲ್ಲಿರುವ ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಮಾಲಿನ್ಯ ನಿಯಂತ್ರಣ ಮಂಡಳಿ ಅನುಮತಿ ನೀಡಿದೆಯೇ ? (ವಿವರ ನೀಡುವುದು)

## ನಿಗಮ ಮಂಡಳಿಗಳ ದಿ:೦೧/೦೪/೨೦೦೬ ಪೂರ್ವದಲ್ಲಿ ನೇಮಕಾತಿ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೪೩೬ (೫೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಿಗಮ/ಮಂಡಳಿ/ವಿಶ್ವವಿದ್ಯಾಲಯಗಳ ಇತರೆ ಸ್ವಾಯತ್ತ ಸಂಸ್ಥೆಗಳಲ್ಲಿ ದಿನಾಂಕ:೦೧.೦೪.೨೦೦೬ರ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿದ ನೌಕರರ ಸಂಖ್ಯೆ ಎಷ್ಟು ;

(ಆ) ದಿನಾಂಕ: ೨೪.೦೧.೨೦೨೪ರ ಆದೇಶದಲ್ಲಿ ದಿನಾಂಕ: ೦೧.೦೪.೨೦೦೬ ರ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆಯಾದ ಸರ್ಕಾರಿ ನೌಕರರ ಹಳೆಯ ಪಿಂಚಣಿ ಯೋಜನೆಗೆ ಒಳಪಡಿಸಿರುವಂತೆ ನಿಗಮ/ಮಂಡಳಿ/ ವಿಶ್ವವಿದ್ಯಾಲಯಗಳು ಇತರೆ ಸ್ವಾಯುತ್ತ ಸಂಸ್ಥೆಗಳಿಗೆ ನೇಮಕಗೊಂಡ ನೌಕರರನ್ನು ಹಳೆಯ ಡಿಫೈನ್ಸ್ ಪಿಂಚಣಿ ಯೋಜನೆಗೆ ಒಳಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಪ್ರವಾಸಿ ತಾಣಗಳ ಅಭಿವೃದ್ಧಿ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೪೩೭ (೫೦೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರವಾಸಿ, ತಾಣಗಳಿಂದ ಪ್ರವಾಸೋದ್ಯಮ ಇಲಾಖೆಗೆ ಬರುತ್ತಿರುವ ಆದಾಯವೆಷ್ಟು ; (ವಿವರ ನೀಡುವುದು)

(ಆ) ರಾಜಧಾನಿಗೆ ಹತ್ತಿರದಲ್ಲಿರುವ ಗಿರಿಧಾಮಗಳು ಪ್ರವಾಸಿಗರನ್ನು ಸೆಳೆಯುತ್ತಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗಿದೆ ;

(ಇ) ಇಂತಹ ಪ್ರವಾಸಿ ತಾಣಗಳ್ಳಿ ಪ್ರವಾಸಿಗರಿಗೆ ಅಗತ್ಯ ಮೂಲ ಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇದಕ್ಕಾಗಿ ಅಗತ್ಯ ಅನುದಾನ ಕಾಯ್ದಿರಿಸಲಾಗಿದ್ದೆಯೇ ? (ವಿವರ ಒದಗಿದುವುದು)

## ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ೨೦೧೬ರ ಸೆಕ್ಷನ್ ೫೬ನ್ನು ಎಲ್ಲಾ ಇಲಾಖೆಗಳಲ್ಲಿ ಜಾರಿಗೊಳಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೩೮ (೪೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-೨೦೧೬ರ ಸೆಕ್ಷನ್ ೩೭ರ ರೀತ್ಯಾ ಸರ್ಕಾರದ ಎಲ್ಲಾ ಇಲಾಖೆಗಳು ತನ್ನ ಅಭಿವೃದ್ಧಿ ಯೋಜನೆಯ ಒಟ್ಟು ಆಯವ್ಯಯದಲ್ಲಿ ವಿಕಲಚೇತನರ ವ್ಯಕ್ತಿಗಳಿಗೆ ಶೇ ೫ರಷ್ಟು ಮೀಸಲಾತಿ ನೀಡಿದೆಯೇ ;

(ಆ) ಸೆಕ್ಷನ್ ೩೭ರ ರೀತ್ಯಾ ಯಾವ ಯಾವ ಇಲಾಖೆಗಳು ಶೇ ೫ರಷ್ಟು ಮೊತ್ತವನ್ನು ವಿಕಲಚೇತನರ ವ್ಯಕ್ತಿಗಳಿಗೆ ಮೀಸಲಿಟ್ಟಿವೆ ; (ಇಲಾಖೆವಾರು ಮಾಹಿತಿ ನೀಡುವುದು) ಮೀಸಲಿಟ್ಟಿರುವ ಅನುದಾನ/ ಆಯವ್ಯಯವನ್ನು ವಿಕಲಚೇತನರ ವ್ಯಕ್ತಿಗಳ ಅಭಿವೃದ್ಧಿಗೆ ಉಪಯೋಗಿಸಲು ಅಳವಡಿಸಿಕೊಂಡಿರುವ ಮಾನದಂಡಗಳೇನು ;

(ಇ) ಈ ರೀತಿ ಮೀಸಲಾತಿ ನೀಡದೆ ಇದ್ದಲ್ಲಿ ವಿಕಲಚೇತನರ ವ್ಯಕ್ತಿಗಳ ಹಕ್ಕುಗಳನ್ನು ನಿರ್ಲಕ್ಷಿಸಿದಂತಾಗುವುದಿಲ್ಲವೆ ;

(ಈ) SCP/TSP ಮಾದರಿ ವಿಕಲಚೇತನರ ವ್ಯಕ್ತಿಗಳಿಗೆ PWD ಎಂಬ ಹೆಸರಿನಲ್ಲಿ ಪ್ರತ್ಯೇಕವಾದ ಉಪ ಲೆಕ್ಕಶೀರ್ಷಿಕೆ (objective code) ಸೃಜಿಸಿ ಆರ್ಥಿಕ ಇಲಾಖೆಯ ಹಂತದಲ್ಲಿಯೇ ಶೇ ೫ರಷ್ಟು ಆಯವ್ಯಯವನ್ನು ಮೀಸಲಿಟ್ಟು ವಿವಿಧ ಇಲಾಖೆಗಳಿಗೆ ಆಯವ್ಯಯ ಬಿಡುಗಡೆ ಮಾಡಲು ಸರ್ಕಾರದ ನಿಲುವೇನು ;

(ಉ) ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ತಿರ್ಮಾನಿಸುವ ಅವಶ್ಯಕತೆ ಇದೆಯೇ ; ಇದಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದೆ ಇರುವುದರಿಂದ ಆರ್ಥಿಕ ಇಲಾಖೆಯು ಆದೇಶ ಹೊರಡಿಸಿ ಕ್ರಮ ಕೈಗೊಂಡು: ಈ ಮೀಸಲಾತಿ ಆಯವ್ಯಯವನ್ನು ವಿಕಲಚೇತನ ವ್ಯಕ್ತಿಗಳ ಅಭಿವೃದ್ಧಿಗೆ ಉಪಯೋಗಿಸಲು ಮಾರ್ಗಸೂಚಿಗಳನ್ನು ರಚಿಸಲು ಸಾಧ್ಯವಿಲ್ಲವೇ ?

## ನಿವೃತ್ತ ಅಧಿಕಾರಿ/ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೩೯ (೪೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಸ್ತರಗಳಲ್ಲಿ ನಿವೃತ್ತ ಅಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ಹೊರೆ ಎಷ್ಟು ; ಈ ನಿವೃತ್ತ ಅಧಿಕಾರಿಗಳ ಗುತ್ತಿಗೆ ಆಧಾರದ ಮರು ನೇಮಕದ ಬಗ್ಗೆ ಸರ್ಕಾರದ ಅಭಿಪ್ರಾಯವೇನು ; (ಮಾಹಿತಿ ಒದಗಿಸುವುದು)

(ಆ) ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ, ಸಚಿವರ ಆಪ್ತ ಶಾಖೆ ಮತ್ತು ಸಚಿವಾಲಯಗಳಲ್ಲಿ ನೇಮಕ ಮಾಡಿಕೊಂಡಿರುವ ನಿವೃತ್ತ ನೌಕರರ ಮಾಹಿತಿಯನ್ನು ಅವರುಗಳ ಗುತ್ತಿಗೆ ವೇತನದ ಸಹಿತ ಒದಗಿಸುವುದು ;

(ಇ) ಈ ಹಿಂದೆ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನಿವೃತ್ತ ನೌಕರರ ಸೇವೆಯನ್ನು ಹಿಂಪಡೆಯುವ ಬಗ್ಗೆ ಹೊರಡಿಸಿರುವ ಸುತ್ತೋಲೆಯನ್ನು ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಳ್ಳುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಇಲಾಖೆಗಳಿಗೆ ಮೀಸಲಿಟ್ಟಿರುವ ಹಣದ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೦ (೪೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ಆರ್ಥಿಕ ಸಾಲಿನ ಬಜೆಟ್‌ನಲ್ಲಿ ವಿವಿಧ ಇಲಾಖೆಗಳಿಗೆ ಮೀಸಲಿಟ್ಟ ಒಟ್ಟು ಹಣವೆಷ್ಟು; ಇಲಾಖಾವಾರು ಹಂಚಿಕೆ ಮತ್ತು ಅನುಪಾತದೊಂದಿಗೆ ಅಧಿಕಾರಿ/ಸಿಬ್ಬಂದಿಗಳ ಸಂಬಳಕ್ಕೆ ಮೀಸಲಿಟ್ಟ ಹಣ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ನೀಡಿದ ಹಣದ ವಿವರಗಳ ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಆ) ಪ್ರಸಕ್ತ ಆರ್ಥಿಕ ವರ್ಷದ ಬಜೆಟ್‌ನ ನಂತರ ಹೆಚ್ಚುವರಿಯಾಗಿ ಇಲಾಖೆಗಳಿಗೆ ನೀಡಿರುವ ಅನುದಾನವೆಷ್ಟು ; (ಇಲಾಖಾವಾರು ಮಾಹಿತಿ ಒದಗಿಸುವುದು)

(ಇ) ಈ ಹೆಚ್ಚುವರಿಯಾಗಿ ನೀಡುತ್ತಿರುವ ಅನುದಾನವನ್ನು ಯಾವ ಮೂಲಗಳಿಂದ ಸಂಪನ್ಮೂಲ ಕ್ರೂಢೀಕರಣಗೊಳಿಸಲಾಗುತ್ತಿದೆ ; (ವಿವರ ಒದಗಿಸುವುದು)

(ಈ) ಭಾಗ್ಯಗಳ ಯೋಜನೆಗಳ ಹಿನ್ನಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಅಗತ್ಯ ಅನುದಾನ ಒದಗಿಸುವಲ್ಲಿ ತೊಂದರೆಯಾಗಿದೆಯೇ ; ಹಾಗಿದ್ದಲ್ಲಿ, ಆರ್ಥಿಕ ಬಿಕ್ಕಟ್ಟನ್ನು ನೀಗಿಸುವಲ್ಲಿ ಸರ್ಕಾರದ ಚಿಂತನೆಯೇನು ? (ಮಾಹಿತಿ ನೀಡುವುದು)

## ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿ ಕುರಿತು ಆರ್ಥಿಕ ಇಲಾಖೆ ವಿದ್ಯಾರ್ಥಿಗಳ ಸಂಖ್ಯೆಯನ್ನು ೫೦೦ಕ್ಕೆ ನಿಗಧಿಪಡಿಸಲು ಸಲಹೆ ನೀಡಿರುವ ಕುರಿತು

**ಶ್ರೀ ಎಸ್.ವಿ.ಸಂಕನೂರ (ಪದವೀಧರರ ಕ್ಷೇತ್ರ) :-**

೪೪೧ (೫೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ/ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿ ಮಾಡಲು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ೧೨೦ರ ಬದಲಾಗಿ ೫೦೦ ಇರಬೇಕು ಎಂಬ ನಿರ್ಬಂಧ ಇದೆಯೇ; ಹಾಗಿದ್ದಲ್ಲಿ, ಆರ್ಥಿಕ ಇಲಾಖೆಯಿಂದ ಈ ರೀತಿ ನಿರ್ಬಂಧ ವಿಧಿಸಲು ಕಾರಣಗಳೇನು; (ವಿವರ ನೀಡುವುದು)

(ಆ) ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿಗೆ ಆರ್ಥಿಕ ಇಲಾಖೆ ವಿದ್ಯಾರ್ಥಿಗಳ ಸಂಖ್ಯೆ ನಿಗಧಿಪಡಿಸಿರುವುದು ಸರಿಯೇ; ಇದರಿಂದ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರ ಗಮನಿಸಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದೇ ?

## ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇರ ನೇಮಕಾತಿ ಸಂಬಂಧ ಇಲಾಖಾವಾರು ಹುದ್ದೆಗಳ ಮೀಸಲಾತಿಗಳ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೪೪೨ (೪೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ಒಳ ಮೀಸಲಾತಿ ಕಲ್ಪಿಸುವವರೆಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸದಿರಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿದೆಯೇ;

(ಆ) ದಿನಾಂಕ:೨೮.೧೦.೨೦೨೪ರ ನಂತರವೂ ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇರ ನೇಮಕಾತಿ ಸಂಬಂಧ ಕರ್ನಾಟಕ

ಲೋಕಸೇವಾ ಆಯೋಗ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಕರ್ನಾಟಕ ಲೋಕಾಯುಕ್ತ ಸಂಸ್ಥೆಗೂ ಅಧಿಸೂಚನೆ ಹೊರಡಿಸಿವೆಯೇ; (ಸದರಿ ಹುದ್ದೆಗಳ ಹೆಸರು, ಮೀಸಲಾತಿ ವಿವರ ನೀಡುವುದು)

(ಇ) ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇರ ನೇಮಕಾತಿ ಸಂಬಂಧ ದಿನಾಂಕ : ೨೮.೧೦.೨೦೨೪ರ ಮುಂಚೆ ಹೊರಡಿಸಲಾದ ಅಧಿಸೂಚನೆ ಮತ್ತು ನಂತರ ನಡೆಯುತ್ತಿರುವ ಅಧಿಸೂಚನೆಯ ನೇಮಕಾತಿಗಳಾವುವು? (ಇಲಾಖಾವಾರು ಹುದ್ದೆಗಳ ಹಾಗೂ ಮೀಸಲಾತಿ ವಿವರ ನೀಡುವುದು)

## ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಸಂಬಂಧ ಆರ್ಥಿಕ ಇಲಾಖೆಯಿಂದ ಈಗಾಗಲೇ ಮಂಜೂರಾಗಿರುವ ಹುದ್ದೆಗಳ ಅನುಮೋದನೆ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೪೪೩ (೪೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ:೨೧.೧೧.೨೦೦೧ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು, ೨೦೦೧ರ ಅನ್ವಯ ನಡೆಸಲಾಗುತ್ತಿರುವ ನೇಮಕಾತಿ ಸಂಬಂಧ ದಿನಾಂಕ: ೦೧.೦೭.೨೦೨೪ರಂದು ಅಧ್ಯಕ್ಷರು, ಬ್ಯಾಕ್‌ಲಾಗ್ ಸಚಿವ ಸಂಪುಟ ಉಪಸಮಿತಿ ಹಾಗೂ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯ ಉಪ ಸಮಿತಿಯು ತನ್ನ

ದಿನಾಂಕ : ೧೬.೦೭.೨೦೨೪ರ ಹೊರಡಿಸಲಾದ ಹಿಂಬರಹದಲ್ಲಿ ಈಗಾಗಲೇ ಮಂಜೂರಾಗಿರುವ ಹುದ್ದೆಗಳ ಎದುರಾಗಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಪುನಃ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವ ಅವಶ್ಯಕತೆ ಇರುವುದಿಲ್ಲವೆಂದು ತಿಳಿಸಿರುವುದು ನಿಜವೇ ;

(ಆ) ತಿಳಿಸಿದ್ದರೂ, ಉನ್ನತ ಶಿಕ್ಷಣ ಇಲಾಖೆ ಒಳಗೊಂಡಂತೆ ಎಷ್ಟು ಇಲಾಖೆಗಳು ಬ್ಯಾಕ್‌ಲಾಗ್ ಹುದ್ದೆಗಳನ್ನು ನೇಮಕಾತಿ ಸಂಬಂಧ ಆರ್ಥಿಕ ಇಲಾಖೆಯಿಂದ ಈಗಾಗಲೇ ಮಂಜೂರಾಗಿರುವ ಹುದ್ದೆಗಳೆದುರಾಗಿ ಭರ್ತಿ ಮಡುವ ಹಂತದಲ್ಲಿ ಪುನಃ ಆರ್ಥಿಕ ಇಲಾಖೆ ಅನುಮೋದನೆಗೆ ಪ್ರಸ್ತಾವನೆ ಕಳುಹಿಸಲಾಗಿವೆ ; ಇಂತಹ ಎಷ್ಟು ಪ್ರಸ್ತಾವನೆಗಳನ್ನು ಅನುಮೋದನೆಯೊಂದಿಗೆ ಆಯಾ ಇಲಾಖೆಗಳಿಗೆ ಹಿಂದಿರುಗಿಸಲಾಗಿವೆ ಹಾಗೂ ಎಷ್ಟು ಪ್ರಸ್ತಾವನೆಗಳು ನೆನೆಗುದಿಗೆ ಬಿದ್ದಿವೆ ? (ಇಲಾಖಾವಾರು ಹುದ್ದೆಗಳ ವಿವರ ಒದಗಿಸುವುದು)

## ಸಾರ್ವಜನಿಕವಾಗಿ ಮದ್ಯ ಮಾರಾಟ ಮಾಡುತ್ತಿರುವ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೪೪ (೪೫೩೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಸಾರ್ವಜನಿಕವಾಗಿ ಕಿರಾಣಿ/ಡಬ್ಬಾ ಅಂಗಡಿಗಳಲ್ಲಿ ಅವ್ಯಾಹತವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಜೊತೆಗೆ ಕೆಲವೊಂದು ಪೊಲೀಸ್ ಅಧಿಕಾರಿಗಳು ಶಾಮೀಲಾಗಿ ಇವರಿಗೆ ಸಹಕರಿಸುತ್ತಿದ್ದು, ಕಾನೂನು ಬಾಹಿರವಾಗಿ ಮದ್ಯ ಮಾರಾಟಕ್ಕೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ರೀತಿ ಶಾಮೀಲಾಗಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಶಿಸ್ತು ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

**ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವ ಕುರಿತು**

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೫ (೫೦೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಜೊತೆಗೆ ಕೆಲವೊಂದು ಅಬಕಾರಿ ಇಲಾಖೆಯ ಅಧಿಕಾರಿಗಳು ಶಾಮೀಲಾಗಿ ಕಾನೂನು ಬಾಹಿರವಾಗಿ ಮದ್ಯ ಮಾರಾಟಕ್ಕೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ತಡೆಗಟ್ಟಲು ಹಾಗೂ ಇಲಾಖಾಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕಠಿಣ ಕ್ರಮಗಳೇನು ; (ವಿವರ ನೀಡುವುದು)

(ಇ) ಕಾನೂನು ಬಾಹಿರವಾಗಿ ಮದ್ಯ ಮಾರಾಟ ದಾಖಲಾಗಿರುವ ಪ್ರಕರಣಗಳು ಎಷ್ಟು ; ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅಂಗವಿಕಲರಿಗೆ ಉದ್ಯೋಗ ನೀಡುವ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೬ (೫೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಉದ್ಯೋಗಗಳಲ್ಲಿ ಅಂಗವಿಕಲರಿಗೆ ಶೇಕಡಾ ಎಷ್ಟು ಮೀಸಲಾತಿ ನೀಡಲಾಗಿದೆ ;

(ಆ) ಸರ್ಕಾರಿ ಬಹುಮಹಡಿ ಕಟ್ಟಡಗಳಲ್ಲಿ ಲಿಫ್ಟ ನಿರ್ವಾಹಕ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಇರುವ ನಿಯಮಗಳೇನು ; ನೇಮಕಾತಿ ಮಾಡುವ ಸಂದರ್ಭದಲ್ಲಿ ಅಂಗವಿಕಲರಿಗೆ ಎಷ್ಟು ಶೇಕಡಾವಾರು ಮೀಸಲಾತಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಇ) ಸರ್ಕಾರಿ ಮತ್ತು ಖಾಸಗಿ ಕಟ್ಟಡಗಳಲ್ಲಿಯ ಲಿಫ್ಟ್‌ಗಳಲ್ಲಿ ಲಿಫ್ಟ್ ನಿರ್ವಾಹಕ ಹುದ್ದೆಗಳನ್ನು ಕಡ್ಡಾಯವಾಗಿ ಅಂಗವಿಲಕರಿಗೆ ಮೀಸಲಿರಿಸುವ ಕುರಿತು ಸರ್ಕಾರದ ನಿಲುವೇನು ?

## ಸರ್ಕಾರಿ ನೌಕರರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೭ (೫೧೧) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಲು ನಿಗಧಿಪಡಿಸಿದ ಕೊನೆಯ ದಿನಾಂಕವನ್ನು ಡಿಸೆಂಬರ್

೩೧, ೨೦೨೪ ರವರೆಗೆ ವಿಸ್ತರಿಸಲಾಗಿದ್ದು, ಸದರಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು SLOTS OPEN ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪಾಸು ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕವನ್ನು ಡಿಸೆಂಬರ್ ೩೧, ೨೦೨೪ ರವರೆಗೆ ವಿಸ್ತರಿಸಿದ ನಂತರ ಅಂದರೆ ದಿನಾಂಕ : ೧/೧/೨೦೨೪ ರಿಂದ ಪ್ರಸ್ತುತ ದಿನಾಂಕದವರೆಗೆ ಎಷ್ಟು ಬಾರಿ CLT SLOTS ಗಳನ್ನು OPEN ಮಾಡಲಾಗಿದೆ ಮತ್ತು ಯಾವ ಯಾವ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗಿದೆ ಹಾಗೂ ಈ ಪರೀಕ್ಷೆಗಳಲ್ಲಿ ಒಟ್ಟು ಎಷ್ಟು ಅಧಿಕಾರಿ/ನೌಕರರು ಪರೀಕ್ಷೆ ಬರೆದಿರುತ್ತಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಬರೆಯಲು CLT SLOTSಗಳನ್ನು ಯಾವಾಗ OPEN ಮಾಡಲಾಗುವುದು ?

## ಯಾತ್ರಿ ನಿವಾಸಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೪೪೮ (೫೧೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹೊರತು ಪಡಿಸಿ ಹೊರ ರಾಜ್ಯಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಹೂಡಿರುವ ಬಂಡವಾಳ ಎಷ್ಟು ; ಯಾವ ಯಾವ ರಾಜ್ಯಗಳಲ್ಲಿ ಯಾತ್ರಿ ನಿವಾಸ ನಿರ್ಮಿಸಲಾಗಿದೆ ;

ಈ ಯಾತ್ರಿ ನಿವಾಸಗಳಿಂದ ಬಂದಿರುವ ಆದಾಯ ಎಷ್ಟು; ಈ ಯಾತ್ರಿ ನಿವಾಸಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಕಳೆದ ೩ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಹಾಗೂ ಹೊರರಾಜ್ಯಗಳಲ್ಲಿ ಪ್ರವಾಸೋದ್ಯಮ ಉತ್ತೇಜಿಸುವುದಕ್ಕಾಗಿ ಪ್ರವಾಸೋದ್ಯಮ ಇಲಾಖೆಯಿಂದ ಜಾರಿಗೊಳಿಸಿದ ಉತ್ತೇಜಿಸುವುದಕ್ಕಾಗಿ ಉತ್ತೇಜನಕಾರಿ ಯೋಜನೆಗಳು ಯಾವುವು ; ಇದಕ್ಕಾಗಿ ಸರ್ಕಾರ ಒದಗಿಸಿರುವ ಅನುದಾನ ಎಷ್ಟು; (ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಹೊಸದಾಗಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಗುರುತಿಸಿರುವ ಐತಿಹಾಸಿಕ ಹಾಗೂ ಪ್ರೇಕ್ಷಣೀಯ ಸ್ಥಳಗಳು ಯಾವುವು ; ಇದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು; ಇವುಗಳಲ್ಲಿ ಎಷ್ಟು ಸ್ಥಳಗಳಲ್ಲಿ ಮೂಲಭೂತ ಸೌಲಭ್ಯಗಳು ಅಭಿವೃದ್ಧಿಯಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಆಂಧ್ರ ಪ್ರದೇಶದ ಶ್ರೀಶೈಲ ಕ್ಷೇತ್ರಕ್ಕೆ ಪ್ರತಿ ವರ್ಷ ಕರ್ನಾಟಕದಿಂದ ಲಕ್ಷಾಂತರ ಭಕ್ತರು ಕಾಲ್ನಡಿಗೆ ಮತ್ತು ಸಾರಿಗೆ ಮುಖಾಂತರ ತೆರಳುತ್ತಾರೆ, ಆದರೆ ಅವರಿಗೆ ಶ್ರೀ ಕ್ಷೇತ್ರದಲ್ಲಿ ಸರಿಯಾದ ತಂಗುವಿಕೆ ವ್ಯವಸ್ಥೆ ಇಲ್ಲದೇ ಕರ್ನಾಟಕದ ಯಾತ್ರಾರ್ಥಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶ್ರೀಶೈಲ ಕ್ಷೇತ್ರದಲ್ಲಿ ಸುಸಜ್ಜಿತ ಯಾತ್ರಿ ನಿವಾಸ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಪ್ರಕರಣಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೯ (೫೩೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೦೩ ವರ್ಷಗಳಲ್ಲಿ ನಡೆದಿರುವ ಕೊಲೆ ಹಾಗೂ ಕಳ್ಳತನದ ಪ್ರಕರಣಗಳೆಷ್ಟು; ಅವು ಯಾವುವು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು/ಕಳ್ಳರನ್ನು ಬಂಧಿಸಲಾಗಿದೆ ; ಕಲಬುರಗಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಕೊಲೆ ಪ್ರಕರಣಗಳು ಹೆಚ್ಚಾಗಿದ್ದು, ಸಮಾಜ ಘಾತುಕ ಶಕ್ತಿಗಳಿಗೆ ಕಾನೂನಿನ ಭಯ ಇಲ್ಲದಂತಾಗಿರುವುದರಿಂದ ಈ ಕುರಿತು ಸರ್ಕಾರದ ಪ್ರತಿಕ್ರಿಯೆ ಏನು ;

(ಇ) ಕರ್ನಾಟಕದಲ್ಲಿ ಕ್ರಿಕೆಟ್ ಐಪಿಎಲ್ ಬೆಟ್ಟಿಂಗ್ ಹಾಗೂ ಮಹಾರಾಷ್ಟ್ರದ ಗಡಿಗೆ ಹೊಂದಿಕೊಂಡಿರುವ ಪ್ರದೇಶಗಳಲ್ಲಿ ಮಟ್ಕಾ (ಓ.ಸಿ) ದಂಧೆ ಅವ್ಯಾಹತವಾಗಿ ನಡೆಯುತ್ತಿರುವ ಪ್ರಕರಣಗಳು ಸರ್ಕಾರದ ಗಮನದಲ್ಲಿದೆಯೇ ;

(ಈ) ಹಾಗಿದ್ದಲ್ಲಿ, ಕಳೆದ ೦೩ ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇಂತಹ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆಯಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿ ನಡೆದ ಸಣ್ಣ ಕೆರೆಗಳ ಕಾಮಗಾರಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೦ (೫೩೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸಣ್ಣ ಕೆರೆಗಳು ಯಾವುವು ; (ಗ್ರಾಮವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಕೆರೆಗಳಲ್ಲಿ ಹೂಳೆತ್ತುವ ಕಾಮಗಾರಿ ಹಾಗೂ ಇನ್ನಿತರೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಕಾಮಗಾರಿಯ ಮೊತ್ತವೆಷ್ಟು ; (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಇ) ಈ ಕಾಮಗಾರಿಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; ಸದರಿ ಕಾಮಗಾರಿಗಳ ಗುತ್ತಿಗೆದಾರರ ವಿವರವನ್ನು ನೀಡುವುದು ; (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಈ) ಈ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಕೆರೆಗಳಿಗೆ ಎಲ್ಲಿಂದ ನೀರು ಸರಬರಾಜು ಮಾಡಲಾಗುತ್ತಿದೆ ;

(ಉ) ಜಿಲ್ಲೆಯಲ್ಲಿ ಕೆರೆಗಳ ಅತಿಕ್ರಮ ಪ್ರಕರಣಗಳು ದಾಖಲಾದ ಸಂಖ್ಯೆ ಎಷ್ಟು ; ಇಂತಹ ಎಷ್ಟು ಅತಿಕ್ರಮಣಗಳನ್ನು ತೆರವುಗೊಳಿಸಲಾಗಿದೆ ; ಹಾಗೂ ಕೆರೆಗಳ ಅತಿಕ್ರಮಣವಾಗದಂತೆ ತಡೆಯಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?

## ಗ್ರಾಮೀಣ ಪ್ರದೇಶಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸುವ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೫೧ (೪೪೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ನಗರ ಮತ್ತು ಗ್ರಾಮೀಣ ಭಾಗಗಳಲ್ಲಿ ಅಂಗಡಿ, ಮನೆಗಳ್ಳತನ ಹೆಚ್ಚಿನ ಪ್ರಮಾಣದಲ್ಲಿ ಆಗುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರವು ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಆ) ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲಾಕಿನಾದ್ಯಂತ ಇತ್ತೀಚಿಗೆ ಜೂಜಾಟ, ಕಿರಾಣಿ ಅಂಗಡಿಗಳಲ್ಲಿ ಮದ್ಯ ದಾಸ್ತಾನು ಸಂಗ್ರಹ-ಮಾರಾಟ, ಮಟಕಾದಂತ ಕಾನೂನುಬಾಹಿರ ಚಟುವಟಿಕೆಗಳು ಅವ್ಯಾಹತವಾಗಿ ನಡೆಯುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡ ಕ್ರಮವೇನು ?

## ಭೂ ಸ್ವಾಧೀನ ಪ್ರಕರಣಗಳಲ್ಲಿ ಎಸ್.ಎಲ್.ಪಿ ದಾಖಲಿಸಲು ವಿಳಂಬವಾಗಿರುವ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೨ (೫೦೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಇಲಾಖೆಗಳು ಭೂ ಸ್ವಾಧೀನ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ಪರಿಹಾರ ನೀಡುವ ಸಂಬಂಧ ಒಟ್ಟು ಎಷ್ಟು ದಾವೆಗಳು ವಿವಿಧ ನ್ಯಾಯಾಲಯಗಳಲ್ಲಿ ನಡೆಯುತ್ತಿವೆ; (ಇಲಾಖಾವಾರು & ನ್ಯಾಯಾಲಯವಾರು ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ವಿವಿಧ ನ್ಯಾಯಾಲಯಗಳು ಎಷ್ಟು ಅರ್ಜಿಗಳನ್ನು ವಜಾ ಮಾಡಿವೆ; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಈ ವಜಾಗೊಂಡ ಅರ್ಜಿಗಳನ್ನು ಪ್ರಶ್ನಿಸಿ ೧೨೦ ದಿನಗಳ ನಂತರ ಮೇಲ್ಮನವಿ ಸಲ್ಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು; (ಇಲಾಖಾವಾರು ಮತ್ತು ಪ್ರಕರಣವಾರು ಮಾಹಿತಿ ನೀಡುವುದು)

(ಈ) ಮೇಲ್ಮನವಿ ಸಲ್ಲಿಸಲು ವಿಳಂಬಕ್ಕೆ ಕಾರಣಗಳೇನು; ವಿಳಂಭ ನೀತಿಯಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾದ ಆರ್ಥಿಕ ಹೊರೆ ಎಷ್ಟು; ಹಾಗೂ ವಿಳಂಬಕ್ಕೆ ಕಾರಣರಾದವರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಮುಖ್ಯಮಂತ್ರಿ ಅಮೃತ್ ನವ ನಗರೋತ್ಥಾನ ಯೋಜನೆ ಅನುಷ್ಠಾನದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೩ (೫೦೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಖ್ಯಮಂತ್ರಿ ಅಮೃತ ನವ ನಗರೋತ್ಥಾನ ಯೋಜನೆಯಡಿ ೨೦೨೨-೨೩ ಮತ್ತು ೨೦೨೩-೨೪ ನೇ ಸಾಲಿನಲ್ಲಿ ಬೆಂಗಳೂರು ನಗರದಲ್ಲಿ ಒದಗಿಸಿದ ಒಟ್ಟು ಮೊತ್ತ ಎಷ್ಟು; ಈ ಮೊತ್ತದಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಹಾಗೂ ಎಷ್ಟು ಮೊತ್ತದ ಕಾಮಗಾರಿಗಳನ್ನು ಕೈ ಬಿಡಲಾಗಿದೆ; (ವರ್ಷಾವಾರು ಮತ್ತು ವಾರ್ಡ್‌ವಾರು ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ಸದರಿ ಯೋಜನೆಯಡಿ ಕೈಗೆತ್ತಿಕೊಂಡ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ ; (ಕಾಮಗಾರಿವಾರು ಮಾಹಿತಿ ನೀಡುವುದು) ಈ ಕಾಮಗಾರಿಗಳಿಗೆ ಬಿಡುಗಡೆಯಾದ ಮೊತ್ತ ಎಷ್ಟು; (ವಿವರ ನೀಡುವುದು)

(ಇ) ಸದರಿ ಯೋಜನೆಯಡಿ ಕೈಗೆತ್ತಿಕೊಂಡ ಎಷ್ಟು ಕಾಮಗಾರಿಗಳ ಟೆಂಡರ್ ಹಿಂಪಡೆಯಲಾಗಿದೆ ಹಾಗೂ ಟೆಂಡರ್ ಹಿಂಪಡೆಯಲು ಕಾರಣಗಳೇನು ? (ವಿವರ ನೀಡುವುದು)

## ಬೆಂಗಳೂರಿನಲ್ಲಿ ಪೆರಿಫೆರಲ್ ರಸ್ತೆ ನಿರ್ಮಾಣದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೪ (೫೦೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಹೊರ ವಲಯದಲ್ಲಿ ಉದ್ದೇಶಿತ PRR ರಸ್ತೆಯನ್ನು ನಿರ್ಮಾಣ ಮಾಡಲು ಎಷ್ಟು ಎಕರೆ ಜಮೀನು ಬೇಕಾಗುತ್ತದೆ ; ಎಷ್ಟು ಹಳ್ಳಿಗಳಲ್ಲಿ ರಸ್ತೆ ಹಾದುಹೋಗುತ್ತದೆ ;

(ಆ) ಭೂ ಸ್ವಾಧೀನ ಪ್ರಕ್ರಿಯೆ ಯಾವಾಗಿನಿಂದ ಪ್ರಾರಂಭವಾಗಿದೆ ; ಸಂತ್ರಸ್ಥರಿಗೆ ಪರಿಹಾರವನ್ನು ಯಾವ ಮಾನದಂಡಗಳ ಆಧಾರದ ಮೇಲೆ ನಿಗದಿಪಡಿಸಿದೆ ;

(ಇ) ಸಂತ್ರಸ್ಥರಿಗೆ ೧೯೮೪ಳ ಕಾಯ್ದೆಯಡಿ ಭೂ ಪರಿಹಾರ ನೀಡಲು ಉದ್ದೇಶಿಸಲಾಗಿದೆಯೇ ; ಸಂತ್ರಸ್ಥರಿಗೆ ಇದರಿಂದ ಆಗುವ ಸಾಧಕ-ಭಾದಕಗಳೇನು ;

(ಈ) ಕಳೆದ ಎರಡು ವರ್ಷಗಳಲ್ಲಿ ಈ ರಸ್ತೆ ಹಾದುಹೋಗುವ ಗ್ರಾಮಗಳ ಸ್ಥಿರಾಸ್ತಿ ಮಾರ್ಗ ಸೂಚಿ ದರಗಳ ವಿವರಗಳನ್ನು ಕಡಿಮೆ ಮಾಡಲಾಗಿದೆಯೇ ; ಕಡಿಮೆ ಮಾಡಿರುವುದಕ್ಕೆ ಕಾರಣಗಳೇನು ?

## ಆಗಸ್ಟ್ ೨೭ರಂದು ನಡೆದ ಕೆ.ಎ.ಎಸ್. ಪೂರ್ವಭಾವಿ ಪರೀಕ್ಷೆಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೪೫೫ (೫೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚಿನ ಆಗಸ್ಟ್ ೨೭ ರಂದು ನಡೆದ ೩೮೮ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ನಡೆದ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಭಾಷಾಂತರದಲ್ಲಿ ಸಾಕಷ್ಟು ಲೋಪಗಳಾಗಿ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದು ನಿಜವೇ ; ನಿಜವಿದ್ದಲ್ಲಿ, ಈ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಾದ ಲೋಪದೋಷಗಳನ್ನು ಪತ್ತೆ ಹಚ್ಚಲಾಗಿದೆಯೇ ; ಈ ಬಗ್ಗೆ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ ವರದಿಯ ಅಂಶಗಳಾವುವು ; (ಪೂರ್ಣ ವಿವರ ನೀಡುವುದು)

(ಆ) ಈ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಾದ ಲೋಪದೋಷಗಳಿಗೆ ಕಾರಣರಾದ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಸೂಕ್ತ ಭಾಷಾಂತರ/ ಕನ್ನಡ ಅನುವಾದಕ ತಜ್ಞರುಗಳ ಕೊರತೆ ಇದೆಯೇ ; ಇದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಆಯೋಗವು ಕೈಗೊಂಡ ಕ್ರಮವೇನು ;

(ಈ) ಭಾಷಾಂತರಕಾರರು/ಕನ್ನಡ ಅನುವಾದಕಾರರನ್ನು ಯಾವ ನಿಯಮ ಹಾಗೂ ಮಾನದಂಡದಡಿಯಲ್ಲಿ ನೇಮಿಸಿಕೊಳ್ಳಲಾಗುತ್ತದೆ ;

(ಉ) ಕೆ.ಎ.ಎಸ್. ಪೂರ್ವಭಾವಿ ಮರು ಪರೀಕ್ಷೆಯನ್ನು ಯಾವ ದಿನಾಂಕದಂದು ನಡೆಸಲು ಆಯೋಗವು ತೀರ್ಮಾನಿಸಿದೆ ; ಈ ಕುರಿತು ಆಯೋಗವು ಕೈಗೊಂಡ ಪೂರ್ವ ಸಿದ್ಧತೆಗಳೇನು ? (ವಿವರವಾದ ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿನ ಬೃಹತ್ ನೀರಾವರಿ ಯೋಜನೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೪೫೬ (೫೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿ ಕಾಮಗಾರಿ ಹಂತದಲ್ಲಿರುವ ಬೃಹತ್ ನೀರಾವರಿ ಯೋಜನೆಗಳು ಯಾವುವು ; ಈ ನೀರಾವರಿ ಯೋಜನೆಗಳಿಗಾಗಿ ಸರ್ಕಾರ ನಿಗದಿಪಡಿಸಿದ ಅನುದಾನ ಎಷ್ಟು ;

(ಆ) ಕಲಬುರಗಿ, ಬೀದರ್, ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಶಾಶ್ವತ ನೀರಾವರಿಗಾಗಿ ಸರ್ಕಾರ ಕೈಗೊಂಡ ಯೋಜನೆಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಈ ನೀರಾವರಿ ಯೋಜನೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ?

## ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :–**

೪೫೭ (೫೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸರ್ಕಾರದಿಂದ ಮಂಜೂರಾದ, ಭರ್ತಿಯಾದ ಹಾಗೂ ಖಾಲಿಯಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆಗಳಿಗನುಸಾರ ವಿವರ ನೀಡುವುದು)

(ಆ) ಪ್ರಸ್ತುತ ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆಯಾಧಾರಿತ ಮತ್ತು ಖಾಯಂ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ಆಯೋಗದಲ್ಲಿನ ಸಿಬ್ಬಂದಿಗಳ ತೀವ್ರ ಕೊರತೆಯಿಂದಾಗಿ ರಾಜ್ಯ ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಪರೀಕ್ಷೆಗಳ ಮೌಲ್ಯಮಾಪನ ಸೇರಿದಂತೆ ಎಲ್ಲಾ ನೇಮಕಾತಿ ಪ್ರಕ್ರಿಯೆಗಳು ತೀವ್ರ ವಿಳಂಬಗತಿಯಲ್ಲಿ ಫಲಿತಾಂಶಗಳನ್ನು ಪ್ರಕಟಿಸುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆಯೋಗದಲ್ಲಿನ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು;

(ಈ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಹುದ್ದೆಗಳನ್ನು ನೇಮಕಾತಿ ಮಾಡುವ "ಉದ್ಯೋಗ ಸೌಧ" ಎನಿಸಿರುವ ಕರ್ನಾಟಕ ಲೋಕಸೇವಾ ಆಯೋಗದಲ್ಲೇ ಸಿಬ್ಬಂದಿಗಳ ಕೊರತೆಯಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಸಾಧ್ಯವೇ; ಈ ಕುರಿತು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳಾವುವು? (ವಿವರವಾದ ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿನ ಬುಡಕಟ್ಟುಗಳಿಗೆ ಕಲ್ಪಿಸಿರುವ ಪುನರ್ವಸತಿ ಕೇಂದ್ರಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೪೫೮ (೪೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅರಣ್ಯ ಪ್ರದೇಶದಿಂದ ಒಕ್ಕಲೆಬ್ಬಿಸಿದ ಬುಡಕಟ್ಟು ಜನಾಂಗಕ್ಕಾಗಿ ನಿರ್ಮಾಣಗೊಂಡ ಪುನರ್ವಸತಿ ಕೇಂದ್ರಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪುನರ್ವಸತಿ ಕೇಂದ್ರಗಳಲ್ಲಿ ಸಂಪೂರ್ಣ ಮೂಲಭೂತ ಸೌಕರ್ಯಗಳು, ಪೂರ್ಣಗೊಂಡ ಕೇಂದ್ರಗಳು ಮತ್ತು ಪೂರ್ಣಗೊಳ್ಳದೆ ಇರುವ ಕೇಂದ್ರಗಳು ಯಾವುವು ;

(ಇ) ಪುನರ್ವಸತಿ ಪೂರ್ಣಗೊಳ್ಳದೆ ಇರುವ ಕೇಂದ್ರಗಳೆಷ್ಟು; ಇದಕ್ಕೆ ಕಾರಣವೇನು ; ಇದರ ಕುರಿತು ಸರ್ಕಾರದ ಮುಂದಿನ ಕ್ರಮಗಳೇನು ?

## ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಜನರ ಕುಡಿಯುವ ನೀರಿನ ಸಮಸ್ಯೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೪೫೫ (೪೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಬಹುತೇಕ ಬುಡಕಟ್ಟು ಜನಾಂಗದ ಹಳ್ಳಿಗಳು ಕಾಲೋನಿ ರೂಪದಲ್ಲಿ ಇರದೆ ಒಂದೊಂದೆ ಮನೆಗಳು ದೂರ ದೂರದಲ್ಲಿ ಇರುವುದರಿಂದ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ, ಹತ್ತಿರದ ಹಳ್ಳ, ನದಿ, ಬೆಟ್ಟ ಮುಂತಾದವುಗಳಿಂದ ಬರುವ ನೀರನ್ನೇ ಕುಡಿಯಲು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಆ) ಈ ಜಿಲ್ಲೆಯ ಬುಡಕಟ್ಟು ಜನಾಂಗದವರಿಗೆ ಕುಡಿಯುವ ನೀರಿಗಾಗಿ ವಿಶೇಷ ಅನುದಾನ ಘೋಷಿಸಿ ಇವರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಚನೆ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಮುಂದಿನ ಕ್ರಮಗಳ ಕುರಿತು ಮಾಹಿತಿ ಒದಗಿಸುವುದು ?

## ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೪೬೦ (೪೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ನಿರ್ದೇಶಕರ ಹುದ್ದೆ ಖಾಲಿ ಇರುವುದರ ಕುರಿತು ನಿರಂತರವಾಗಿ ಪತ್ರಿಕೆಗಳಲ್ಲಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ. ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಎಷ್ಟು ಜನ ಬುಡಕಟ್ಟು ಸಮಾಜದ ಉನ್ನತ ಶಿಕ್ಷಣ ಪಡೆದ ವಿದ್ಯಾವಂತ ಯುವಕರಿಗೆ ಸೇವೆಮಾಡಲು ಅವಕಾಶ ಕಲ್ಪಿಸಲಾಗಿದೆ ; (ವಿಭಾಗಾವಾರು ಮಾಹಿತಿ ನೀಡುವುದು)

(ಇ) ಸದರಿ ಸಂಸ್ಥೆಯಲ್ಲಿ ಮೂಲ ಬುಡಕಟ್ಟು ಸಮಾಜದ ವಿದ್ಯಾವಂತರನ್ನು ಯುವಕರನ್ನು ಸಂಶೋಧನಾ ಅಧಿಕಾರಿಗಳನ್ನಾಗಿ ನೇಮಿಸುವ ಯೋಚನೆ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಸರ್ಕಾರದ ಮುಂದಿನ ಕ್ರಮಗಳ ಕುರಿತು ಮಾಹಿತಿ ಒದಗಿಸುವುದು ?

## ಬೆಳಗಾವಿ ಜಿಲ್ಲೆಯ ಬುಡಕಟ್ಟು ಜನಾಂಗಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೪೬೧ (೪೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪರಿಶಿಷ್ಟ ಪಂಗಡದ ಜನಾಂಗಗಳಿವೆ ಮತ್ತು ಅವರುಗಳ ಜನಸಂಖ್ಯೆ ಎಷ್ಟಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿರುವ ಬುಡಕಟ್ಟು ಸಿದ್ದಿ ಜನಾಂಗದವರಿಗೆ ಸರ್ಕಾರದಿಂದ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆಯೇ ; ನೀಡುತ್ತಿದ್ದರೆ, ಪಂಚಾಯತಿವಾರು ಕುಟುಂಬಗಳ ಮಾಹಿತಿ ನೀಡುವುದು ;

(ಇ) ಖಾನಾಪೂರ ತಾಲ್ಲೂಕಿನ ಗೊಧೋಳಿ ಪಂಚಾಯತಿ ವ್ಯಾಪ್ತಿಯ ಔರತಬೈಲ್ ಗ್ರಾಮದಲ್ಲಿನ ಪರಿಶಿಷ್ಟ ಪಂಗಡದ ಕಾತ್ಯರಿ (ಮಂಗೇಮಾರಿ) ಜನಾಂಗಕ್ಕೆ ಮನೆ, ರಸ್ತೆ, ನೀರು, ರೇಷನ್ ಕಾರ್ಡ ಮುಂತಾದ ಯಾವುದೇ ಮೂಲಭೂತ ಸೌರ್ಕಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳ ಕುರಿತು ಮಾಹಿತಿ ನೀಡುವುದು ?

## ರಾಮನಗರ ಜಿಲ್ಲೆಯ ಬುಡಕಟ್ಟು ಇರುಳಿಗ ಜನಾಂಗದ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೪೬೨ (೪೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಜಿಲ್ಲೆಯಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಒಟ್ಟು ಎಷ್ಟು ಇರುಳಿಗ ಹಾಡಿಗಳು ಮತ್ತು ಕುಟುಂಬಗಳಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿರುವ ಇರುಳಿಗ ಸಮಾಜದ ಎಷ್ಟು ಹಾಡಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಮತ್ತು ಬಾಕಿ ಇರುವ ಹಾಡಿಗಳೆಷ್ಟು ;

(ಇ) ಮಾಗಡಿ ತಾಲ್ಲೂಕಿನ ಗೊಲ್ಲರ ದೊಡ್ಡಿಯ ಹತ್ತಿರ ಸುಮಾರು 40 ಇರುಳಿಗ ಕುಟುಂಬಗಳು ಕನಿಷ್ಠ ಮೂಲಭೂತ ಸೌಲಭ್ಯಗಳಿಲ್ಲದೆ ಅರೆಕಲ್ಲಿನ ಮೇಲೆ ಜೀವನ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕೋಲಿ/ಕಬ್ಬಲಿಗ/ಬೆಸ್ತ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರ್ಪಡಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೪೬೩ (೪೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:30.10.2023 ರಂದು ಕೋಲಿ/ಕಬ್ಬಲಿಗ/ಬೆಸ್ತ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಕುರಿತು ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾದವರು ಕಳುಹಿಸಿರುವ ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವರದಿಯು ಬಂದು ಒಂದು ವರ್ಷವಾದರೂ ಯಾವುದೇ ಕ್ರಮಗಳನ್ನು ಕೈಗೊಳ್ಳದಿರಲು ಕಾರಣಗಳೇನು ;

(ಇ) ಕೋಲಿ/ಕಬ್ಬಲಿಗ/ಬೆಸ್ತ/ಬಾರಿಕಾ/ಅಂಬಿಗಾ/ಮೊಗವೀರ ಪರ್ಯಾಯ ಪದಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಬೇಕೆಂದು ಸುಮಾರು 40 ವರ್ಷಗಳಿಂದ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಸ್ಪಂದನೆ ಏನು; ಸೇರ್ಪಡೆ ಮಾಡದಿರಲು ಕಾರಣವೇನು ;

(ಈ) ಕೋಲಿ/ಕಬ್ಬಲಿಗ/ಬೆಸ್ತ/ಬಾರಿಕಾ/ಅಂಬಿಗಾ/ಮೊಗವೀರ ಪರ್ಯಾಯ ಪದಗಳನ್ನು ಟೋಕ್ರೆ ಕೋಲಿ/ಕೋಲಿ ಡೋರ್/ಕೋಯಾ ಸದರಿ ಪದಗಳನ್ನು ಬಿಟ್ಟು ಹೋದ ಪದಗಳೆಂದು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಕಲಬುರಗಿಯಲ್ಲಿರುವ ಕರ್ನಾಟಕ ಮಾಹಿತಿ ಹಕ್ಕು ಪೀಠದ ಪುನಃಶ್ಚೇತನ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೪೬೪ (೪೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯಲ್ಲಿ ಸ್ಥಾಪನೆಯಾಗಿರುವ ಕರ್ನಾಟಕ ಮಾಹಿತಿ ಹಕ್ಕು ಪೀಠಕ್ಕೆ ಒದಗಿಸಲಾದ ಮೂಲಭೂತ ಸೌಲಭ್ಯಗಳಾವುವು; ಮತ್ತು ಈ ಪೀಠಕ್ಕೆ ನೇಮಿಸಿದ ಅಧಿಕಾರಿಗಳು/ಸಿಬ್ಬಂದಿಗಳು ಯಾರ್ಯಾರು ; (ವಿವರ ನೀಡುವುದು)

(ಆ) ಈ ಪೀಠವು ಕಲಬುರಗಿಯಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯಕೈಗೊಳ್ಳದಿರುವುದರಿಂದ ಆಡಳಿತಾತ್ಮಕವಾಗಿ ಅರ್ಜಿದಾರರು ಬೆಂಗಳೂರಿಗೆ ಅಲೆದಾಡುವುದು ನಿಜವೇ ;

(ಇ) ಕಲಬುರಗಿಯಲ್ಲಿ ಹೆಸರಿಗೆ ಮಾತ್ರ ಪೀಠವಿದ್ದು ಎಲ್ಲಾ ಕಾರ್ಯಗಳು ಬೆಂಗಳೂರಿನಿಂದ ನಡೆಯುತ್ತಿದ್ದು ಈ ಭಾಗದ ಜನರ ಸಮಸ್ಯೆಗಳಿಗೆ ಮತ್ತು ಅರ್ಜಿದಾರರಿಗೆ ತೊಂದರೆಯಾಗುತ್ತಿದ್ದು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಕಲಬುರಗಿಯಲ್ಲಿ ಸ್ಥಾಪಿತವಾದ ಮಾಹಿತಿ ಹಕ್ಕು ಪೀಠದ ಕಾರ್ಯಗಳನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೊಳಿಸಿ ಜನರ/ಅರ್ಜಿದಾರರ ಸಮಸ್ಯೆಗಳಿಗೆ ಪರಿಹಾರ ದೊರಕಿಸಿ ಕೊಡಲಾಗುವುದೇ ?

## ಕೆಪಿಎಸ್‌ಸಿಗೆ ಕಾಯಕಲ್ಪ ಕಲ್ಪಿಸುವ ಹೋಟಾ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನಗೊಳ್ಳದಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೪೬೫ (೪೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಲೋಕಸೇವಾ ಆಯೋಗದ ಮಾಜಿ ಅಧ್ಯಕ್ಷ ಪೂರ್ಣಚಂದ್ರ ಹೋಟಾ ಸಮಿತಿಯು ವರದಿ ಸಲ್ಲಿಸಿ ಎಷ್ಟು ವರ್ಷಗಳಾದವು ;

(ಆ) ಕೆಪಿಎಸ್‌ಸಿಯಲ್ಲಿ ದುರಾಡಳಿತ ಮತ್ತು ಅವ್ಯವಸ್ಥೆ ಸುಧಾರಿಸಲು ಸಲ್ಲಿಸಿದ ಹೋಟಾ ಸಮಿತಿಯ ವರದಿಯ ವಿಳಂಬಕ್ಕೆ ಕಾರಣಗಳೇನು ;

(ಇ) ಕೆಪಿಎಸ್‌ಸಿ ಅಧ್ಯಕ್ಷರು/ಸದಸ್ಯರುಗಳ ನೇಮಕಾತಿಯಲ್ಲಿನ ಗೊಂದಲಗಳು, ನೇಮಕಾತಿಯಲ್ಲಿ ಆಗುತ್ತಿರುವ ಸಮಸ್ಯೆಗಳ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸುಧಾರಣೆ ತಂದು ಸಾಂವಿಧಾನಿಕ ಸಂಸ್ಥೆಯ ಆತ್ಮವಿಶ್ವಾಸ ಹೆಚ್ಚಿಸಿ ಉದ್ಯೋಗ ಆಕಾಂಕ್ಷಿಗಳಿಗೆ ಸಹಾಯ ಮಾಡುವಲ್ಲಿ ಸರ್ಕಾರದ ಕಾಳಜಿ ಏನು ;

(ಈ) ಹಲವಾರು ಹಗರಣಗಳಿಂದ ಕೂಡಿರುವ ಕೆಪಿಎಸ್‌ಸಿಯಲ್ಲಿ ಸುಧಾರಣೆ ತರಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ?

## ಮಹದಾಯಿ ತೀರ್ಪಿನ ಅಡಿಯಲ್ಲಿ ಹಂಚಿಕೆಯಾಗಿರುವ ನೀರಿನ ಪ್ರಮಾಣ ಯೋಜನೆ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೬೬ (೪೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಕ್ಕೆ ಮಹದಾಯಿ ಜಲ ವಿವಾದ ನ್ಯಾಯಾಧೀಕರಣ ತೀರ್ಪಿನಲ್ಲಿ ದೊರೆತಿರುವ ನೀರಿನ ಪ್ರಮಾಣವೆಷ್ಟು ; ಈ ತೀರ್ಪಿನ ಮುಖ್ಯ ಸಾರಾಂಶ ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯ ಸರ್ಕಾರ ಮಹದಾಯಿ ಜಲವಿವಾದ ನ್ಯಾಯಾಧೀಕರಣ ತೀರ್ಪಿನ ವಿರುದ್ಧ ಸುಪ್ರೀಂಕೋರ್ಟ್‌ನಲ್ಲಿ ದಾವೆ ದಾಖಲಿಸಿದೆಯೇ ; ಹಾಗಿದ್ದಲ್ಲಿ, ಈ ದಾವೆ ಯಾವ ಹಂತದಲ್ಲಿದೆ ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಮಹಾದಾಯಿ ತೀರ್ಪಿನ ಅಡಿಯಲ್ಲಿ ಹಂಚಿಕೆಯಾಗಿರುವ ನೀರನ್ನು ಕಳಸಾ–ಬಂಡೂರಿ ನಾಲಾ ತಿರುವು ಯೋಜನೆ ಅಡಿಯಲ್ಲಿ ಬಳಸಲು ಯೋಜನೆ ರೂಪಿಸಿದೆಯೇ ; ಹಾಗಿದ್ದಲ್ಲಿ, ಈ ಯೋಜನೆ ಅನುಷ್ಠಾನ ಯಾವ ಹಂತದಲ್ಲಿದೆ ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಕೆರೆ ಸಂರಕ್ಷಣೆ ಅಭಿವೃದ್ಧಿ ಪ್ರಾಧಿಕಾರದ ಕಾರ್ಯವೈಖರಿ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೪೬೭ (೪೬೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಚಿತವಾಗಿರುವ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರವನ್ನು ಯಾವ ಕಾಯಿದೆ ಅಡಿಯಲ್ಲಿ ಸ್ಥಾಪಿಸಲಾಗಿದೆ ; ಈ ಪ್ರಾಧಿಕಾರದ ಧ್ಯೇಯೋದ್ದೇಶಗಳು ಯಾವುವು ; ಪ್ರಾಧಿಕಾರದ ಮುಖ್ಯಸ್ಥರು ಮತ್ತು ಸದಸ್ಯರುಗಳು ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯದಲ್ಲಿರುವ ಒಟ್ಟು ಸಣ್ಣ ನೀರಾವರಿ ಕೆರೆಗಳು ಎಷ್ಟು; ಮತ್ತು ಇದುವರೆಗೂ ಎಷ್ಟು ಕೆರೆಗಳ ಬಗ್ಗೆ ಸರ್ವೇ ಕಾರ್ಯ ಕೈಗೊಳ್ಳಲಾಗಿದೆ ; ಸರ್ವೇ ಮತ್ತು ಇಲಾಖೆ ವರದಿಯಂತೆ ಎಷ್ಟು ಸಣ್ಣ ಕೆರೆಗಳನ್ನು ಒತ್ತುವರಿ ಮಾಡಲಾಗಿದೆ ; ಮತ್ತು ಎಷ್ಟು ಒತ್ತುವರಿಗಳನ್ನು ತೆರವುಗೊಳಿಸಲಾಗಿದೆಯೇ ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಸಣ್ಣ ಕೆರೆಗಳ ಹೊಳೆತ್ತುವ ಕಾರ್ಯಕ್ರಮ ಯಾವ ಹಂತದಲ್ಲಿದೆ ; ಕಳೆದ ೫ ವರ್ಷಗಳಲ್ಲಿ ಕೆರೆಗಳ ದುರಸ್ಥಿ ಮತ್ತು ಉಡಾವಣೆಗಾಗಿ ರಾಜ್ಯ ಸರ್ಕಾರ ನೀಡಿರುವ ಅನುದಾನವೆಷ್ಟು ? (ಪೂರ್ಣ ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ವ್ಯಾಪ್ತಿಯ ಮಾರುಕಟ್ಟೆಗಳ ದುರಸ್ಥಿ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೬೮ (೪೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಮಾರ್ಕೆಟ್‌ಗಳ ಸಂಖ್ಯೆ ಎಷ್ಟು ; (ವಿಧಾನ ಸಭಾ ಕ್ಷೇತ್ರವಾರು ಪೂರ್ಣ ಮಾಹಿತಿ ನೀಡುವುದು) ಈ ಮಾರ್ಕೆಟ್ ವ್ಯವಸ್ಥೆಯನ್ನು ವ್ಯವಸ್ಥಿತ ರೀತಿಯಲ್ಲಿ ನಿರ್ವಹಿಸಲು ಮಹಾನಗರ ಪಾಲಿಕೆ ಕೈಗೊಂಡಿರುವ ಕ್ರಮಗಳು ಯಾವುವು ; ( ಈ ಬಗ್ಗೆ ಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರದಲ್ಲಿರುವ ಮಾರ್ಕೆಟ್‌ಗಳು ಮತ್ತು ಮಾರ್ಕೆಟ್ ಒಳಭಾಗದಲ್ಲಿರುವ ಅಂಗಡಿ ಮಳಿಗೆಗಳಿಗೆ ಹಲವು ದಶಕಗಳಿಂದ ದುರಸ್ಥಿ ಇಲ್ಲದೆ, ಅಪಾಯ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಮಾರ್ಕೆಟ್ ಮತ್ತು ಮಳಿಗೆಗಳ ದುರಸ್ಥಿ ಮಹಾನಗರ ಪಾಲಿಕೆ ನಿಗಧಿಪಡಿಸಿರುವ ಅನುದಾನವೆಷ್ಟು; ಮತ್ತು ಕೈಗೊಂಡಿರುವ ದುರಸ್ತಿಗಳು ಯಾವುವು ; (ಕಳೆದ ೫ ವರ್ಷಗಳ ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಹಲವಾರು ಮಾರ್ಕೆಟ್‌ಗಳನ್ನು ಖಾಸಗೀಕರಣ ಮಾಡಲು ಯೋಜನೆ ರೂಪಿಸಿದೆಯೇ ? (ಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಹೆಚ್ಚುತ್ತಿರುವ ಸೈಬರ್ ಕ್ರೈಂ ಪ್ರಕರಣಗಳ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೬೯ (೪೬೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ದಿನೇ ದಿನೇ ಸೈಬರ್ ಕ್ರೈಂ ಪ್ರಕರಣಗಳು ಹೆಚ್ಚಾಗಿ ಮುಗ್ಧ ಮತ್ತು ಅಮಾಯಕ ನಾಗರೀಕರನ್ನು ಆರ್ಥಿಕ ವಂಚನೆ ಮತ್ತು ಮೋಸ ಹಾಗೂ ಡಿಜಿಟಲ್ ಭಯಕ್ಕೆ ಒಳಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ದಾಖಲಾದ ಇಂತಹ ಪ್ರಕರಣಗಳು ಎಷ್ಟು ; ಮತ್ತು ಈ ಪ್ರಕರಣಗಳ ತನಿಖೆ ಹಂತ ಯಾವ ಹಂತದಲ್ಲಿದೆ ಹಾಗೂ ನೊಂದ ಎಷ್ಟು ನಾಗರೀಕರಿಗೆ ಇಂತಹ ಪ್ರಕರಣಗಳಲ್ಲಿ ನ್ಯಾಯ ಒದಗಿಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಇಂತಹ ವ್ಯವಸ್ಥಿತ ರೀತಿಯ ಸೈಬರ್ ಕ್ರೈಂ ಪ್ರಕರಣಗಳನ್ನು ತಡೆಹಿಡಿಯಲು ಮತ್ತು ಇಂತಹ ಪ್ರಕರಣಗಳಲ್ಲಿ ನೊಂದವರಿಗೆ ನ್ಯಾಯ ದೊರಕಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ರೂಪಿಸಿರುವ ವ್ಯವಸ್ಥೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ಸೈಬರ್ ಕ್ರೈಂಗಳಲ್ಲಿ ದೇಶ ವಿದೇಶಗಳ ಪ್ರಜೆಗಳನ್ನು ಒಳಗೊಂಡ ಒಂದು ಜಾಲವಾಗಿದ್ದು, ಈ ಜಾಲವನ್ನು ಭೇದಿಸಲು ರಾಜ್ಯ ಸರ್ಕಾರ ಸುಸಜ್ಜಿತವಾದ ಮತ್ತು ಆಧುನಿಕ ತಂತ್ರಜ್ಞಾನವುಳ್ಳ ಪ್ರಯೋಗಾಲಯಗಳನ್ನು ಸ್ಥಾಪಿಸಿದೆಯೇ ; ಮತ್ತು ಅಗತ್ಯವಿರುವ ಅರಿತ–ನುರಿತ ಮತ್ತು ತರಬೇತಿ ಹೊಂದಿದ ಅಧಿಕಾರಿಗಳನ್ನು ಹಾಗೂ ತಂತ್ರಜ್ಞಾನಿಗಳನ್ನು ನೇಮಿಸಲಾಗಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ನ್ಯಾಯಮೂರ್ತಿ ಕೆಂಪಣ್ಣ ಆಯೋಗಕ್ಕೆ (ರಿಡೂ) ಸಂಬಂಧಿಸಿದ ಪ್ರಶ್ನೆಗಳ ಕುರಿತು

**ಶ್ರೀ ಅಡಗೂರು ಹೆಚ್. ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) :–**

೪೭೦ (೪೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಯಮೂರ್ತಿ ಕೆಂಪಣ್ಣ ಆಯೋಗ ಯಾವಾಗ ರಚನೆಯಾಯಿತು ; ಈ ಆಯೋಗದ ನಿಯಮ, ನಿಬಂಧನೆಗಳೇನು ;

(ಆ) ಸದರಿ ಆಯೋಗ ತನ್ನ ಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದರೆ, ಸರ್ಕಾರ ಈ ಆಯೋಗದ ವರದಿಯನ್ನು ಸ್ವೀಕರಿಸಿದೆಯೇ ;

(ಇ) ಹಾಗಿದ್ದಲ್ಲಿ, ವರದಿಯನ್ನು ಉಭಯ ಸದನದ ಮುಂದೆ ಯಾವಾಗ ಮಂಡಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಕೇಂದ್ರ ಸರ್ಕಾರದ ತೆರಿಗೆ ಹಂಚಿಕೆ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೧ (೫೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2024-25ನೇ ಸಾಲಿನ ಆಯವ್ಯಯದಲ್ಲಿ ಜಿ.ಎಸ್.ಟಿ ತೆರಿಗೆಯ ಅವೈಜ್ಞಾನಿಕ ಅನುಷ್ಠಾನದಿಂದ ರಾಜ್ಯಕ್ಕೆ ಕಳೆದ ಏಳು ವರ್ಷಗಳ ಅವಧಿಯಲ್ಲಿ ಒಟ್ಟು 59,274 ಕೋಟಿ ರೂ.ಗಳು 15ನೇ ಹಣಕಾಸು ಆಯೋಗದ ಆರು ವರ್ಷದ ಅವಧಿಯಲ್ಲಿ ಕೇಂದ್ರದಿಂದ ರಾಜ್ಯಗಳಿಗೆ ಹಂಚಿಕೆಯಾಗುವ ಒಟ್ಟು ತೆರಿಗೆ ಹಂಚಿಕೆಯಲ್ಲಿ ರಾಜ್ಯಕ್ಕೆ 62,098 ಕೋಟಿ ರೂ. ಗಳು ಕೇಂದ್ರ ಸರ್ಕಾರವು ವಿಧಿಸುವ ಸೆಸ್ ಮತ್ತು ಸರ್ ಚಾರ್ಜ್‌ಗಳನ್ನು ನ್ಯಾಯಯುತವಾಗಿ ರಾಜ್ಯಗಳಿಗೆ ಹಂಚಿಕೆ ಮಾಡದಿರುವುದರಿಂದ ರಾಜ್ಯಕ್ಕೆ ಕಳೆದ ಏಳು ವರ್ಷಗಳ ಅವಧಿಯಲ್ಲಿ ಒಟ್ಟು 45,322 ಕೋಟಿ ರೂ ಗಳು ಒಟ್ಟಾರೆ 1,66,694 ಕೋಟಿ ರೂ.ಗಳು ನಷ್ಟವಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳಾವುವು?

## ಅನಧಿಕೃತ ಮದ್ಯ ಮಾರಾಟ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೨ (೫೫೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೆಲವು ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಅನಧಿಕೃತ ಬಡಾವಣೆಗಳಲ್ಲಿ ಅನಧಿಕೃತವಾಗಿ ಮದ್ಯ ಮಾರಾಟ ನಡೆಯುತ್ತಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, 2023–24 ಮತ್ತು 2024–25ನೇ ಸಾಲಿನಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) 2023–24ನೇ ಸಾಲಿನಲ್ಲಿ ಅನಧಿಕೃತ ಮದ್ಯ ಮಾರಾಟದಿಂದ ಸರ್ಕಾರಕ್ಕೆ ಆಗಿರುವ ತೆರಿಗೆ ನಷ್ಟವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ರೀತಿಯ ಅನಧಿಕೃತ ಮದ್ಯ ಮಾರಾಟವನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೩ (೫೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; ಅವುಗಳಲ್ಲಿ ಎಷ್ಟು ಘಟಕಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ ; (ವಾರ್ಡ್‌ವಾರು ಮಾಹಿತಿ ನೀಡುವುದು)

(ಆ) ಈ ಶುದ್ಧ ಕುಡಿಯುವ ನೀರಿನ ಘಟಕಗಳ ನಿಯಮಿತ ನಿರ್ವಹಣೆಗೆ ಪಾಲಿಕೆಯು ಕೈಗೊಂಡಿರುವ ಕ್ರಮಗಳೇನು ;

(ಇ) 2023–24 ಮತ್ತು 2024–25 ಸಾಲಿನಲ್ಲಿ ನೀರಿನ ಗುಣಮಟ್ಟದ ಕುರಿತು ಆಡಿಟ್ ಮಾಡಲಾಗಿದೆಯೇ ; ಹಾಗಿದ್ದಲ್ಲಿ ಆಡಿಟ್ ವರದಿಯ ಮುಖ್ಯಾಂಶಗಳೇನು ? (ವಿವರ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಹೆಚ್ಚಳ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೪ (೫೫೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶಗಳಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಸೈಬರ್ ಪ್ರಕರಣಗಳು ದಾಖಲಾಗಿವೆ ; ಅವುಗಳಲ್ಲಿ ಎಷ್ಟು ಪ್ರಕರಣಗಳನ್ನು ಈಗಾಗಲೇ ವೀಲೆ ಮಾಡಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಆ) ಗ್ರಾಮೀಣ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಸ್ಥಾಪನೆ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೫ (೫೬೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ವಿಜ್ಞಾನದ ಕುರಿತು ಅರಿವು ಮೂಡಿಸಲು ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ; (ವಿವರ ನೀಡುವುದು)

(ಆ) ವರುಣ ವಿಧಾನಸಭಾ ಕ್ಷೇತ್ರವು ಶೇಕಡಾ ೯೦ ರಷ್ಟು ಗ್ರಾಮೀಣ ಪ್ರದೇಶ ಹೊಂದಿದ್ದು, ಈ ಭಾಗದಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರ ಅಥವಾ ಮಿನಿ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಿದಲ್ಲಿ ಆ ಭಾಗದ ಗ್ರಾಮೀಣ ವಿದ್ಯಾರ್ಥಿಗಳಿಗೆ ಸಹಕಾರಿಯಾಗಲಿದ್ದು, ಈ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ? (ವಿವರ ನೀಡುವುದು)

## ಪ್ರವಾಸೋದ್ಯಮ ನಿರ್ವಹಣೆ ಹಾಗೂ ಪ್ರವಾಸಿಗರ ಸೌಲಭ್ಯದ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೬ (೫೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ನೂತನ ಪ್ರವಾಸೋದ್ಯಮ ನೀತಿಯನ್ನು ಎಂದಿನಿಂದ ಜಾರಿಗೆ ತಂದಿದೆ ;

(ಆ) ನೂತನ ಪ್ರವಾಸ ನೀತಿಯಡಿ ಎಷ್ಟು ಆದಾಯವನ್ನು ನಿರೀಕ್ಷಿಸಲಾಗಿದೆ: ಹಾಗೂ ಪ್ರವಾಸಿಗರಿಗೆ ಸೌಲಭ್ಯಗಳನ್ನು ಒದಗಿಸಲು ಯೋಚಿಸಲಾದ ಕ್ರಮಯೇನು ;

(ಇ) ಪ್ರವಾಸೋದ್ಯಮ ನೀತಿಯಡಿ ರೂಪಿಸಲಾಗಿರುವ ಹೊಸ ಯೋಜನೆಗಳಾವವು ಈ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಮೀಸಲಿರಿಸಿದ ಹಣ ವೆಷ್ಟು;

(ಈ) ಪ್ರವಾಸೋದ್ಯಮ ನೀತಿಯನ್ನು ಎಷ್ಟು ವರ್ಷಗಳಿಗೊಮ್ಮ ಪರಾಮರ್ಶಿಸಲಾಗುತ್ತಿದೆ ?

## ತುಂಗಭದ್ರ ಮತ್ತು ಜಲಾಶಯಗಳ ಸ್ಥಿತಿಗತಿಗಳ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೭ (೫೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ಸಂಭವಿಸಿದ ತುಂಗಭದ್ರಾ ಜಲಾಶಯ ಅವಘಡವು ಪುನಃ ಸಂಭವಿಸದಂತೆ ರಾಜ್ಯ ಸರ್ಕಾರ ಕೈಗೊಂಡಿರುವ ಮುನ್ನೆಚರಿಕೆ ಕ್ರಮಗಳೇನು ;

(ಆ) ಈ ಸಂಬಂಧ ರಾಜ್ಯದ ವಿವಿಧ ಜಲಾಶಯಗಳ ಸ್ಥಿತಿಗತಿಗಳನ್ನು ಸರ್ಕಾರ ಪರಿಶೀಲಿಸಿದೆಯೇ ;

(ಇ) ಪರಿಶೀಲಿಸಿದ್ದಲ್ಲಿ, ಸರ್ಕಾರ ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು ?

## ಮಳೆಯಿಂದ ನಗರ ಬಡಾವಣೆಗಳಲ್ಲಿನ ನಿವಾಸಿಗಳಿಗೆ ಆಗುತ್ತಿರುವ ತೊಂದರೆಗಳ ನಿರ್ವಹಣೆ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೮ (೫೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಸೇರಿದಂತೆ ರಾಜ್ಯದಲ್ಲಿ ಅಕ್ಟೋಬರ್ ತಿಂಗಳಿನಲ್ಲಿ ವಾಯು ಭಾರ ಕುಸಿತದಿಂದ ಸುರಿದ ಮಳೆಯಿಂದಾಗಿ ನಗರದ ಬಹಳಷ್ಟು ಬಡಾವಣೆಗಳ ವಸತಿ ಸಮುಚ್ಚಯಗಳು ದ್ವೀಪಗಳಂತಾದುದು ಸರ್ಕಾರದ ಗಮನಕ್ಕೆ ಬಂದಿಯೇ ;

(ಆ) ಇಂತಹ ವಾಯು ಭಾರ ಕುಸಿತದಿಂದ ಮಳೆ ಈ ಹಿಂದಿನಿಂದಲೂ ಹಲವು ವರ್ಷಗಳಲ್ಲಿ ಸಾಕಷ್ಟು ಭಾರಿ ಹಾನಿ ಮಾಡಿದ್ದರೂ ಸಹ ಯಾವುದೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳದಿರುವುದರಿಂದ ಆಗುತ್ತಿರುವ ತೊಂದರೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕರ್ನಾಟಕ ಲೋಕಸೇವಾ ಆಯೋಗದ ಸುಧಾರಣೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೯ (೪೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಲೋಕಸೇವಾ ಆಯೋಗದ ಸುಧಾರಣೆಗೆ ಪಿ.ಸಿ.ಹೋಟಾ ಸಮಿತಿ ನೀಡಿದ ಪ್ರಮುಖ ಶಿಫಾರಸ್ಸುಗಳು ಯಾವುವು: ಸದರಿ ಶಿಫಾರಸ್ಸುಗಳನ್ನು ಸರ್ಕಾರ ಒಪ್ಪಿಕೊಂಡಿದೆಯೇ; (ಮಾಹಿತಿ ಒದಗಿಸಲಾಗುವುದು)

(ಆ) ಸದರಿ ಸಮಿತಿಯ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಮತ್ತು ಜಾರಿಗೊಳಿಸಿದ ಪ್ರಮುಖ ಶಿಫಾರಸ್ಸುಗಳು ಯಾವುವು ?

## ಸೈಬರ್ ಆರ್ಥಿಕ ವಂಚನೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮೦ (೪೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸೈಬರ್ ಆರ್ಥಿಕ ವಂಚನೆಗೆ ಸಂಬಂಧಿಸಿದಂತೆ ಪ್ರಸ್ತುತ ಸಾಲಿನಲ್ಲಿ ನಡೆದ ಅಪರಾಧ ಪ್ರಕರಣ ದಾಖಲಾದ ಪ್ರಕರಣ ಮತ್ತು ಪತ್ತೆಯಾದ ಪ್ರಕರಣಗಳು ಎಷ್ಟು ಮತ್ತು ಅವುಗಳ ಮೊತ್ತ ಎಷ್ಟು;

(ಆ) ಸೈಬರ್ ಅಪರಾಧ ನಡೆದ ತಕ್ಷಣ ಪತ್ತೆಗೆ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಯಾವ ರೀತಿಯ ತಾಂತ್ರಿಕ ತರಬೇತಿ ಮತ್ತು ಸೌಲಭ್ಯ ನೀಡಲಾಗಿದೆ ; (ಮಾಹಿತಿ ನೀಡುವುದು)

(ಇ) ಸೈಬರ್ ವಂಚನೆ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೆರೆ ತುಂಬಿಸುವ ಯೋಜನೆಯ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮೧ (೪೨೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ರೈತರುಗಳಿಗೆ ಕೃಷಿ ಕಾರ್ಯಕೈಗೊಳ್ಳಲು ಹಾಗೂ ದನ ಕರುಗಳಿಗೆ ಮತ್ತು ಸಾರ್ವಜನಿಕರಿಗೆ ಕುಡಿಯುವ ನೀರು ಸಕಾಲದಲ್ಲಿ ಸಿಗುವಂತೆ ಮಾಡಲು ಕೆರೆಗಳನ್ನು ತುಂಬಿಸುವ ಯೋಜನೆಯ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಸದರಿ ಜಿಲ್ಲೆಗಳಲ್ಲಿ ಬೇಸಿಗೆಯಲ್ಲಿ ತೀವ್ರ ನೀರಿನ ಅಭಾವವಿರುವುದರಿಂದ ವಿಶೇಷ ಪ್ಯಾಕೇಜನ್ನು ಘೋಷಣೆ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಇ) ಸದರಿ ಜಿಲ್ಲೆಗಳಲ್ಲಿರುವ ಕೆರೆಗಳನ್ನು ತುಂಬಿಸಲು ಬೇಕಾಗಿರುವ ಅನುದಾನ ಎಷ್ಟು; ಮುಂಬರುವ ಆಯವ್ಯಯದಲ್ಲಿ ಅನುದಾನ ಕಾಯ್ದಿರಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಕಲಬುರಗಿ ಜಿಲ್ಲೆಯಲ್ಲಿರುವ ನಾರಾಯಣಪುರ ಜಲಾಶಯದಿಂದ ಕಾಲುವೆಗಳಿಗೆ ನೀರು ಹರಿಸುವ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮೨ (೪೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿರುವ ನಾರಾಯಣಪುರ ಜಲಾಶಯದಿಂದ ಕಾಲುವೆಗಳಿಗೆ ನೀರು ಹರಿಸುವುದನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಳೆಗಾಲ ಮುಗಿದ ನಂತರ ಬೆಳೆಗಳಿಗೆ ನೀರಿನ ಅಗತ್ಯವಿದ್ದು, ವಾರಾಬಂದಿ ಮಾಡುವುದರಿಂದ ರೈತರಿಗೆ ಯಾವುದೇ ಪ್ರಯೋಜನ ಆಗದೆ ಕಾಲುವೆಯ ಕೊನೆಯ ಭಾಗದ ರೈತರಿಗೆ ನೀರು ಸಿಗದಿರುವುದನ್ನು ಸರ್ಕಾರ ಗಮನಿಸಿದೆಯೇ ; ಬೇಸಿಗೆಯ ಬೆಳೆಗಳ ಬಿತ್ತನೆಗೆ ಮತ್ತು ಹಾಲಿ ಇರುವ ಬೆಳೆಗಳಿಗೆ ನೀರು ಹರಿಸುವುದು ರೈತರ ಹಿತದೃಷ್ಟಿಯಿಂದ ಅಗತ್ಯವಿದ್ದು, ನೀರು ಹರಿಸುವುದನ್ನು ಸರ್ಕಾರ ಮುಂದುವರೆಸಲು ಕ್ರಮ ಕೈಗೊಳುವುದೇ ? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿರುವ ನಾರಾಯಣಪುರ ಜಲಾಶಯದ ಕೆಳಭಾಗದಲ್ಲಿ ಬೃಂದಾವನ ಮಾದರಿಯ ಉದ್ಯಾನವನ ನಿರ್ಮಿಸುವ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮೩ (೪೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿರುವ ನಾರಾಯಣಪುರ ಜಲಾಶಯದ ಕೆಳಭಾಗದಲ್ಲಿ ಮೈಸೂರಿನ ಕೆ.ಆರ್.ಎಸ್ ಮತ್ತು ಆಲಮಟ್ಟಿಯ ಬೃಂದಾವನ ಮಾದರಿಯ ಉದ್ಯಾನವನ ನಿರ್ಮಿಸುವ ಯೋಜನೆ ಯಾವ ಹಂತದಲ್ಲಿದೆ ;

(ಆ) ಸದರಿ ಯೋಜನೆಯ ಸಂಕ್ಷಿಪ್ತ ವರದಿಯನ್ನು ತಯಾರಿಸಲಾಗಿದೆಯೇ ಮತ್ತು ಇದಕ್ಕೆ ತಗಲುವ ವೆಚ್ಚವೆಷ್ಟು ;

(ಇ) ಎಂದಿನಿಂದ ಉದ್ಯಾನವನದ ಕಾಮಗಾರಿಯನ್ನು ಕೈಗೊಳ್ಳಲಾಗುವುದು ಅಥವಾ ಉದ್ಯಾನವನವನ್ನು ನಿರ್ಮಿಸುವ ಯೋಜನೆಯನ್ನು ಸರ್ಕಾರ ಕೈಬಿಟ್ಟಿದೆಯೇ; ಬಿಟ್ಟಿದ್ದಲ್ಲಿ, ಯಾವ ಕಾರಣಕ್ಕೆ ಕೈಬಿಟ್ಟಿದೆ ; (ವಿವರ ನೀಡುವುದು)

(ಈ) ಕಾರಂಜಾ, ಬೆಣ್ಣೆತೋರಾ, ಮುಲ್ಲಾಮಾರಿ ಜಲಾಶಯಗಳ ಕೆಳಭಾಗದಲ್ಲಿ ಇಂತಹ ಉದ್ಯಾನವನಗಳನ್ನು ನಿರ್ಮಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮಧುಗಿರಿ ಏಕಶಿಲಾ ಬೆಟ್ಟಕ್ಕೆ ರೋಪ್–ವೇ (ಕೇಬಲ್ ಕಾರ್) ನಿರ್ಮಿಸುವ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆಯ ಕುರಿತು

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೪ (೫೦೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಧುಗಿರಿ ಏಕಶಿಲಾ ಬೆಟ್ಟಕ್ಕೆ ರೋಪ್–ವೇ (ಕೇಬಲ್ ಕಾರ್) ನಿರ್ಮಿಸುವ ಕಾಮಗಾರಿಯ ಟೆಂಡರ್ ಯಾವ ಹಂತದಲ್ಲಿದೆ ; ಇದ್ದಲ್ಲಿ ಟೆಂಡರ್ ಪ್ರಕ್ರಿಯೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಆ) ರೋಪ್–ವೇ (ಕೇಬಲ್ ಕಾರ್) ನಿರ್ಮಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯ ವಿಳಂಬಕ್ಕೆ ಕಾರಣವೇನು ;

(ಇ) ಮಧುಗಿರಿ ಏಕಶಿಲಾ ಬೆಟ್ಟಕ್ಕೆ (ಕೇಬಲ್ ಕಾರ್)ಯನ್ನು ಯಾವ ಕಾಲಮಿತಿಯೊಳಗೆ ರೋಪ್–ವೇ ಪೂರ್ಣಗೊಳಿಸಲಾಗುವುದು ?

## ಪ್ರವಾಸೋದ್ಯಮ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನ ಎಷ್ಟು

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೪೮೫ (೪೮೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವಾಸೋದ್ಯಮ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ; ಈ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನವು ಎಷ್ಟು;

(ಆ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ಫಲಾನುಭವಿಗಳಿಗೆ ಲಘು ವಾಹನ ಮಂಜೂರಾತಿ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲಾಗಿದೆ ;

(ಇ) ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ನೀಡಿರುವ ಯೋಜನೆಗಳು ಯಾವುವು ? (ಫಲಾನುಭವಿಗಳ ವಿವರ ನೀಡುವುದು)

## ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಈ ಸಾಲಿನಲ್ಲಿ ಸಣ್ಣ ನೀರಾವರಿ ಯೋಜನೆಯಡಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಕುರಿತು

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೪೮೬ (೪೯೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೊಂಡಿರುವ ಸಣ್ಣ ನೀರಾವರಿ ಯೋಜನೆಗಳು ಎಷ್ಟು; ಇವುಗಳ ಅನುಷ್ಠಾನಕ್ಕೆ ಸರ್ಕಾರ ನಿಗಧಿಪಡಿಸಿರುವ ಅನುದಾನ ಎಷ್ಟು;

(ಆ) ಮಧ್ಯ ಕರ್ನಾಟಕ ಹಾಗೂ ಗಡಿ ಭಾಗದ ಜಿಲ್ಲೆ ಕೋಲಾರ, ಚಿತ್ರದುರ್ಗ, ತುಮಕೂರು ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸುವಲ್ಲಿ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದೆ ?

## ಬಿ.ಬಿ.ಎಂ.ಪಿ ವ್ಯಾಪ್ತಿಗೆ ಸೇರುವ ಪ್ರದೇಶಗಳಾವುವು ತೆಗೆದುಕೊಂಡಿರುವ ಕ್ರಮಗಳ ಕುರಿತು

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೪೮೭ (೪೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಸೇರಿರುವ ಪ್ರದೇಶಗಳು ಯಾವುವು ;

(ಆ) ಬೆಂಗಳೂರು ಸುತ್ತಮುತ್ತಲು ಉಪನಗರಗಳನ್ನು ಸ್ಥಾಪಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ. ಯಾವ ಯಾವ ಪ್ರದೇಶದಲ್ಲಿ ಉಪನಗರಗಳನ್ನು ಸ್ಥಾಪಿಸಲಾಗುವುದು; ಇದರ ಉದ್ದೇಶ ಹಾಗೂ ವ್ಯಾಪ್ತಿ ಬಗ್ಗೆ ಮಾಹಿತಿ ನೀಡುವುದು ;

(ಇ) ಉಪನಗರಗಳನ್ನು ಸ್ಥಾಪಿಸಲು ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗುವುದು ;

(ಈ) ಉಪನಗರಗಳನ್ನು ಸ್ಥಾಪಿಸಿದಾಗ ಬಡವರಿಗೆ ಉಚಿತ ನಿವೇಶನ ನೀಡುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಹಾಗಿದ್ದಲ್ಲಿ ಅದರ ಮಾನದಂಡಗಳೇನು: ಹಾಗೂ ಕೈಗೊಂಡಿರುವ ಕ್ರಮಗಳೇನು ?

## ಚಿತ್ರದುರ್ಗ ಜಿಲ್ಲೆಗೆ ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ಅನುದಾನದ ಬಗ್ಗೆ

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೪೮೮ (೪೯೨) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಯಾವ ಯಾವ ನೀರಾವರಿ ಯೋಜನೆಗಳಡಿ ರೈತರ ಭೂಮಿಗೆ ನೀರು ಹರಿಸಲು ಕ್ರಮ ಜರುಗಿಸಲಾಗಿದೆ ;

(ಆ) ೨೦೨೪-೨೫ನೇ ಸಾಲಿನಲ್ಲಿ ಈ ಯೋಜನೆಗಳಿಗೆ ಸರ್ಕಾರವು ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನ ಎಷ್ಟು ;

(ಇ) ಅನುದಾನ ನಿಗದಿಪಡಿಸಿದ್ದಲ್ಲಿ ಈ ಯೋಜನೆಗಳನ್ನು ಕಾರ್ಯಗತಗೊಳಿಸಲು ಬೇಕಾಗುವ ಸಮಯ ಎಷ್ಟು ?

## ರಾಜ್ಯದ ಪರಿಶಿಷ್ಟ ಪಂಗಡ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನದ ಮಾಹಿತಿ

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೪೮೯ (೪೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಲ್ಲಿ ರಾಜ್ಯದ ಪರಿಶಿಷ್ಟ ಪಂಗಡಗಳ ಕಾಲೋನಿಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ಕಾಲೋನಿವಾರು ಕಾಮಗಾರಿವಾರು ವಿವರ ನೀಡುವುದು)

## ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲಾಕಿನಲ್ಲಿ ವಾಲ್ಮೀಕಿ ಭವನ ನಿರ್ಮಾಣ

**ಶ್ರೀ ಎ.ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೦ (೪೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ಜಾಲಹಳ್ಳಿ ಕಳೆದ ೧೩ ವರ್ಷಗಳಿಂದ ವಾಲ್ಮೀಕಿ ಭವನ ನಿರ್ಮಾಣ ಕಾಮಗಾರಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಇದೆಯೇ ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ವಾಲ್ಮೀಕಿ ಭವನ ನಿರ್ಮಾಣ ಕಾಮಗಾರಿ ಸಂಬಂಧ ಸ್ಥಳೀಯರು ಪ್ರತಿಭಟನೆ ಹೋರಾಟ ಮಾಡಿದ್ದರೂ ಸರ್ಕಾರ ಇನ್ನೂ ಕಾಮಗಾರಿ ಪೂರ್ತಿಗೊಳಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ. ಯಾವಾಗ ಕಾಮಗಾರಿ ಪೂರ್ತಿಗೊಳಿಸಲಾಗುವುದು ? (ವಿವರ ನೀಡುವುದು)

## ಸರ್ಕಾರದ ಸ್ವತ್ತುಗಳಲ್ಲಿ ಮಳೆಕೊಯ್ಲು ಕುರಿತು

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೧ (೪೯೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಸತತ ಮಳೆ ಸುರಿದು, ಸುರಿದ ಮಳೆ ನೀರನ್ನು ಸಂಗ್ರಹಿಸುವ ವ್ಯವಸ್ಥೆಯನ್ನು ಮಾಡಲು ಸರ್ಕಾರ ಚಿಂತಿಸಿದೆಯೇ ;

(ಆ) ಸರ್ಕಾರದ ಉದ್ಯಾನವನಗಳು ಕಟ್ಟಡಗಳ ತಳಮಟ್ಟದಲ್ಲಿ ಮಳೆ ನೀರನ್ನು ಸಂಗ್ರಹಿಸುವಂತಹ ಅಗಾಧ ಯೋಜನೆಯನ್ನು ರೂಪಿಸಲು ಸರ್ಕಾರ ಮುಂದಾಗುವುದೇ ;

(ಇ) ಮಳೆ ನೀರಿನ ಮರುಬಳಕೆ, ಅಂತರ್ಜಲ ಮಟ್ಟ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಗಂಭೀರವಾಗಿ ಯೋಚಿಸುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. O127/400 ಪ್ರತಿಗಳು/30-11-2024